ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 113
10–10–2025 ಶುಕ್ರವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 113

### ಮಡಿಕೇರಿ: ವಸತಿ ಶಾಲೆಯಲ್ಲಿ ಬೆಂಕಿ ಅನಾಹುತ;

## 2ನೇ ತರಗತಿ ವಿದ್ಯಾರ್ಥಿ ಪುಷ್ಪಕ್ ಸಜೀವ ದಹನ

**ಮಡಿಕೇರಿ:** ವಸತಿ ಶಾಲೆಯೊಂದರಲ್ಲಿ ಭೀಕರ ಅಗ್ನಿ ದುರಂತ ಸಂಭವಿಸಿದ್ದು, 2ನೇ ತರಗತಿ ವಿದ್ಯಾರ್ಥಿ ಮೃತಪಟ್ಟಿರುವ ಘಟನೆ ನಡೆದಿದೆ.



ವಸತಿ ಶಾಲೆಯ 2ನೇ ತರಗತಿ ವಿದ್ಯಾರ್ಥಿ ಪುಷ್ಪಕ್ ಮೃತಪಟ್ಟಿದ್ದಾನೆ. ಪುಷ್ಪಕ್ ಚೆಟ್ಟಿಮಾನಿ ನಿವಾಸಿ ಅನೀಲ್ ಅವರ ಪುತ್ರ ಎಂದು ತಿಳಿದುಬಂದಿದೆ.


ಕೊಡಗು ಜಿಲ್ಲೆಯ ಮಡಿಕೇರಿ ತಾಲೂಕಿನ ಕಾಟಗೇರಿ ಗ್ರಾಮದಲ್ಲಿ ಈ ದುರಂತ ಸಂಭವಿಸಿದೆ. ಬೆಳಗಿನ ನಾಲ್ಕು–ಐದು ಗಂಟೆ ವೇಳೆಗೆ ಶಾಲಾ ವಸತಿ ಗೃಹದಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಶಾಲೆಯ ವಸತಿ ಗೃಹದಲ್ಲಿ ಒಟ್ಟು 53 ಮಂದಿ ವಿದ್ಯಾರ್ಥಿಗಳು ವಾಸಿಸುತ್ತಿದ್ದು, ಅವರಲ್ಲಿ ಬಾಲಕ ದುರದೃಷ್ಟವಶಾತ್ ಸಜೀವ ದಹನವಾಗಿದ್ದಾನೆ.

ಅಗ್ನಿ ಕಾಣಿಸಿಕೊಂಡ ತಕ್ಷಣ ಸ್ಥಳೀಯರು ಹಾಗೂ ಶಾಲಾ ಸಿಬ್ಬಂದಿ ವಿದ್ಯಾರ್ಥಿಗಳನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಲು ಯತ್ನಿಸಿದರೂ, ಪುಷ್ಪಕ್ ಆ ಸಮಯದಲ್ಲಿ ಸಿಕ್ಕಿಹಾಕಿಕೊಂಡಿದ್ದಾನೆಂದು ಪ್ರಾಥಮಿಕ ಮಾಹಿತಿ ತಿಳಿಸಿದೆ.

ಅಗ್ನಿಶಾಮಕ ದಳದ ಸಿಬ್ಬಂದಿ ತಕ್ಷಣ ಸ್ಥಳಕ್ಕೆ ಧಾವಿಸಿ ಬೆಂಕಿಯನ್ನು ನಿಯಂತ್ರಣಕ್ಕೆ ತರಲು ಪ್ರಯತ್ನಿಸಿದರು. ಶಾರ್ಟ್ ಸರ್ಕ್ಯೂಟ್‌ನಿಂದ ಈ ಘಟನೆ ಸಂಭವಿಸಿದೆ ಎಂದು ತಿಳಿದು ಬಂದಿದೆ. ಘಟನೆ ನಡೆದ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಹೆಚ್ಚಿನ ಮಾಹಿತಿ ನಿರೀಕ್ಷಿಸಲಾಗಿದೆ. ವಸತಿ ಶಾಲೆಯ ಸುರಕ್ಷತಾ ಅಂಶಗಳನ್ನು ಪರಿಶೀಲಿಸಲಾಗುತ್ತಿದೆ.

## ಕುರುಬ ಸಮುದಾಯ ಎಸ್‌ಟಿಗೆ ಸೇರಿಸಲು ಶಿಫಾರಸು ಮಾಡಿದ್ದೇ ಸಿದ್ದರಾಮಯ್ಯ

**ಬೆಂಗಳೂರು,ಅ.9–** ಕುರುಬ ಸಮುದಾಯವನ್ನು ಎಸ್ಟಿ ಸಮುದಾಯಕ್ಕೆ ಸೇರಿಸಲು ಸಿದ್ದರಾಮಯ್ಯನವರ ಹಿಂದಿನ ಸರ್ಕಾರದ ಅವಧಿಯಲ್ಲಿ ಕೇಂದ್ರ–ಕ್ಕೆ ಪ್ರಸ್ತಾಪ ಹೋಗಿತ್ತು. ನಮ ಅವಧಿಯಲ್ಲಿ ಕುಲಶಾಸ್ತ್ರೀಯ ಅಧ್ಯಯನ ವರದಿ ಬಂದಿತ್ತು. ಈಗಿನ ಕಾಂಗ್ರೆಸ್ ಸರ್ಕಾರ ಅದನ್ನು ಪರಿಶೀಲನೆ ಮಾಡಿ 2023ರ ಜುಲೈ 20 ರಂದು ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಿದೆ. ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.



ಬೆಂಗಳೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕುರುಬ ಸಮುದಾಯವನ್ನು ಎಸ್ಟಿ ಸಮುದಾಯಕ್ಕೆ ಸೇರಿಸಲು ಸಿದ್ದರಾಮಯ್ಯ ಅವರ ಹಿಂದಿನ ಸರ್ಕಾರದ ಅವಧಿಯಲ್ಲಿ ಕೇಂದ್ರಕ್ಕೆ ಪ್ರಸ್ತಾಪ ಹೋಗಿತ್ತು. ಕುಲ ಶಾಸ್ತ್ರೀಯ ಅಧ್ಯಯನ ಮಾಡಿಸುವಂತೆ ವಾಪಸ್ ಬಂದಿತ್ತು. ಸಮಿಶ್ರ ಸರ್ಕಾರ ಕುಲಶಾಸ್ತ್ರೀಯ ಅಧ್ಯಯನ ನಡೆಸಲು ಆದೇಶ ಮಾಡಿತ್ತು.ನಮ ಅವಧಿಯಲ್ಲಿ ಕುಲಶಾಸ್ತ್ರಿಯ ಅಧ್ಯಯನ ವರದಿ ಬಂದಿತ್ತು. ಅದನ್ನು ನಮ ಸರ್ಕಾರ ಒಪ್ಪಿತ್ತು. ಚುನಾವಣೆ ಬಂದು ನಮ ಸರ್ಕಾರ ಹೋಯಿತು. ಈಗಿನ ಕಾಂಗ್ರೆಸ್ ಸರ್ಕಾರ ಅದನ್ನು ಪರಿಶೀಲನೆ ಮಾಡಿ 2023ರ ಜುಲೈ 20 ರಂದು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಿದೆ. ಸರ್ಕಾರ ದಾಖಲೆಗಳನ್ನು ತೆಗೆದು ನೋಡಲಿ. ಈಗ ಸಿದ್ದರಾಮಯ್ಯ ಅವರ ಕೈಯಲ್ಲಿ ಇದೆ ಅವರು ಏನು ತೀರ್ಮಾನ ತೆಗೆದುಕೊಳ್ಳುತ್ತಾರೆ ನೋಡಬೇಕು. ವಾಲೀಕಿ ಸಮುದಾಯ ಮತ್ತು ಕುರುಬರ ನಡುವೆ ಏನೂ ಸಮಸ್ಯೇ ಆಗುವುದಿಲ್ಲ. ಅಹಿಂದ ನಾಯಕ ಸಿದ್ದರಾಮಯ್ಯ ಅವರೇ ಇದ್ದಾರೆ. ಮೀಸಲಾತಿ ಹೆಚ್ಚಳ ಮಾಡುವುದು ಅಷ್ಟು ಸುಲಭವಿಲ್ಲ ಎಂದರು.

## ಕನಕಪುರ: ಮಾರಕಾಸ್ತ್ರಗಳಿಂದ ಕೊಚ್ಚಿ ರೌಡಿಯ ಭೀಕರ ಕೊಲೆ

**ಕನಕಪುರ,ಅ.9–** ಹಳೇ ವೈಷಮ್ಯದ ಹಿನ್ನೆಲೆಯಲ್ಲಿ ರೌಡಿಶೀಟರ್‌ನನ್ನು ಮಾರಕಾಸ್ತ್ರಗಳಿಂದ ಕೊಚ್ಚಿ ಭೀಕರವಾಗಿ ಕೊಲೆ ಮಾಡಿರುವ ಘಟನೆ ಕನಕಪುರ ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯ ಭದ್ರೇಗೌಡನದೊಡ್ಡಿ ನಡೆದಿದೆ. ಬೆಂಗಳುರು ಕೆಂಗೇರಿ ಬಳಿಯ ಹೆಮಿಗೆಪುರ ಗ್ರಾಮದ ಚಿರಂಜೀವಿ (25) ಕೊಲೆಯಾದ ರೌಡಿಶೀಟರ್.

ಈತ ಕಳೆದ ಒಂದು ವರ್ಷದ ಹಿಂದೆ ತಲಘಟ್ಟಪುರ ಪೊಲೀಸ್ ಠಾಣಾ ವ್ಯಾಪ್ತಿ ಕೊಲೆ ಪ್ರಕರಣದಲ್ಲಿ ಜೈಲವಾಸ ಅನುಭವಿಸಿ ಕಳೆದ 2 ತಿಂಗಳ ಹಿಂದೆ ಜಾಮೀನಿನ ಮೇಲೆ ಬಿಡುಗಡೆಯಾಗಿದ್ದ.

## ಬಿಗ್‌ಬಾಸ್ ಮನೆಗೆ ಸ್ಪರ್ಧಿಗಳು: ಎಂದಿನಂತೆ ಶೋ ಪ್ರಸಾರ

**ಬೆಂಗಳೂರು:** ಬಿಗ್‌ಬಾಸ್ ಮನೆಯ ಬೀಗ ತೆಗೆದ ಬೆನ್ನಲ್ಲೇ ಇಂದು ಮುಂಜಾನೆ ಬಿಡದಿಯ ಈಗಲ್ಟನ್ ರೆಸಾರ್ಟ್‌ನಿಂದ ಸ್ಪರ್ಧಿಗಳು ಮತ್ತೆ ಬಿಗ್ ಬಾಸ್ ಮನೆಗೆ ಆಗಮಿಸಿದ್ದಾರೆ. ಆಯೋಜಕರು ಕಾರಿನಲ್ಲಿ ಸ್ಪರ್ಧಿಗಳನ್ನು ಕರೆತಂದಿದ್ದಾರೆ. ಸ್ಪರ್ಧಿಗಳು ಮನೆ ಪ್ರವೇಶ ಮಾಡಿದ ಬೆನ್ನಲ್ಲೇ ವಾಹಿನಿ ಎಂದಿನಂತೆ ಅದೇ ಸಮಯಕ್ಕೆ ಶೋ ಪ್ರಸಾರವಾಗಲಿದೆ ಎಂದು ಪ್ರೋಮೋ ಬಿಡುಗಡೆ ಮಾಡಿದೆ.

ಬಿಗ್‌ಬಾಸ್ ಮನೆಗೆ ಬೆಂಗಳೂರು ದಕ್ಷಿಣ ಜಿಲ್ಲಾಡಳಿತ ಬೀಗ ಜಡಿದ ನಂತರ ಸ್ಪರ್ಧಿಗಳನ್ನು 6 ಕಿ.ಮೀ ದೂರದಲ್ಲಿರುವ ಈಗಲ್ಟನ್ ರೆಸಾರ್ಟ್‌ಗೆ ಶಿಫ್ಟ್ ಮಾಡಲಾಗಿತ್ತು. ಜಾಲಿವುಡ್ ಸ್ಟುಡಿಯೋ ಮಾಲಿನ್ಯ ನಿಯಮ ಪಾಲನೆ ಮಾಡದ್ದಕ್ಕೆ ಈ ರೆಸಾರ್ಟ್‌ಗೆ ನಿಮ್ಮನ್ನು ಕರೆತರಲಾಗಿದೆ ಎಂಬ ವಿಚಾರವನ್ನು ಆಯೋಜಕರು ಸ್ಪರ್ಧಿಗಳಿಗೆ ತಿಳಿಸಿದ್ದರು.

ರೆಸಾರ್ಟ್‌ನಲ್ಲೂ ಬಿಗ್ ಬಾಸ್ ನಿಯಮ ಅನ್ವಯವಾಗುತ್ತಿತ್ತು. ಯಾರ ಜೊತೆಯೂ ಸಂಪರ್ಕ ಇಟ್ಟುಕೊಳ್ಳುವಂತಿಲ್ಲ. ರೆಸಾರ್ಟ್ ಸಿಬ್ಬಂದಿಯ ಜೊತೆಯೂ ಮಾತುಕತೆ ಆಡುವಂತಿಲ್ಲ, ಊಟ, ತಿಂಡಿ ಇತ್ಯಾದಿಗಳನ್ನು ಕೋಣೆಗೆ ಕಳುಹಿಸಲಾಗುತ್ತಿದೆ.

# ಅನ್ನಭಾಗ್ಯ: 5 ಕೆಜಿ ಅಕ್ಕಿ ಬದಲು ಇಂದಿರಾ ಕಿಟ್ ವಿತರಣೆ

**ಬೆಂಗಳೂರು:** ರಾಜ್ಯ ಸರ್ಕಾರ ಅನ್ನಭಾಗ್ಯ ಯೋಜನೆಯಡಿ ಒಟ್ಟು 10 ಕೆಜಿ ಅಕ್ಕಿ ನೀಡುತ್ತಿದ್ದು, ಇನ್ನುಮುಂದೆ ಹೆಚ್ಚುವರಿಯಾಗಿ ನೀಡುತ್ತಿರುವ ಐದು ಕೆಜಿ ಅಕ್ಕಿ ಬದಲು ಇಂದಿರಾ ಆಹಾರ ಕಿಟ್ ವಿತರಣೆ ಮಾಡಲು ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನ ತೆಗೆದುಕೊಳ್ಳಲಾಗಿದೆ.

ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಕಾನೂನು ಸಚಿವ ಎಚ್.ಕೆ.ಪಾಟೀಲ್ ಅವರು, ಅನ್ನಭಾಗ್ಯ ಅಕ್ಕಿಯ ಅಕ್ರಮ ಸಾಗಾಟ, ಕಳ್ಳತನ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಇಂದಿರಾ ಆಹಾರ ಕಿಟ್ ನೀಡಲು ತೀರ್ಮಾನಿಸಲಾಗಿದೆ ಎಂದರು.

ಅನ್ನಭಾಗ್ಯ ಯೋಜನೆಯಡಿ ರಾಜ್ಯದ ಅಂತ್ಯೋದಯ ಮತ್ತು ಬಿಪಿಎಲ್ ಕಾರ್ಡುದಾರರಿಗೆ ಹೆಚ್ಚುವರಿಯಾಗಿ ನೀಡುತ್ತಿರುವ ಐದು ಕೆ.ಜಿ ಅಕ್ಕಿಯ ಬದಲಾಗಿ



61.19 ಕೋಟಿ ರೂ. ವೆಚ್ಚದಲ್ಲಿ ಇಂದಿರಾ ಆಹಾರ ಕಿಟ್ ನೀಡಲು ಸಚಿವ ಸಂಪುಟ ನಿರ್ಧಾರ ಕೈಗೊಂಡಿದೆ ಎಂದರು.

ಅನ್ನಭಾಗ್ಯ ಯೋಜನೆಯಡಿ 5 ಕೆ.ಜಿ ಹೆಚ್ಚುವರಿ ಅಕ್ಕಿ ನೀಡಲು ಆಯವ್ಯಯದಲ್ಲಿ ಹಂಚಿಕೆ ಮಾಡಿರುವ 6,426 ಕೋಟಿ ರೂ. ಅನುದಾನದಲ್ಲಿ 6119.52 ಕೋಟಿ ರೂ. ವೆಚ್ಚದಲ್ಲಿ ಇಂದಿರಾ ಆಹಾರ ಕಿಟ್ (ಪೌಷ್ಠಿಕ ಆಹಾರ ಕಿಟ್) ಒದಗಿಸಲು ಬಜೆಟ್ ಮರುಹಂಚಿಕೆ ಮಾಡಲು ಅನುಮೋದನೆ ನೀಡಲಾಗಿದೆ. ಇಂದಿರಾ ಕಿಟ್‌ನಲ್ಲಿ 1 ಕೆ.ಜಿ ತೊಗರಿ ಬೇಳೆ, 1 ಲೀಟರ್ ಅಡುಗೆ ಎಣ್ಣೆ, 1 ಕೆ.ಜಿ ಸಕ್ಕರೆ ಹಾಗೂ 1 ಕೆ.ಜಿ ಉಪ್ಪು ಇರಲಿದೆ ಎಂದು ಸಚಿವರು ತಿಳಿಸಿದರು.

ಇನ್ನು ಈ ಬಗ್ಗೆ ಮಾತನಾಡಿದ ಆಹಾರ ಸಚಿವ ಕೆ.ಎಚ್.ಮುನಿಯಪ್ಪ ಅವರು, ಕುಟುಂಬದಲ್ಲಿ ಒಬ್ಬರು, ಇಬ್ಬರು ಮಾತ್ರ ಇದ್ದರೆ ಅರ್ಧರ್ಧ ಕೆ.ಜಿ ಇರುವ ಕಿಟ್ ನೀಡಲಾಗುತ್ತದೆ. ಕುಟುಂಬದಲ್ಲಿ ಮೂರು ನಾಲ್ಕು ಮಂದಿ ಸದಸ್ಯರು ಇದ್ದರೆ ಒಂದೊಂದು

### ಸಂಪುಟ ಸಭೆಯಲ್ಲಿ ಮಹತ್ವದ ತೀರ್ಮಾನ

ಕೆ.ಜಿಯ ಕಿಟ್ ನೀಡಲಾಗುತ್ತದೆ. ಐದಕ್ಕಿಂತ ಹೆಚ್ಚು ಮಂದಿ ಸದಸ್ಯರು ಇದ್ದರೆ ಒಂದೂವರೆ ಕೆ.ಜಿ ಇರುವ ಕಿಟ್ ವಿತರಣೆ ಮಾಡಲಾಗುತ್ತದೆ. ಇದರಿಂದ 4,48,62,192 ಫಲಾನುಭವಿಗಳಿಗೆ ಅನುಕೂಲ ಆಗಲಿದೆ ಎಂದು ವಿವರಿಸಿದರು.

ಮೂಲಸೌಕರ್ಯ ಅಭಿವೃದ್ಧಿಯಲ್ಲಿ, ಮೊದಲ ಹಂತದಲ್ಲಿ 1,000 ಕೋಟಿ ರೂ. ಅಂದಾಜು ವೆಚ್ಚದಲ್ಲಿ 39 ಪ್ರಮುಖ ಸೇತುವೆಗಳ ಪುನರ್ನಿರ್ಮಾಣ ಮತ್ತು ಪುನರ್ವಸತಿಗೆ ಸಂಪುಟ ಅನುಮೋದನೆ ನೀಡಿದೆ. ಬಹುಮಹಡಿ ಕಟ್ಟಡಗಳಲ್ಲಿ ವಿಪತ್ತು ಪ್ರತಿಕ್ರಿಯೆ ಸಾಮರ್ಥ್ಯಗಳನ್ನು ಬಲಪಡಿಸಲು ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಗೆ 52–54 ಮೀಟರ್ ತಲುಪುವ ಸಾಮರ್ಥ್ಯವಿರುವ ವೈಮಾನಿಕ ಲ್ಯಾಡರ್ ಪ್ಲಾಟ್‌ಫಾರ್ಮ್ ವಾಹನ ಖರೀದಿಸಲು 16 ಕೋಟಿ ರೂ. ಅಂದಾಜು ವೆಚ್ಚಕ್ಕೆ ಅನುಮೋದನೆ ನೀಡಲಾಯಿತು.

ಕನಕಪುರದಲ್ಲಿ ವೈದ್ಯಕೀಯ ಕಾಲೇಜ್

ಕನಕಪುರದಲ್ಲಿ ಸ್ವಾಯತ್ತ ಸ್ಥಾನಮಾನ ಮತ್ತು ವಾರ್ಷಿಕ 150 ವಿದ್ಯಾರ್ಥಿಗಳ ಪ್ರವೇಶದೊಂದಿಗೆ ಹೊಸ ವೈದ್ಯಕೀಯ ಕಾಲೇಜು ಸ್ಥಾಪನೆಗೆ ಸಂಪುಟ ಅನುಮೋದನೆ ನೀಡಿದೆ.

550 ಕೋಟಿ ರೂ. ವೆಚ್ಚದ ಈ ಯೋಜನೆಯಲ್ಲಿ ಕಾಲೇಜು ಕಟ್ಟಡಗಳು, 300 ಹಾಸಿಗೆಗಳ ವೈದ್ಯಕೀಯ ಕಾಲೇಜ್ ಆಸ್ಪತ್ರೆ, ಹಾಸ್ಟೆಲ್‌ಗಳು, ಸಿಬ್ಬಂದಿ ವಸತಿಗೃಹಗಳು ಮತ್ತು ಸಂಬಂಧಿತ ಸೌಲಭ್ಯಗಳು ಸೇರಿವೆ.

### ಸಂಸದರಿಂದ ದಿಶಾ ಸಮಿತಿ ಸಭೆ

# ಅಪಘಾತಗೊಂಡವರಿಗೆ ಪ್ರಥಮಾಧ್ಯತೆ ಪ್ರಥಮ ಚಿಕಿತ್ಸೆ ನೀಡಲು ಸಹಕರಿಸಿ : ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್



**ದಾವಣಗೆರೆ :** ಇತ್ತೀಚಿನ ದಿನಗಳಲ್ಲಿ ರಸ್ತೆ ಅಪಘಾತಗಳು ಹೆಚ್ಚಾಗುತ್ತಿದ್ದು, ಸಾರ್ವಜನಿಕರಲ್ಲಿ ರಸ್ತೆ ಸುರಕ್ಷತೆ ಬಗ್ಗೆ ಹೆಚ್ಚಿನ ಅರಿವು ಮೂಡಿಸಬೇಕು. ಅಪಘಾತಕ್ಕೊಳಗಾದವರಿಗೆ ಗೋಲ್ಡನ್ ಅವರ್ ಆಗಿರುತ್ತದೆ. ಅಂತವರಿಗೆ ಪ್ರಥಮ ಚಿಕಿತ್ಸೆ ನೀಡಲು ಸಹಕರಿಸಿ ಜೀವ ಉಳಿಸಬೇಕು. ಒಂದು ವೇಳೆ ತಡವಾದಲ್ಲಿ ಚಿಕಿತ್ಸೆ ಫಲಕಾರಿಯಾಗದೆ ಜೀವ ಕಳೆದುಕೊಳ್ಳುವ ಸಾಧ್ಯತೆ ಇರುತ್ತದೆ ಎಂದು ಲೋಕಸಭಾ ಸದಸ್ಯೆ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರು ತಿಳಿಸಿದರು.

ಅವರು ಗುರುವಾರ ಜಿಲ್ಲಾ ಪಂಚಾಯಿತ್‌ನ ಎಸ್.ಎಸ್.ಮಲ್ಲಿಕಾರ್ಜುನ ಸಭಾಂಗಣದಲ್ಲಿ ಆಯೋಜಿಸಿದ್ದ ದಿಶಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ನಗರ ಪ್ರದೇಶಗಳಲ್ಲಿ ಬೀದಿ ದೀಪಗಳು ಹಾಳಾಗಿದ್ದು, ಇದರಿಂದ ಶಾಲಾ ಮಕ್ಕಳಿಗೆ, ಮಹಿಳೆಯರಿಗೆ, ಸಾರ್ವಜನಿಕರಿಗೆ ರಾತ್ರಿ ಸಮಯದಲ್ಲಿ ಭಯ ಭೀತಿಯಿಂದ ಸಂಚರಿಸುವಂತಾಗಿದೆ. ಆದ್ದರಿಂದ ಸಂಬಂಧಿಸಿದ ಇಲಾಖೆಯವರು ತ್ವರಿತವಾಗಿ ಬೀದಿ ದೀಪಗಳನ್ನು ದುರಸ್ತಿಗೊಳಿಸಿ, ಮುಕ್ತ ಸಂಚಾರಕ್ಕೆ ಅನುವು ಮಾಡಿಕೊಡುವಂತೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ತಾಕೀತು ಮಾಡಿದರು.

ಬಹುಗ್ರಾಮ ಕುಡಿಯುವ ನೀರು ಯೋಜನೆಯಡಿ 846 ಕಾಮಗಾರಿಗಳ ಗುರಿ ಹೊಂದಿದ್ದು, ಜೂನ್ ಅಂತ್ಯಕ್ಕೆ 676 ಕಾಮಗಾರಿಗಳು ಪೂರ್ಣಗೊಂಡು, 146 ಕಾಮಗಾರಿ ಪ್ರಗತಿಯಲ್ಲಿವೆ. ಇನ್ನುಳಿದ ಕಾಮಗಾರಿಗಳನ್ನು ತ್ವರಿತವಾಗಿ ನಿಗದಿತ ಸಮಯದೊಳಗೆ ಪೂರ್ಣಗೊಳಿಸಲು ಶುದ್ಧ ಹಾಗೂ ಸುಸ್ಥಿರ ನೀರು ಒದಗಿಸುವಂತೆ ಅಧಿಕಾರಿಗಳಿಗೆ ತಿಳಿಸಿದರು.

ಎನ್.ಆರ್.ಎಲ್.ಎಂ ಯೋಜನೆಯಡಿ ಸ್ವ–ಸಹಾಯ ಸಂಘಗಳ ಮಹಿಳೆಯರು ತಯಾರಿಸುತ್ತಿರುವ ಬೆಡ್‌ಶೀಟ್ , ಬಟ್ಟೆ , ಫಿನಾಯಲ್, ಸಿರಿಧ್ಯಾನ ತಿಂಡಿ ತಿನಿಸುಗಳು, ಬ್ಯಾಗ್ , ಟೀ ಲೋಟ, ಚಟ್ನಿಪುಡಿ , ಉಪ್ಪಿನ ಕಾಯಿ , ಅಡುಗೆ ಪದಾರ್ಥಗಳು , ಕರಕುಶಲ ವಸ್ತುಗಳು, ಆಟಿಕೆ ಗೊಂಬೆ, ಇನ್ನಿತರೆ ಗೃಹೋಪಯೋಗಿ ವಸ್ತುಗಳನ್ನು ತಯಾರಿಸಲಾಗುತ್ತಿದೆ. ಅವರಿಗೆ ಸೂಕ್ತ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸಿ ಆರ್ಥಿಕವಾಗಿ ಸಬಲೀಕರಣಗೊಳಿಸಬೇಕು. ಸರ್ಕಾರದ ಯಾವುದೇ ಸಭೆ, ಸಮಾರಂಭಗಳಿಗೆ ಎಸ್‌ಹೆಚ್‌ಜಿ ಸಂಘಗಳಿಂದ ತಯಾರಿಸಿದ ವಸ್ತುಗಳನ್ನು ಖರೀದಿಸಿ, ಮಹಿಳಾ ಸ್ವ ಸಹಾಯ ಸಂಘ ಸಂಸ್ಥೆಗಳನ್ನು ಆರ್ಥಿಕವಾಗಿ ಸ್ವಾವಲಂಬಿಗಳನ್ನಾಗಿಸುವ ಜೊತೆಗೆ ಅವರ ಕಾಯಕಕ್ಕೆ ಮತ್ತಷ್ಟು ಉತ್ತೇಜನ ನೀಡಬೇಕು ಎಂದರು.

**ತಾಯಿ ಮತ್ತು ಶಿಶು ಮರಣ ದರ ಶೂನ್ಯಕ್ಕೆ ತರಲು ಸೂಚನೆ:** ಜಿಲ್ಲೆಯಲ್ಲಿ ತಾಯಿ ಮತ್ತು ಶಿಶು ಮರಣವನ್ನು ತಡೆಗಟ್ಟುವಿಕೆಗೆ ಹಲವಾರು ಅಗತ್ಯ ಕ್ರಮಗಳನ್ನು ಕೈಗೊಂಡ ಪರಿಣಾಮ ಸಾಕಷ್ಟು ತಾಯಿ ಮತ್ತು ಶಿಶು ಮರಣ ಪ್ರಮಾಣ ಸುಧಾರಿಸಿದೆ. ಆದರೂ ಅಧಿಕಾರಿಗಳು ಜಿಲ್ಲೆಯಲ್ಲಿ ತಾಯಿ ಮತ್ತು ಶಿಶು ಮರಣ ಪ್ರಮಾಣವನ್ನು ಶೂನ್ಯಕ್ಕೆ ತರುವಲ್ಲಿ ಮತ್ತಷ್ಟು ಮುನ್ನೆಚ್ಚರಿಕೆ ಕ್ರಮವಹಿಸಬೇಕು. ತಾಯಂದಿರ ಮರಣ ಮತ್ತು ಶಿಶು ಮರಣ ಪ್ರಮಾಣವನ್ನು ಶೂನ್ಯಕ್ಕೆ ತರುವ ನಿಟ್ಟಿನಲ್ಲಿ ಅಧಿಕಾರಿಗಳು ಕಾರ್ಯ ಪ್ರವೃತ್ತರಾಗಬೇಕಿದೆ ಎಂದು ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿಗಳಿಗೆ ಸಂಸದರು ತಿಳಿಸಿದರು.

ಜಿಲ್ಲೆಯ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು ಮತ್ತು ಶೌಚಾಲಯ ಕಡ್ಡಾಯವಾಗಿ ಹೊಂದಿರಬೇಕು. ಶೌಚಾಲಯ ಹೊಂದಿರದ ಅಥವಾ ದುರಸ್ತಿಯಾಗಿರುವ ಶೌಚಾಲಯಗಳನ್ನು ಸಂಬಂಧಪಟ್ಟ ಶಾಲೆಗಳ ಆಡಳಿತ ಮಂಡಳಿಯಿಂದ ಹಾಗೂ ಸ್ಥಳೀಯ ಆಡಳಿತ ಸಂಸ್ಥೆಯಿಂದ ದುರಸ್ಥಿಪಡಿಸಿ ಮಕ್ಕಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವಂತೆ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಿಗೆ ಸೂಚನೆ ನೀಡಿದರು.

ಜಿಲ್ಲೆಗೆ ವಿಧ್ಯಾಭ್ಯಾಸಕ್ಕಾಗಿ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಬರುತ್ತಿದ್ದು ವಸತಿ ನಿಲಯಗಳ ಕೊರತೆ ಉಂಟಾಗಿದೆ. ಆದುದರಿಂದ ಸಮಾಜ ಕಲ್ಯಾಣ ಇಲಾಖಾ ವತಿಯಿಂದ ಐದು ವಸತಿ ನಿಲಯ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಮೂರು ವಸತಿ ನಿಲಯಗಳು ಮತ್ತು ಪರಿಶಿಷ್ಟ ಪಂಗಡದ ಎರಡು ವಸತಿ ನಿಲಯಗಳಿಗೆ ಮಂಜೂರಾತಿ ನೀಡುವಂತೆ ಪ್ರಸ್ತಾವನೆಯನ್ನು ಸಲ್ಲಿಸಿರುವುದಾಗಿ ತಿಳಿಸಿದರು.

ಜಿಲ್ಲೆಯಲ್ಲಿರುವ ವಿಶೇಷ ಚೇತನರ ಗುರುತಿಸಿ, ಅದರಲ್ಲಿ ಪದವಿ ಪಡೆದ ಅರ್ಹ ವಿಶೇಷಚೇತನರಿಗೆ ಕೌಶಲ್ಯ ತರಬೇತಿ ನೀಡಿ, ಸಾಮರ್ಥ್ಯಕ್ಕೆ ಅನುಗುಣವಾಗಿ ಉದ್ಯೋಗ ನೀಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶಿಸಿದರು. ಇದೇ ಸಂದರ್ಭದಲ್ಲಿ ಸ್ವ–ಸಹಾಯ ಸಂಘದ ಮಹಿಳೆಯರ ಸಬಲೀಸಕರಣಗೊಳಿಸಲು ದೀಪ ಸಂಜೀವಿನಿ ಬಿತ್ತಿ ಪತ್ರವನ್ನು ಬಿಡುಗಡೆ ಮಾಡಿದರು.

ಹೊನ್ನಾಳಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಶಾಂತನಗೌಡ, ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರ ಸ್ವಾಮಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಗಿತ್ತೆ ಮಾಧವ ವಿಠ್ಠಲ್‌ರಾವ್, ಅಪರ ಜಿಲ್ಲಾಧಿಕಾರಿ ಎಸ್.ಶಿವಕುಮಾರ್ ಹಾಗೂ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ದಿಶಾ ಸಮಿತಿ ಸದಸ್ಯರುಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ವಸತಿ ಭದ್ರತೆ, ನ್ಯಾಯ ಪರಿಹಾರಕ್ಕೆ ಒತ್ತಾಯಿಸಿ ದಲಿತ ಸಂಘರ್ಷ ಸಮಿತಿಯಿಂದ ಧರಣಿ ಸತ್ಯಾಗ್ರಹ

**ದಾವಣಗೆರೆ.ಅ.9:** ದಾವಣಗೆರೆ ಮಹಾ ನಗರ ಪಾಲಿಕೆ ವ್ಯಾಪ್ತಿಯ ಆವರಗೆರೆ ದನವಿನ ಓಣಿ ಗೋಮಾಳದಲ್ಲಿ ವಸತಿ ನಿವೇಶನ ರಹಿತ ನಿರಾಶ್ರಿತರ ಗುಡಿಸಲುಗಳ ತೆರವು ಕಾರ್ಯಾಚರಣೆಯಿಂದ ಬೀದಿ ಪಾಲಾಗಿರುವ ಸಂತ್ರಸ್ತರಿಗೆ ವಸತಿ ಭದ್ರತೆ, ನ್ಯಾಯ ಪರಿಹಾರಕ್ಕೆ ಒತ್ತಾಯಿಸಿ ದಲಿತ ಸಂಘರ್ಷ ಸಮಿತಿ ವತಿಯಿಂದ ನಗರದ ಎಸಿ ಕಚೇರಿ ಮುಂಭಾಗ ಧರಣಿ ಸತ್ಯಾಗ್ರಹ ನಡೆಸಲಾಯಿತು.

ಗುರುವಾರ ಎಸಿ ಕಚೇರಿ ಮುಂಭಾಗ ಸಮಿತಿ ಸದಸ್ಯರು ಹಾಗೂ ಆವರಗೆರೆ ದನವಿನ ಓಣಿ ಗೋಮಾಳದಲ್ಲಿ ವಸತಿ ನಿವೇಶನ ರಹಿತ ನಿರಾಶ್ರಿತರು ಧರಣಿ ಸತ್ಯಾಗ್ರಹ ನಡೆಸಿ ಉಪವಿಭಾಗಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಈ ವೇಳೆ ಸಮಿತಿ ರಾಜ್ಯ ಸಂಚಾಲಕ ಹೆಚ್ ಮಲ್ಲೇಶ್ ಮಾತನಾಡಿ ಕಳೆದ 2022 ರಂದು ಬೆಳಗಿನ ಜಾವ 2 ಗಂಟೆ ಸಮಯದಲ್ಲಿ ಆವರಗೆರೆ ದನವಿನ ಓಣಿ ಗೋಮಾಳದಲ್ಲಿ ವಸತಿ ನಿವೇಶನ ರಹಿತ ನಿರಾಶ್ರಿತರು ನಿರ್ಮಿಸಿಕೊಂಡಿದ್ದ 250–300 ಬಡ ಕುಟುಂಬಗಳ ಗುಡಿಸಲುಗಳನ್ನು ನೆಲ ಸಮಗೊಳಿಸುವ ಮೂಲಕ ಯಾವುದೇ ಮಾಹಿತಿ ಸೂಚನೆ ನೀಡದೆ ಜಿಲ್ಲಾಧಿಕಾರಿಗಳವರ ಮೌಖಿಕ ನಿರ್ದೇಶನದಂತೆ ದಾವಣಗೆರೆ ಮಹಾನಗರ ಪಾಲಿಕೆ ಆಯುಕ್ತರು, ತಾಲ್ಲೂಕು ತಹಶೀಲ್ದಾರವರು ತಮ್ಮ ಸಿಬ್ಬಂದಿಯೊಂದಿಗೆ ಪೊಲೀಸ್ ಬಲಪ್ರಯೋಗಿಸಿ ಸರ್ಕಾರದ ಜೆಸಿಬಿ ಯಂತ್ರ ಟ್ರಾಕ್ಟರ್ ಮೂಲಕ ಧ್ವಂಸಗೊಳಿಸಿ ಅಮಾಯಕರನ್ನು ಬೀದಿ ಪಾಲು ಮಾಡಿರುತ್ತಾರೆ ಎಂದರು. ಆನಂತರ ನಮ್ಮ ಉಗ್ರ ಹೋರಾಟದ ಫಲವಾಗಿ ಕೆಲವರಿಗೆ ನಿವೇಶನದ ಹಕ್ಕು ಪತ್ರ ನೀಡಲಾಗಿದ್ದು, ಇನ್ನೂ ಕೆಲವರಿಗೆ ನೀಡಿಲ್ಲ ಎಂದರು.

ಪ್ರಸ್ತುತ ಅದೇ ದನವಿನ ಓಣಿ ಸೇರಿದಂತೆ ಅಲ್ಲಲ್ಲಿ ಅನುಕೂಲ ಸ್ಥಳದಲ್ಲಿ ವಾಸವಾಗಿರುವ ಸಂತ್ರಸ್ತರಿಗೆ ಪುನಃ ಒಕ್ಕಲೆಬ್ಬಿಸುವ ಹುನ್ನಾರ ಮುಂದುವರೆದಿರುತ್ತದೆ. ವಸತಿ ರಹಿತರ ವಿಚಾರಕ್ಕೆ ಸರ್ಕಾರದ ಸರಿಯಾದ ಯೋಜನೆ ಮತ್ತು ಆಧ್ಯತೆ ಇಲ್ಲದಿರುವುದರಿಂದ ಕುಟುಂಬಗಳು ಬೆಳೆದಂತೆ ವಾಸಕ್ಕೆ ಜಾಗ ಸಾಕಾಗದೆ ಕುಟುಂಬ ದೊಳಗೆ ಆಂತರಿಕ ಕಲಹ ಉಂಟಾಗುತ್ತಿದೆ. ವಸತಿ ರಹಿತ ಸಂತ್ರಸ್ತರಿಗೆ ವಸತಿಯನ್ನು ಮೂಲಭೂತ ಹಕ್ಕಾಗಿ ಪರಿಗಣಿಸಿ ಗೌರವಯುತ ಬದುಕು ಕಟ್ಟಿಕೊಳ್ಳಲು ಸಾಮಾಜಿಕ ನ್ಯಾಯ ರಕ್ಷಣೆಗೆ ಒತ್ತಾಯಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿ (ರಿ.) (ಡಾ. ಅಂಬೇಡ್ಕರ್ ವಾದ) ದಾವಣಗೆರೆ ಜಿಲ್ಲಾ ಸಮಿತಿ ಮತ್ತು ತಾಲ್ಲೂಕು ಸಮಿತಿ ಆಶ್ರಯದಲ್ಲಿ ಧರಣಿ ಸತ್ಯಾಗ್ರಹ ಮೂಲಕ ಸರ್ಕಾರಕ್ಕೆ ಮನವಿ ಮಾಡುತ್ತಿದ್ದೇವೆ ಎಂದರು.

## ಅತ್ಯಾಚಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ವಿವಿಧ ಮಹಿಳಾ ಸಂಘ ಗಳಿಂದ ಪ್ರತಿಭಟನೆ

**ದಾವಣಗೆರೆ:ಅ.9:** ಧರ್ಮಸ್ಥಳ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಮಹಿಳೆಯರನ್ನು ಅತ್ಯಾಚಾರ ಮಾಡಿ ಕೊಲೆಗೈದವರನ್ನು ಪತ್ತೆ ಹಚ್ಚಿ ಅವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಅಖಿಲ ಭಾರತ ರಾಷ್ಟ್ರೀಯ ಮಹಿಳಾ ಒಕ್ಕೂಟ, ನೆರಳು ಬೀಡಿ ಕಾರ್ಮಿಕರ ಸಂಘ, ಮಹಿಳಾ ಮುನ್ನಡೆ ಸಂಘಟನೆಗಳ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಯಿತು.

ಗುರುವಾರ ನಗರದ ಜಯದೇವ ವೃತ್ತದಲ್ಲಿ ಜಿಲ್ಲೆಯ ವಿವಿಧ ಮಹಿಳಾ ಸಂಘಟನೆಗಳ ನೇತೃತ್ವದಲ್ಲಿ ಮಹಿಳೆಯರ ಮೇಲೆ ನಡೆದ ಅತ್ಯಾಚಾರ, ಹತ್ಯೆ ಪ್ರಕರಣದ ಆರೋಪಿಗಳನ್ನು ಪತ್ತೆ ಮಾಡುವಂತೆ ಒತ್ತಾಯಿಸಿ ಘೋಷಣೆ ಕೂಗಲಾಯಿತು.

ಈ ವೇಳೆ ಸಂಘಟನೆ ಮುಖಂಡರು ಮಾತನಾಡಿ, ಧರ್ಮಸ್ಥಳ ಮತ್ತು ಸುತ್ತಲಿನ ಪ್ರದೇಶದಲ್ಲಿ ಕಳೆದ 2 ದಶಕಗಳಿಂದಲೂ ಹೋರಾಟ ನಡೆಸುತ್ತಿರುವ ಸಂತ್ರಸ್ಥರ ಕುಟುಂ ಬಗಳಿಗೆ ನ್ಯಾಯವನ್ನು ಒದಗಿಸುವ ಕೆಲಸ ಆಗಬೇಕು. ಕಳೆದ 4–5 ದಶಕದಿಂದಲೂ ಮಹಿಳೆಯರ ಹಕ್ಕುಗಳು, ಮಹಿಳೆಯರ ಘನತೆಗಾಗಿ ನಿರಂತರ ಹೋರಾಟ ನಡೆಸುತ್ತಿರು ವ ಸಂಘಟನೆಗಳು ಇದೀಗ ಹೋರಾಟವನ್ನು ಚುರುಕುಗೊಳಿಸಿವೆ. ಸರ್ಕಾರವನ್ನು ಪ್ರಶ್ನಿಸುವ ಮೂಲಕ ಧರ್ಮಸ್ಥಳ ಮತ್ತು ಅಲ್ಲಿನ ಪರಿಸರದಲ್ಲಿ ಹತ್ಯೆಯಾದ ವೇದವಲ್ಲಿ, ಪದ್ಮಲತಾ, ಯಮುನಾ, ನಾರಾಯಣ, ಸೌಜನ್ಯರ ಅತ್ಯಾಚಾರ ಮತ್ತು ಕೊಲೆ ಇವುಗಳಷ್ಟೇ ಅಲ್ಲದೇ, ಅಲ್ಲಿ ನೂರಾರು ಮಹಿಳೆಯರು, ಯುವತಿಯರ ಅಸಹಜ ಸಾವುಗಳು ಸಹ ಸಂಭವಿಸಿವೆ. ಮಹಿಳೆಯರು ಮತ್ತು ಮಕ್ಕಳ ಮೇಲಿನ ದೌರ್ಜನ್ಯವ ನ್ನು ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರ ಮುಂದಾಗಬೇಕು ಎಂದು ಅವರು ತಾಕೀತು ಮಾಡಿದರು. ಸಂಘಟನೆಗಳ ಮುಖಂಡರಾದ ಸರೋಜ, ನಿರ್ಮಲಾ, ಮಂಜುಳಾ, ಹೊಸಳ್ಳಿ ಗೀತಾ, ಹುಲಿಗೆಮ್ಮ, ರಮೀಜಾ ಬೀ, ಪಾಪಮ್ಮ, ಲತಾ, ಪ್ರೇಮಾ ಬಾಯಿ, ನೆರಳು ಸಂಘಟನೆಯ ಜಬೀನಾ ಖಾನಂ, ಎಂ.ಕರಿಬಸಪ್ಪ, ನಾಜಿಮಾ, ನೂರ್ ಫಾತಿಮಾ, ಜಮೀರ್ ಉನ್ನೀಸಾ, ರೇಷ್ಮಾ, ಬದ್ರೂನ್, ಸೈಯದ್ ಸಲ್ಮಾ, ಕಾರ್ಮಿಕ ಮುಖಂಡರಾದ ಆವರಗೆರೆ ಚಂದ್ರು, ಆವರಗೆರೆ ಯಿಎಚ್.ಜಿ.ಉಮೇಶ, ಇಫ್ಟಾದ ಐರಣಿ ಚಂದ್ರು, ಎ.ತಿಪ್ಪೇಶ ರಾಜು, ಯಲ್ಲಪ್ಪ, ಶೇಖರ ನಾಯ್ಕ, ಸತೀಶ ಅರವಿಂದ ಇತರರು ಇದ್ದರು.

# ನ್ಯಾಯಮೂರ್ತಿ ಬಿ.ಆರ್.ಗವಾಯಿ ಅವರಮೇಲೆ ಶೂ ಎಸೆತದ ಘಟನೆ ಖಂಡಿಸಿ ವಕೀಲ ಸಂಘದಿಂದ ಮನವಿ

**ಜಗಳೂರು :**, ಸುಪ್ರೀಂ ಕೋರ್ಟ್ ನ್ಯಾಯಮೂರ್ತಿಗಳ ಮೇಲೆ ನಡೆದಿರುವ ಶೂ ಎಸೆಯುವ ಪ್ರಯತ್ನ ಕೇವಲ ವ್ಯಕ್ತಿಯ ಮೇಲೆ ನಡೆದ ಘಟನೆಯಲ್ಲ. ಸಂವಿಧಾನ, ಪ್ರಜಾಪ್ರಭುತ್ವ ಮೌಲ್ಯಗಳ ಮೇಲಿನ ದಾಳಿಗೆ ಸಾಕ್ಷಿಯಾಗಿದ್ದು, ಕೂಡಲೇ ನ್ಯಾಯವಾದಿ ರಾಕೇಶ್ ಕಿಶೋರ್ ಅವರನ್ನು ಬಾರ್ ಕೌನ್ಸಿಲ್‌ನಿಂದ ರದ್ದುಪಡಿಸಿ ಕಾನೂನಿನಡಿ ಬಂಧಿಸಬೇಕು ಎಂದು ವಕೀಲರ ಸಂಘದ ತಾಲ್ಲೂಕು ಅಧ್ಯಕ್ಷ ಮರೇನಹಳ್ಳಿ ಟಿ. ಬಸವರಾಜ್ ಒತ್ತಾಯಿಸಿದರು.

ಸರ್ವೋಚ್ಛ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಗಳಾದ ಬಿ.ಆರ್.ಗವಾಯಿ ಅವರ ಮೇಲೆ ನ್ಯಾಯವಾದಿ ರಾಕೇಶ್ ಕಿಶೋರ್ ನ್ಯಾಯಾಲಯ ಕಲಾಪದ ವೇಳೆ ಶೂ ಎಸೆಯಲು ಪ್ರಯತ್ನಿಸಿರುವುದನ್ನು ಖಂಡಿಸಿ ಜಗಳೂರು ಪಟ್ಟಣದಲ್ಲಿ ತಾಲ್ಲೂಕು ವಕೀಲರ ಸಂಘದಿಂದ ತಹಶೀಲ್ದಾರ್ ಸೈಯದ್ ಕಲೀಂ ಉಲ್ಲಾ ಅವರಿಗೆ ಮನವಿ ಸಲ್ಲಿಸಿ ಅವರು ಮಾತನಾಡಿದರು.



ಓರ್ವ ದಲಿತ ವ್ಯಕ್ತಿ ಉನ್ನತ ಹುದ್ದೆ ಅಲಂಕರಿಸಿರುವುದನ್ನು ಸಹಿಸದೆ ಜಾತಿ ಆಧಾರಿತ ಅಸಹನೆ ಮತ್ತು ದ್ವೇಷವನ್ನು ಸ್ಪಷ್ಟಪಡಿಸುತ್ತದೆ ಎಂದವರು ಹೇಳಿದರು.

ಹಿರಿಯ ವಕೀಲ ಡಿ.ಶ್ರೀನಿವಾಸ್ ಮಾತನಾಡಿ, ನ್ಯಾಯಮೂರ್ತಿ ಬಿ.ಆರ್.ಗವಾಯಿ ಪ್ರಜಾಪ್ರಭುತ್ವ ಆಶಯಗಳ ಪ್ರತಿಪಾದಕರಾಗಿದ್ದು ಅವರ ಮೇಲೆ ಶೂ ಎಸೆಯುವ ಪ್ರಯತ್ನದ ಘಟನೆಗೂ ದೇಶದಲ್ಲಿ ಮೂರು ಸಾವಿರ ವರ್ಷಗಳ ಇತಿಹಾಸದಲ್ಲಿ ಪಟ್ಟಭದ್ರ ಹಿತಾಸಕ್ತಿಗಳು ಆಚರಿಸುತ್ತಿದ್ದ ಮನುಸ್ಮೃತಿ ಗೂ ಹಿನ್ನೆಲೆಯಿದೆ. ಮನುವಾದಿಗಳು ದಲಿತರು, ಅಸ್ಪೃಶ್ಯರನ್ನು ಪ್ರಾಣಿಗಳಿಗಿಂತ ಕೀಳಾಗಿ ಕಾಣುತ್ತಿದ್ದರು. ಇದಕ್ಕೆ ಸಂವಿಧಾನ ಶಿಲ್ಪಿ ಅಂಬೇಡ್ಕರ್ ಅವರು ಚುಚ್ಚುಮದ್ದನ್ನು ನೀಡಿದ್ದಾರೆ. ಸಂವಿಧಾನದಡಿ ಎಲ್ಲಾ ವರ್ಗದವರಿಗೂ ಸಿಗುತ್ತಿರುವ ಸಮಾನತೆ, ಸಾಮಾಜಿಕ ನ್ಯಾಯವನ್ನು ದಮನಗೊಳಿಸುವ ಹುನ್ನಾರ ನಡೆಯುತ್ತಿದೆ ಎಂದು ಆರೋಪಿಸಿದರು.

ತಹಶೀಲ್ದಾರ್ ಸೈಯದ್ ಕಲೀಂ ಉಲ್ಲಾ ಮನವಿ ಸ್ವೀಕರಿಸಿ ಮಾತನಾಡಿ, ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ಮೇಲಿನ ಶೂ ಎಸೆತದ ಘಟನೆ ವೈಯಕ್ತಿಕವಾಗಿ ಬೇಸರ ತಂದಿದೆ.ನ್ಯಾಯಾಲಯದಲ್ಲಿ ಕಲಾಪದ ವೇಳೆ ಶಿಸ್ತುಪಾಲನೆ, ಕಾನೂನು ಗೌರವ ಮುಖ್ಯವಾಗಿದೆ ವಕೀಲ ಸಂಘದ ಮನವಿಯನ್ನು ಸರ್ಕಾರ–ಕ್ಕೆ ರವಾನಿಸುವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ವಕೀಲರ ಸಂಘದ ಕಾರ್ಯದರ್ಶಿ ಪರುಶರಾಮ್, ಪದಾಧಿಕಾರಿಗಳಾದ ತಿಪ್ಪೇಸ್ವಾಮಿ, ಕೆ.ವಿ ರುದ್ರೇಶ್, ಭೂಪತಿ, ಮಹಾಂತೇಶ್, ಆರ್.ಓಬಳೇಶ್, ಸಣ್ಣ ಓಬಯ್ಯ, ತಿಪ್ಪೇಸ್ವಾಮಿ, ನಾಗಪ್ಪ, ಸುನಿಲ್, ನಾಗೇಶ್, ಅಂಜಿನಪ್ಪ, ತಿಪ್ಪೇಸ್ವಾಮಿ, ಸೇರಿದಂತೆ ಇತರರು ಭಾಗವಹಿಸಿದ್ದರು.

## ದಾವಣಗೆರೆಯಲ್ಲಿ ಅ.13ರಿಂದ ರಾಜ್ಯ ಮಟ್ಟದ ಬ್ಯಾಡ್ಮಿಂಟನ್ ಪಂದ್ಯಾವಳಿ

**ದಾವಣಗೆರೆ.ಅ.9.** ದಾವಣಗೆರೆ ಜಿಲ್ಲಾ ಬ್ಯಾಡ್ಮಿಂಟನ್ ಅಸೋಸಿಯೇಷನ್ ವತಿಯಿಂದ ಅಕ್ಟೋಬರ್ 13ರಿಂದ 19ರವರೆಗೆ ನಗರದ ನೇತಾಜಿ ಸುಭಾಷ್ ಚಂದ್ರ ಬೋಸ್ ಒಳಾಂಗಣ ಕ್ರೀಡಾಂಗಣದಲ್ಲಿ ಯುನಿಕ್ಸ್ ಸನ್ ರೈಸ್ ರಾಜ್ಯ ಮಟ್ಟದ ಬ್ಯಾಡ್ಮಿಂಟನ್ ಪಂದ್ಯಾವಳಿ ನಡೆಯಲಿದೆ ಎಂದು ದಾವಣಗೆರೆ ಜಿಲ್ಲಾ ಬ್ಯಾಡ್ಮಿಂಟನ್ ಅಸೋಸಿಯೇಷನ್ ಎಸ್.ಎನ್.ಬಸವರಾಜ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಕ್ಟೋಬರ್ 13ರಂದು ಬೆಳಗ್ಗೆ 11.45ಕ್ಕೆ ಪಂದ್ಯಾವಳಿ ಆರಂಭ ಆಗಲಿದ್ದು, ಗಣಿ ಮತ್ತು ಭೂವಿಜ್ಞಾನ, ತೋಟಗಾರಿಕೆ ಸಚಿವರು ಮತ್ತು ದಾವಣಗೆರೆ ಜಿಲ್ಲೆಯ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ ಉದ್ಘಾಟನೆ ಮಾಡುವರು.

ಕ್ರೀಡಾ ಧ್ವಜಾರೋಹಣ ಮಾಡುವ ಮೂಲಕ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ ಪಂದ್ಯಗಳನ್ನು ಉದ್ಘಾಟಿಸುವರು. ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರ ಸ್ವಾಮಿ, ದಾವಣಗೆರೆ–ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ದಿನೇಶ್ ಕೆ. ಶೆಟ್ಟಿ, ಕರ್ನಾಟಕ ಬ್ಯಾಡ್ಮಿಂಟನ್ ಅಸೋಸಿಯೇಷನ್, ಬೆಂಗಳೂರಿನ ಕಾರ್ಯದರ್ಶಿ ಪಿ.ರಾಜೇಶ್ ಈ ವೇಳೆ ಇರಲಿದ್ದಾರೆ.

# ರಾಶಿ ಭವಿಷ್ಯ

### ಮೇಷ ರಾಶಿ

ನೀವು ಆರೋಗ್ಯ ಸಮಸ್ಯೆಯಿಂದಾಗಿ ಒಂದು ಪ್ರಮುಖ ಕೆಲಸಕ್ಕೆ ಹೋಗಲು ಸಾಧ್ಯವಾಗದಿರುವುದರಿಂದ ಕೆಲವು ಹಿನ್ನಡೆ ಎದುರಿಸುವ ಸಾಧ್ಯತೆಯಿದೆ. ಆದರೆ ನಿಮ್ಮನ್ನು ಮೇಲೆತ್ತಲು ನಿಮ್ಮ ತಾರ್ಕಿಕತೆಯನ್ನು ಬಳಸಿ. ಇಂದು ಸಾಲಗಾರನು ನಿಮ್ಮ ಮನೆ ಬಾಗಿಲಿಗೆ ಬರಬಹುದು ಮತ್ತು ನಿಮ್ಮ ಹತ್ತಿರ ಸಾಲ ಕೇಳಬಹುದು. ಅವರಿಗೆ ಹಣವನ್ನು ಹಿಂದಿರುಗಿಸಿ ನೀವು ಆರ್ಥಿಕ ಬಿಕ್ಕಟ್ಟಿಗೆ ಸಿಲುಕಬಹುದು.

### ವೃಷಭ ರಾಶಿ

ನಿಮ್ಮ ಒತ್ತಡ ನಿವಾರಿಸಲು ಕುಟುಂಬದ ಸದಸ್ಯರ ಬೆಂಬಲ ಪಡೆಯಿರಿ. ಅವರ ಸಹಾಯವನ್ನು ಗೌರವದಿಂದ ಸ್ವೀಕರಿಸಿ. ನೀವು ಭಾವನೆಗಳು ಮತ್ತು ಒತ್ತಡಗಳನ್ನು ಒಳಗೆ ಅದುಮಿಡಬಾರದು. ಆಗಾಗ ನಿಮ್ಮ ಸಮಸ್ಯೆಗಳನ್ನು ಹಂಚಿಕೊಳ್ಳುವುದು ಸಹಾಯ ಮಾಡುತ್ತದೆ. ನಿಮ್ಮ ಖರ್ಚುಗಳನ್ನು ನಿಯಂತ್ರಿಸಲು ಮತ್ತು ಕೇವಲ ಅಗತ್ಯವಾದ ವಸ್ತುಗಳ ಮಾತ್ರ ಇಂದು ಖರೀದಿಸಲು ಪ್ರಯತ್ನಿಸಿ.

### ಮಿಥುನ ರಾಶಿ

ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್‌ಗೆ ಭೇಟಿ ನೀಡಿ. ದುರ್ಬಲ ಆರ್ಥಿಕ ಸ್ಥಿತಿಯಿಂದ ಕೆಲವು ಪ್ರಮುಖ ಕೆಲಸಗಳು ಸ್ಥಗಿತಗೊಳ್ಳುತ್ತವೆ. ಹೊಸ ವಿಷಯಗಳ ಬಗ್ಗೆ ಗಮನ ಹರಿಸಿ ಮತ್ತು ನಿಮ್ಮ ಅತ್ಯುತ್ತಮ ಸ್ನೇಹಿತರ ಬಳಿ ಸಹಾಯ ಕೇಳಿ. ನಿಮ್ಮ ಸಂಪೂರ್ಣ ಹಾಗೂ ಪ್ರಶ್ನಾತೀತ ಪ್ರೀತಿ ಒಂದು ಜಾದುವಿನಂಥ ಸೃಜನಶೀಲ ಶಕ್ತಿಯನ್ನು ಹೊಂದಿದೆ.

### ಕರ್ಕ ರಾಶಿ

ಮನರಂಜನೆ ಮತ್ತು ಮೋಜಿನ ಒಂದು ದಿನ. ನಿಮ್ಮ ತಂದೆಯ ಯಾವುದೇ ಸಲಹೆ ಇಂದು ಕೆಲಸದ ಸ್ಥಳದಲ್ಲಿ ಇಂದು ನಿಮಗೆ ಹಣದ ಪ್ರಯೋಜನವನ್ನು ನೀಡುತ್ತದೆ. ಅಗತ್ಯವಿದ್ದರೆ ಸ್ನೇಹಿತರು ನಿಮ್ಮ ನೆರವಿಗೆ ಬರುತ್ತಾರೆ. ಪ್ರೀತಿಯಲ್ಲಿ ನಿರಾಶೆಯಾಗಬಹುದಾದರೂ ಪ್ರೇಮಿಗಳು ಯಾವತ್ತೂ ಮುಖಸ್ತುತಿ ಮಾಡುವವರಾದ್ದರಿಂದ ನೀವು ಧೃತಿಗೆಡಬೇಡಿ. ನೀವು ನಿಮ್ಮ ಕೌಶಲ್ಯ ಮತ್ತು ಪ್ರತಿಭೆಗಳನ್ನು ಸರಿಯಾದ ಜನರಿಗೆ ತೋರಿಸಿದಲ್ಲಿ ನೀವು ಶೀಘ್ರದಲ್ಲೆ ಹೊಸ ಮತ್ತು ಒಳ್ಳೆಯ ಸಾರ್ವಜನಿಕ ವ್ಯಕ್ತಿತ್ವವನ್ನು ಹೊಂದಲು ಸಾಧ್ಯವಿದೆ.

### ಸಿಂಹ ರಾಶಿ

ಇಂದು, ನಿಮ್ಮ ಆರೋಗ್ಯವು ಆರೋಗ್ಯಕರವಾಗಿರುತ್ತದೆ ಎಂದು ನಿರೀಕ್ಷಿಸಲಾಗಿದೆ. ನೀವು ಇತರರ ಮೇಲೆ ಹೆಚ್ಚು ಖರ್ಚು ಮಾಡಬಯಸುತ್ತೀರಿ. ಸಾಮಾಜಿಕ ಕೂಟಗಳಲ್ಲಿ ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮನ್ನು ಜನಪ್ರಿಯಗೊಳಿಸುತ್ತದೆ. ಪ್ರತಿಯೊಂದು ವಿಷಯದಲ್ಲಿ ಪ್ರೀತಿಯನ್ನು ತೋರಿಸುವುದು ಸರಿಯಿಲ್ಲ. ಇದು ನಿಮ್ಮ ಸಂಬಂಧವನ್ನು ಸುಧಾರಿಸುವ ಬದಲು ಹಾಳುಮಾಡುತ್ತದೆ.

### ಕನ್ಯಾ ರಾಶಿ

ಕಳೆದ ಉದ್ಯಮಗಳ ಯಶಸ್ಸು ನಿಮ್ಮ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ. ತಮ್ಮ ಹಣವನ್ನು ಬೆಟ್ಟಿಂಗ್‌ನಲ್ಲಿ ಖರ್ಚು ಮಾಡಿದವರು ಇಂದು ನಷ್ಟ ಅನುಭವಿಸುವ ಸಾಧ್ಯತೆಯಿದೆ. ಬೆಟ್ಟಿಂಗ್‌ನಿಂದ ದೂರವಿರಲು ನಿಮಗೆ ಸೂಚಿಸಲಾಗಿದೆ. ಸಂಬಂಧಿಕರ ಜೊತೆ ಕಳೆದ ಸಮಯ ನಿಮಗೆ ಅನುಕೂಲಕರವಾಗಿರುತ್ತದೆ. ಪ್ರೀತಿಗಾಗಿ ವಿಶೇಷ ದಿನ-ರಾತ್ರಿಗಾಗಿ ಯಾವುದಾದರೂ ಯೋಜನೆ ಹಾಕಿ ಮತ್ತು ಇದನ್ನು ಸಾಧ್ಯವಾದಷ್ಟು ಪ್ರಣಯಮಯವಾಗಿಸಲು ಪ್ರಯತ್ನಿಸಿ. ಕೆಲಸದಲ್ಲಿ ಎಲ್ಲವೂ ನಿಮ್ಮ ಪರವಾಗಿ ಇದ್ದಂತೆ ತೋರುತ್ತದೆ.

### ತುಲಾ ರಾಶಿ

ಆರೋಗ್ಯಕ್ಕೆ ಸಂಬಂಧಿಸಿದಂತೆ ಈ ಅವಧಿ ಮಂದವಾಗಿರುವುದರಿಂದ ನೀವು ತಿನ್ನುವುದರ ಬಗೆಗೆ ಜಾಗರೂಕರಾಗಿರಿ. ಇಂದು ನಿಮ್ಮ ಸಹೋದರ ಸಹೋದರಿಯರು ನಿಮ್ಮಿಂದ ಆರ್ಥಿಕ ಬೆಂಬಲವನ್ನು ಕೇಳಬಹುದು ಮತ್ತು ಅವರಿಗೆ ಸಹಾಯ ಮಾಡಿ ನೀವು ಸ್ವತಃ ಆರ್ಥಿಕ ಒತ್ತಡಕ್ಕೆ ಬರಬಹುದು. ಆದಾಗ್ಯೂ ಪರಿಸ್ಥಿತಿ ಬೇಗ ಸುಧಾರಿಸುತ್ತದೆ. ನಿಮ್ಮ ಹೆತ್ತವರ ಆರೋಗ್ಯದ ಬಗೆಗೆ ಹೆಚ್ಚುವರಿ ಗಮನ ಮತ್ತು ಎಚ್ಚರಿಕೆ ಅಗತ್ಯವಿದೆ.

### ವೃಶ್ಚಿಕ ರಾಶಿ

ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ಹಣಕಾಸು ಲಾಭಗಳು ವಿವಿಧ ಮೂಲಗಳಿಂದ ಬರುತ್ತದೆ. ಸಾಮಾಜಿಕ ಸಮಾರಂಭಗಳು ಪ್ರಭಾವಿ ಮತ್ತು ಪ್ರಮುಖ ಜನರೊಡನೆ ನಿಮ್ಮ ಬಾಂಧವ್ಯವನ್ನು ಸುಧಾರಿಸಲು ಒಂದು ಪರಿಪೂರ್ಣ ಅವಕಾಶವಾಗಿರುತ್ತದೆ. ನಿಮ್ಮ ಸಂಗಾತಿಯು ಇಂದು ಇಡೀ ದಿನ ನಿಮ್ಮ ಬಗ್ಗೆ ಚಿಂತಿಸುತ್ತೀರಿ. ನೀವು ಶ್ರಮ ಮತ್ತು ತಾಳ್ಮೆಯ ಮೂಲಕ ನಿಮ್ಮ ಗುರಿಗಳನ್ನು ತಲುಪುತ್ತೀರಿ.

### ಧನು ರಾಶಿ

ನಿಮ್ಮ ಕಚೇರಿಯನ್ನು ಬೇಗನೆ ಬಿಡಲು ಮತ್ತು ನೀವು ನಿಜವಾಗಿಯೂ ಆನಂದಿಸುವದನ್ನು ಮಾಡಲು ಪ್ರಯತ್ನಿಸಿ. ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ. ಇಂದು ನೀವು ಹಚ್ಚು ಪ್ರಯತ್ನ ಮಾಡಬೇಕಾಗಿ ಬಂದರೂ ಕೂಡ ಮಕ್ಕಳ ಸಂಗದಲ್ಲಿ ನಿಮ್ಮ ಬಿಡುವಿನ ಸಮಯ ಕಳೆಯಲು ಪ್ರಯತ್ನಿಸಬೇಕು.

### ಮಕರ ರಾಶಿ

ಕೆಲವರು ನಿಮಗೆ ಏನನ್ನಾದರೂ ಕಲಿಯಲು ಬಹಳ ವಯಸ್ಸಾಗಿದೆಯೆಂದು ಭಾವಿಸಬಹುದು ಆದರೆ ಅದು ನಿಜವಲ್ಲ – ನಿಮ್ಮ ಪ್ರಖರ ಮತ್ತು ಸಕ್ರಿಯ ಮನಸ್ಸಿನಿಂದ ನೀವು ಹೊಸ ವಿಷಯಗಳನ್ನು ಸುಲಭವಾಗಿ ಕಲಿಯುವಿರಿ. ನಿಮ್ಮ ಹಣವನ್ನು ಉಳಿಸಲು ನೀವು ಇಂದು ನಿಮ್ಮ ಮನೆಯ ಜನರೊಂದಿಗೆ ಮಾತನಾಡಬೇಕು. ಅವರ ಸಲಹೆ ನಿಮ್ಮ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸಲು ಸಹಾಯಕವಾಗುತ್ತದೆ.

### ಕುಂಭ ರಾಶಿ

ಇಂದು ನೀವು ಹಲವಾರು ಒತ್ತಡಗಳು ಮತ್ತು ಭಿನ್ನಾಭಿಪ್ರಾಯಗಳನ್ನು ಎದುರಿಸ ಬೇಕಾಗಬಹುದು ಹಾಗೂ ಇದು ನಿಮಗೆ ಕಿರಿಕಿರಿ ಹಾಗೂ ಆತಂಕದ ಭಾವನೆಗಳನ್ನು ಉಂಟುಮಾಡಬಹುದು. ನೀವು ಸಾಲ ತೆಗೆದುಕೊಳ್ಳಲು ಹೊರಟಿದ್ದರೆ ಮತ್ತು ಈ ಕೆಲಸದಲ್ಲಿ ದೀರ್ಘಕಾಲ ತೊಡಗಿಸಿಕೊಂಡಿದ್ದರೆ, ಇಂದು ನೀವು ಸಾಲ ಪಡೆಯಬಹುದು. ಕಲ್ಪನೆಗಳ ಹಿಂದೆ ಓಡಬೇಡಿ ಹಾಗೂ ಸಾಧ್ಯವಾದಷ್ಟೂ ವಾಸ್ತವವಾದಿಗಳಾಗಿರಿ.

### ಮೀನ ರಾಶಿ

ಸ್ನೇಹಿತನ ಜೊತೆಗಿನ ನಿಮ್ಮ ಅಪಾರ್ಥ ಕೆಲವು ಅಹಿತಕರ ಪ್ರತಿಕ್ರಿಯೆಗಳನ್ನು ಉಂಟುಮಾಡಬಹುದು – ಯಾವುದೇನಿರ್ಧಾರ ಕೈಗೊಳ್ಳುವ ಮೊದಲು ಸಮತೋಲಿತ ನೋಟ ಹೊಂದಿ. ಪ್ರಮುಖ ಜನರು ವಿಶೇಷ ವರ್ಗ ಹೊಂದಿರುವ ಯಾವುದಕ್ಕಾದರೂ ಹಣಕಾಸು ನೀಡಲು ಸಿದ್ಧವಾಗಿರುತ್ತಾರೆ. ಮನರಂಜನೆ ಇಡೀ ಕುಟುಂಬವನ್ನು ಒಳಗೊಂಡಿದ್ದಲ್ಲಿ ಅದು ಮೋಜಿನ ವಿಷಯವಾಗಿರುತ್ತದೆ. ಇಂದಿನ ದಿನ ಪ್ರೀತಿಯ ಬಣ್ಣಗಳಲ್ಲಿ ಮುಳುಗಿರುತ್ತದೆ ಆದರೆ ರಾತ್ರಿಯ ಸಮಯದಲ್ಲಿ ಯಾವುದೊ ಹಳೆಯ ವಿಷ್ಯದ ಬಗ್ಗೆ ನೀವು ಜಗಳವಾಡಬಹುದು.

### ವಾಲ್ಮೀಕಿ ಜಯಂತಿಯಲ್ಲಿ ಮಾಜಿ ಸಂಸದ ವಿ. ಎಸ್. ಉಗ್ರಪ್ಪ ಒತ್ತಾಯ

# ದೆಹಲಿ ರೈಲಿಗೆ ಮಹರ್ಷಿ ವಾಲ್ಮೀಕಿ ಹೆಸರಿಡಿ

**ದಾವಣಗೆರೆ:** ದೆಹಲಿ– ಬೆಂಗಳೂರು ನಡುವೆ ಸಂಚರಿಸುವ ಯಾವುದಾದರೂ ರೈಲು ಮತ್ತು ಮೈಸೂರು– ಬೀದರ್ ನಡುವೆ ಸಂಪರ್ಕ ಕಲ್ಪಿಸುವ ರಾಷ್ಟ್ರೀಯ ಹೆದ್ದಾರಿಗೆ ಮಹರ್ಷಿ

ವಾಲ್ಮೀಕಿ ಅವರ ಹೆಸರು ನಾಮಕರಣ ಮಾಡಬೇಕೆಂದು ಮಾಜಿ ಸಂಸದ ವಿ.ಎಸ್.ಉಗ್ರಪ್ಪ ಒತ್ತಾಯಿಸಿದರು.



ಬುಧವಾರ ನಗರದ ಗುಂಡಿ ಮಹಾದೇವಪ್ಪ ಕಲ್ಯಾಣ ಮಂದಿರದಲ್ಲಿ ವಾಲ್ಮೀಕಿ ಪ್ರತಿಷ್ಠಾನ ಮತ್ತು ಸಾರ್ವಜನಿಕ ವಾಲ್ಮೀಕಿ ಜಯಂತ್ಯೋತ್ಸವ ಸಮಿತಿ ಆಶ್ರಯದಲ್ಲಿ ಹಮ್ಮಿಕೊಂಡಿದ್ದ 4 ನೇ ವರ್ಷದ ವಾಲ್ಮೀಕಿ ಜಯಂತಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಏಳು ಸಾವಿರ ವರ್ಷಗಳ ಹಿಂದೆ ನಡೆದಿರುವ ರಾಮಾಯಣ ಮಹಾಕಾವ್ಯದ ಪ್ರತಿ ಕಾಂಡವನ್ನು ವಿಶೇಷ ಅರ್ಥ ಇಟ್ಟುಕೊಂಡೆ ರಚಿಸಲಾಗಿದೆ. ಸಹೋದರರು ಹೇಗಿರಬೇಕು ,ಅವರ ನಡುವಿನ ಬಾಂಧವ್ಯ ಯಾವ ರೀತಿ ಇರಬೇಕು, ಮೊದಲಾದ ಮಾನವೀಯ ಸಂಬಂಧಗಳ ಕುರಿತು ಮಾಲ್ವಿಕವಾದ ಅರ್ಥಗಳು ರಾಮಾಯಣದಲ್ಲಿವೆ ಎಂದರು.

ಮಹಾತ್ಮ ಗಾಂಧೀಜಿ ಕೊನೆ ಉಸಿರು ಎಳೆಯುವಾಗ ಹೇ ರಾಮ್ ಎಂದು ಉದ್ಗರಿಸಿದರು. ವಾಲ್ಮೀಕಿ ಅವರ ರಾಮಾಯಣದ ಆಶಯದಂತೆ ಇಂದು ರಾಮರಾಜ್ಯ ನಿರ್ಮಾಣವಾದರೆ ಜಗತ್ತಿನಲ್ಲಿ ಶಾಂತಿ ನೆಲೆಸಲು ಸಾಧ್ಯವಾಗುತ್ತದೆ ಎಂದರು.

ಮಡಿವಾಳ ಮತ್ತು ಸವಿತಾ ಸಮಾಜವನ್ನು ಎಸ್ಸಿಗೆ ಸೇರ್ಪಡೆ ಮಾಡಬೇಕು.ಈ ಎರಡೂ ಜನಾಂಗ ನಿಜವಾಗಿಯೂ ಎಸ್ಸಿಗೆ ಸೇರಲು ಅರ್ಹತೆ ಹೊಂದಿವೆ. ರಸ್ತೆಯಲ್ಲಿ ಕ್ಷೌರಿಕರು ಎದುರು ಬಂದಾಗ ಅಪಶಕುನ ಎನ್ನುವುದು ಕೂಡ ಜಾತಿನಿಂದನೆಯಾಗಲಿದೆ. ಈ ಸಮಾಜದ ಜನರು ನಿಜವಾದ ಅಸ್ಪೃಶ್ಯತೆ ಎದುರಿಸುತ್ತಿದ್ದಾರೆ ಎಂದರು

ರಾಜ್ಯ ಸರ್ಕಾರ ಎಸ್ಟಿ ಸಮುದಾಯಕ್ಕೆ ಯಾರನ್ನಾದರೂ ಸೇರಿಸಲಿ ಆದರೆ ಹಿಂದುಳಿದ ವರ್ಗಗಳ ಮೀಸಲಾತಿಯ ಒಳಗೆ ಅವರನ್ನು ಎಸ್ಟಿಗೆ ಸೇರಿಸಿದರೆ ನಮ್ಮಯಾವುದೇ ಅಭ್ಯಂತರ ಇಲ್ಲ. ಆದರೆ ನೇರವಾಗಿ ಎಸ್ಟಿಗೆ ಸೇರಿಸುತ್ತೇನೆ ಎಂದರೆ ಅದಕ್ಕೆ ನಮ್ಮ ತೀವ್ರ ವಿರೋಧವಿದೆ ಎಂದು ಹೇಳಿದರು.

ಈ ರೀತಿಯ ಜಯಂತಿ ,ಸಮಾವೇಶಗಳನ್ನು ಮಾಡಿದರೆ ಸರ್ಕಾರಕ್ಕೆ ಸಂದೇಶ ನೀಡುವಂತಿರಬೇಕು ಮತ್ತು ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಇಂದಿನ ಸಮಾವೇಶದಲ್ಲಿ ಭಾಗವಹಿಸಿರುವುದು ಒಳ್ಳೆಯ ಬೆಳವಣಿಗೆಯಾಗಿದೆ.ಈ ಮೂಲಕ ಸಮಾಜದ ಸಂಘಟನೆ ಇನ್ನೂ ಹೆಚ್ಚಾಗಬೇಕಿದೆ ಎಂದರು.

ಮಾದಿಗ ದಂಡೋರ ಸಮಿತಿ ಅಧ್ಯಕ್ಷ ಎಚ್.ಸಿ.ಗುಡ್ಡಪ್ಪ ಮಾತನಾಡಿ, ಎಲ್ಲಾ ಜಾತಿ. ಜನಾಂಗದವರು ಸೇರಿಕೊಂಡು ಕಳೆದ 4 ವರ್ಷಗಳಿಂದ ಜಯಂತಿ ಆಚರಣೆ ಮಾಡಿಕೊಂಡು ಬರುತ್ತಿರುವುದು ಶ್ಲಾಘನೀಯ. ಆಂದಿನ ಕಾಲದಲ್ಲಿಯೇ ಮನುಷ್ಯರು ಹೇಗೆ ಬದುಕಬೇಕೆನ್ನುವುದನ್ನು ರಾಮಾಯಣ ಗ್ರಂಥದ ಮೂಲ ಸಾರಿದ್ದಾರೆ. ಅದರ ಆಶಯದಂತೆ ನಾವು ಬದುಕಬೇಕು ಎಂದರು.

ಎಪಿಎಂಸಿ ಮಾಜಿ ಅಧ್ಯಕ್ಷ ಅಣಜಿ ಚಂದ್ರಶೇಖರ್ ಮಾತನಾಡಿ, ಕಳೆದ 4 ವರ್ಷಗಳಿಂದ ನಾನೂ ಕೂಡ ಈ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿದ್ದೇನೆ. ಬುಡಕಟ್ಟು ಜನರು, ಮುಂದುವರಿದ ಸಮುದಾಯದ ಜನರು ಸೇರಿದಂತೆ ಎಲ್ಲ ಜನಾಂಗದವರು ಸೇರಿಕೊಂಡು ಜಯಂತಿ ಆಚರಿಸುವುದು ವಿಶೇಷವಾಗಿದೆ.ಈ ಜಯಂತಿಯನ್ನು ಇಲ್ಲಿಗೆ ನಿಲ್ಲಿಸದೇ ಮುಂದುವರಿಸಿಕೊಂಡು ಹೋಗಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಸಮಿತಿ ಅಧ್ಯಕ್ಷ ಹುಚ್ಚವ್ವನಹಳ್ಳಿ ಮಂಜುನಾಥ್ ಮಾತನಾಡಿ, ಎಲ್ಲಾ ಜಾತಿ. ಜನಾಂಗದವರನ್ನು ಒಳಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸುವ ಉದ್ದೇಶ ಇಟ್ಟುಕೊಳ್ಳಲಾಗಿದೆ. ಒಂಭತ್ತು ದಿನಗಳ

ಈ ವಿಶೇಷ ಕಾರ್ಯಕ್ರಮದಲ್ಲಿ ಮಹಿಳೆಯರು, ಯುವಕರು, ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡಲಾಗುವುದು.ನಶಿಸಿಹೋಗುತ್ತಿರುವ ಕಲೆ.ಕಲಾವಿದರಿಗೆ ಉತ್ತೇಜನ ನೀಡಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ರಾಜನಹಟ್ಟಿ ರಾಜು. ಎಲೋದಹಳ್ಳಿ ರವಿ ಕುಮಾರ್, ಚಿಕ್ಕಮಲ್ಲನಹೊಳೆ ಚಿರಂಜೀವಿ, ಯರವನಾಗತಿಹಳ್ಳಿ ಪರಮೇಶ್ವರಪ್ಪ, ಹೂವಿನ ಮಡು ನಾಗರಾಜ್,ಗುಡ್ಡದ ಕುಮಾರನಹಳ್ಳಿ ಪ್ರಭು, ಎನ್.ಗಾಣದಗಟ್ಟೆ ಅಂಜು,ಗುಮ್ಮನೂರು ರುದ್ರೇಶ್, ಕಿತ್ತೂರು ನಳಿನಮ್ಮ,ಗಿರಿಯಾಪುರ ಶಶಿಕಲಾ,ಹುಚ್ಚವ್ವನಹಳ್ಳಿ ಗೌಡರ ಪ್ರಕಾಶ್ ಇತರರು ಉಪಸ್ಥಿತರಿದ್ದರು.ಶೃತಿ ಪೂಜಾರ್ ಸ್ವಾಗತಿಸಿ ವಂದಿಸಿದರು. ನಾಳೆ ರಾಜ್ಯ ಮಟ್ಟದ ಭಜನಾ ಸ್ಪರ್ಧೆ ಏರ್ಪಡಿಸಲಾಗಿದೆ.

ಅದ್ದೂರಿ ಮೆರವಣಿಗೆ; ಇದಕ್ಕೂಮುನ್ನ ಬೆಳಿಗ್ಗೆ 11.30 ಕ್ಕೆ ನಗರದ ಹೊಸ ಬಸ್ ನಿಲ್ದಾಣದ ಮುಂಭಾಗದಿಂದ ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರದ ಅದ್ದೂರಿ ಮೆರವಣಿಗೆ ಆರಂಭಗೊಂಡಿತು. ವಿವಿಧ ಜಾನಪದ ಕಲಾತಂಡಗಳು ಮೆರಗು ನೀಡಿದ್ದವು. ಜಯದೇವ ವೃತ್ತ, ಅಂಬೇಡ್ಕರ್ ವೃತ್ತ, ವಿದ್ಯಾರ್ಥಿ ಭವನದ ಮೂಲಕ ಹಾದು ಗುಂಡಿ ಮಹಾದೇವಪ್ಪ ಕಲ್ಯಾಣ ಮಂದಿರಕ್ಕೆ ಆಗಮಿಸಿತು.

# ಅಖಿಲೇಶ್ ಯಾದವ್ ಜೀ ರಾಜ್ಯಕ್ಕೆ ಭೇಟಿ

**ಬೆಂಗಳೂರು :**ಇದೇ ನವೆಂಬರ್ 11 ರಿಂದ ಎರಡು ದಿನಗಳ ಕಾಲ ಸಮಾಜವಾದಿ ಪಕ್ಷದ ವಿಶೇಷ ಕಾರ್ಯಕಾರಿಣಿ ಸಭೆ ಕರೆಯಲಾಗಿದೆ ಎಂದು ಸಮಾಜವಾದಿ ಯುವ ಜನ ಸಭಾದ ರಾಜ್ಯ ಅಧ್ಯಕ್ಷ ಆನಂದ್ ಸಿ ತಿರುಮಲ ಹೇಳಿದರು.

ಅವರು ಮಾಧ್ಯಮಗಳ ಜೊತೆಗೆ ಮಾತನಾಡಿ ಸಮಾಜವಾದಿ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಮಾಜಿ ಮುಖ್ಯ ಮಂತ್ರಿ ಗಳು ಅಖಿಲೇಶ್ ಯಾದವ್ ಜೀ ರವರು ರಾಜ್ಯ ಪ್ರವಾಸ ಕೈಗೊಂಡು ರಾಜ್ಯದಲ್ಲಿ ಹಿಂದುಳಿದವರು, ದಲಿತರು, ಅಲ್ಪ ಸಂಖ್ಯಾತ (ಪಿಡಿಎ) ಕಡು ಬಡವರು ನಿರ್ಗತಿಕರನ್ನು ರಾಜ್ಯ ಸರ್ಕಾರ ನಿರ್ಲಕ್ಷಿಸುತ್ತಿ ರುವುದು ಕಂಡನಿಯ ಇದರ ವಿರುದ್ಧ ಜನರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಪಕ್ಷದ ಕಾರ್ಯಕರ್ತರಿಗೆ ವಿಶೇಷ ಮಾರ್ಗದರ್ಶನ ನೀಡಲಿದ್ದಾರೆ

ಸಮಾಜವಾದಿ ಪಕ್ಷ ವು ಮಾನವೀಯತೆ, ಜಾತ್ಯತೀತತೆ, ಸಮಾನತೆ, ಪ್ರಜಾಪ್ರಭುತ್ವದ ಮೇಲೆ ನಿಂತಿದೆ. ಜಾತಿ, ವರ್ಗ ಭೇದವಿಲ್ಲದೆ ಎಲ್ಲರನ್ನೂ ಸಮಾನವಾಗಿ ಕಾಣುವುದು ಪಕ್ಷದ ಉದ್ದೇಶ.

ಸಮಾಜವಾದಿ ಯುವ ಜನ ಸಭಾ ಸಂಘಟನೆ ಮತ್ತು ಪಕ್ಷದ ಮುಖಂಡರ ಮೂಲಕ ಮುಂಬರುವ ಚುನಾವಣೆಗಳಲ್ಲಿ ಗೆಲುವು ಸಾಧಿಸುವ ಗುರಿ ಪಕ್ಷದ್ದಾಗಿದೆ. ಈ ನಿಟ್ಟಿನಲ್ಲಿ ಅಖಿಲೇಶ್‌ಯಾದವ್ ಜೀ ರವರು ಕರ್ನಾಟಕ ರಾಜ್ಯದ ಚಿತ್ರದುರ್ಗ ಜಿಲ್ಲೆಗೆ ಭೇಟಿ ಮಾಡಿ ಪಕ್ಷದ ಸಭೆ ಯು ಮಹತ್ವದ್ದಾಗಿದೆ ಎಂದು ತಿಳಿಸಿದರು.

# ಯಶಸ್ವಿಯಾಗಿ ನಡೆದ 'ತೆರಿಗೆ' ಕಾರ್ಯಾಗಾರ

**ಬಳ್ಳಾರಿ:** ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ, ಇನ್ಸಿಟ್ಯೂಟ್ ಆಫ್ ಚಾರ್ಟೆಡ್ ಟ್ಯಾಕ್ಸ್ ಪ್ರಾಕ್ಟೀಷರ್ಸ್ ಇಂಡಿಯಾ, ಬಳ್ಳಾರಿ ಟ್ಯಾಕ್ಸ್ ಪ್ರಾಕ್ಟೀಷರ್ಸ್ ಅಸೋಸಿಯೇಷನ್, ಕರ್ನಾಟಕ ಪ್ರೊಫೆಷನಲ್ ಸಿವಿಲ್ ಇಂಜಿನಿರ್ಸ್ ಸ್ಟೀರಿಂಗ್ ಕಂಸ್ಟೋರಿಯಂ ಹಾಗೂ ಚೇತನ್ ಇನ್ಸಿಟ್ಯೂಟ್ ಆಫ್ ಬ್ಯುಸಿನೆಸ್ ಸೆಲ್ಯೂಷನ್ಸ್ ಅವರ ಜಂಟಿ ಆಶ್ರಯದಲ್ಲಿ 'ತೆರಿಗೆ' ಕಾರ್ಯಾಗಾರ ಬಿಡಿಸಿಸಿಐನ ಆಡಿಟೋರಿಯಂನಲ್ಲಿ ಬುಧವಾರ ನಡೆಯಿತು.



ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷ ಯಶವಂತರಾಜ್ ನಾಗಿರೆಡ್ಡಿ, ವಾಣಿಜ್ಯ ತೆರಿಗೆ ಜಾರಿ ಇಲಾಖೆಯ ಜಂಟಿ ಆಯುಕ್ತರಾದ ಡಾ. ಕುಮಾರ್ ನಾಯಕ್ ಜಿ, ಕೇಂದ್ರ ತೆರಿಗೆ ಮತ್ತು ಕಸ್ಟಮ್ಸ್ ಸಹಾಯಕ ಆಯುಕ್ತರಾದ ಎನ್.ಎಂ. ಗಣೇಶ್ ಕುಮಾರ್, ಆಲ್ ಇಂಡಿಯಾ ಟ್ಯಾಕ್ಸ್ ಪೇಯರ್ಸ್ ಒಕ್ಕೂಟದ ಅಧ್ಯಕ್ಷರಾಗಿರುವ ಎಸ್.ಆರ್. ಮಠಪತಿ, ಕೆಪಿಸಿಇಎಸ್‌ಸಿಯ ಕಲಬುರ್ಗಿ ವಿಭಾಗದ ಉಪಾಧ್ಯಕ್ಷರಾಗಿರುವ ಕೆ.ಬಿ. ಸಂಜೀವ್ ಪ್ರಸಾದ್, ಟ್ಯಾಲಿ ಸೆಲ್ಯೂಷನ್ಸ್ ರವಿ ತಾಳಿಕೋಟೆ ಅವರು ಜಂಟಿಯಾಗಿ ಕಾರ್ಯಾಗಾರವನ್ನು ಉದ್ಘಾಟಿಸಿದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷ ಯಶವಂತರಾಜ್ ನಾಗಿರೆಡ್ಡಿ ಅವರು ಸ್ವಾಗತ ಕೋರಿ, ಪ್ರಾಸ್ತಾವಿಕ ಭಾಷಣ ಮಾಡಿ, ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯು ಜನಪರವಾಗಿ ಅನೇಕ ಸೇವಾ ಕಾರ್ಯಕ್ರಮಗಳನ್ನು ನಿರ್ವಹಿಸುತ್ತಿದೆ. ನಮ್ಮ ಸಂಸ್ಥೆಯು ಕೌಶಲ್ಯಾಭಿವೃದ್ಧಿಗೆ ಆದ್ಯತೆ ನೀಡಿ, ಭವಿಷ್ಯದ ಉದ್ಯಮಿಗಳಿಗಾಗಿ ಇಂಕ್ಯುಬೇಷನ್ ಸೆಂಟರ್ ಪ್ರಾರಂಭಿಸಿದೆ. ವಿವಿಧ ವಿಷಯಗಳ ತಜ್ಞರು – ಪರಿಣಿತರು ಉದ್ಯಮದ ಆರಂಭದಿಂದ ಮಾರುಕಟ್ಟೆಯವರೆಗೂ ಎಲ್ಲಾ ಹಂತದಲ್ಲೂ ಸಲಹೆ ಮಾರ್ಗದರ್ಶನ ನೀಡಲಿದ್ದಾರೆ ಎಂದರು.

'ತೆರಿಗೆ' ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿದ್ದ ಜಸ್ಟಿನ್ ಕ್ರಿಸ್ಟಪರ್ ಅವರು, ಸ್ಪಾಂಜ್ ಐರನ್, ಮೆಡಿಕಲ್, ಕಿರಾಣಿ, ಕೋಲ್ಡ್ ಸ್ಟೋರೇಜ್, ಕಾಟನ್‌ಮಿಲ್ ಸೇರಿ ವಿವಿಧ ಕ್ಷೇತ್ರಗಳಲ್ಲಿಯ ತೆರಿಗೆ ವ್ಯವಸ್ಥೆಯ ಬಗ್ಗೆ ಮಾಹಿತಿ ನೀಡಿ, 'ತೆರಿಗೆ ಕಾರ್ಯಗಾರದ ಬಗ್ಗೆ' ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಟ್ಯಾಕ್ಸ್ ಪ್ರಾಕ್ಟೀಷನರ್ ಆಗಿರುವ ಶ್ರೀಧರ ಪಾರ್ಥಸಾರಥಿ ಅವರು, ನಾನಾ ರೀತಿಯ ತೆರಿಗೆಗಳ ಪಾವತಿ ಮತ್ತು ಇನ್ನಿತರೆಗಳ ಗೊಂದಲ – ಸಮಸ್ಯೆ; ತಾಂತ್ರಿಕ ಮಾರ್ಗದರ್ಶನ ತಾಂತ್ರಿಕ ಸಮಸ್ಯೆಗಳ ಕುರಿತು ಉಪನ್ಯಾಸ ನೀಡಿದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಗೌರವ ಕಾರ್ಯದರ್ಶಿಗಳಾದ ಕೆ.ಸಿ. ಸುರೇಶಬಾಬು ಅವರು ವೇದಿಕೆಯಲ್ಲಿ ಉಪಸ್ಥಿತರಿದ್ದರು.


ಟ್ಯಾಕ್ಸೇಷನ್ ಸಮಿತಿ ಚೇರ್ಮೆನ್ ಸಿಎ. ಕೆ. ರಾಜಶೇಖರ ಅವರು ಕಾರ್ಯಕ್ರಮ ನಿರೂಪಿಸಿದರು. ಬಿಟಿಪಿಎ ಅಧ್ಯಕ್ಷರಾಗಿರುವ ವೆಂಕಟೇಶ ಕುಲಕರ್ಣಿ ಅವರು ವಂದನಾರ್ಪಣೆ ಮಾಡಿದರು.

ಸಂಸ್ಥೆಯ ಜಂಟಿ ಕಾರ್ಯದರ್ಶಿಗಳಾದ ಡಾ. ಮರ್ಚೆಡ್ ಮಲ್ಲಿಕಾರ್ಜುನಗೌಡ, ವಿ. ರಾಮಚಂದ್ರ, ಕಾರ್ಯಕಾರಿ ಸಮಿತಿ ಸದಸ್ಯರು, ವಿಶೇಷ ಆಹ್ವಾನಿತರು, ವಿಶೇಷ ಸಮನ್ವಯ ಸಮಿತಿ ಸದಸ್ಯರು, ಹಿರಿಯ ವಕೀಲರಾದ, ಅಪ್ಪಯ್ಯ ಭಟ್, ಟ್ಯಾಕ್ಸ್ ಪ್ರಾಕ್ಟೀಷನರ್, ಉಸ್ಮಾನ್ ಶರೀಫ್ ಪ್ರಧಾನ ಕಾರ್ಯದರ್ಶಿ, ಬಿಟಿಪಿಎ,ಬಳ್ಳಾರಿ, ಚೌವ್ಹಾಣ ಮನೋಹರ, ಚೇತನ್ ಇನ್ಸಿಟ್ಯೂಟ್ ಆಫ್ ಬ್ಯುಸಿನೆಸ್ ಸೆಲ್ಯೂಷನ್ಸ್, ಟ್ಯಾಕ್ಸ್ ಪ್ರಾಕ್ಟೀಷನರಗಳಾದ, ಮಹಾಂತೇಶ ದಾದಿಗುಂಡಿ, ಉಪಾಧ್ಯಕ್ಷರು, ಕೆ.ಎಸ್.ಟಿ.ಪಿ.ಎ,ಬೆಳಗಾವಿ, ಮಹಾಂತೇಶ ಮುದುನೂರು, ಮಾಜಿ ಜಂಟಿ ಕಾರ್ಯದರ್ಶಿಗಳು, ಐಟಿಪಿಐ, ಬೆಳಗಾವಿ, ಪ್ರಶಾಂತ ಎಂ, ಫೌಂಡರ್ ಚೇರ್ಮನ್, ಆಲ್ ಇಂಡಿಯಾ ಟ್ಯಾಕ್ಸ್ ಪೇಯರ್ಸ್ ಒಕ್ಕೂಟದ ಬಳ್ಳಾರಿಯ ಟ್ಯಾಕ್ಸ್ ಪ್ರಾಕ್ಟೀಷನರ್‌ಗಳು, ಉದ್ಯಮಿಗಳು ಹಾಗೂ ವೃತ್ತಿಪರರು, ವಿವಿಧ ಸಂಘ / ಸಂಸ್ಥೆಗಳವರು ಕಾರ್ಯಾಗಾರದಲ್ಲಿ ಪಾಲ್ಗೊಂಡಿದ್ದರು.

# ಜಾಬ್‌ಕಾರ್ಡ್ ಇ-ಕೆವೈಸಿ ಕಡ್ಡಾಯ

### 52025 ಸಕ್ರಿಯ ಉದ್ಯೋಗ ಚೀಟಿ / ಸಮರೋಪಾದಿಯಲ್ಲಿ ಕಾರ್ಯನಿರ್ವಹಿಸಲು ಸೂಚನೆ

**ಗದಗ:** ಮಹಾತ್ಮಗಾಂಧಿ ಉದ್ಯೋಗ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಉದ್ಯೋಗ ಚೀಟಿ (ಎಂಥ ಅಚಿಡಿಜ)ಗಳಿಗೆ ಎನ್‌ಎಂಎಂಎಸ್ ಆ್ಯಪ್ ಮೂಲಕ ಇ-ಕೆವೈಸಿ ಮಾಡುವುದು ಕಡ್ಡಾಯವಾಗಿದ್ದು ಸಮರೋಪಾದಿಯಲ್ಲಿ ಈ ಕಾರ್ಯವನ್ನು ಪೂರ್ಣಗೊಳಿಸುವಂತೆ ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೊರವನವರ ಗ್ರಾಪಂ ಸಿಬ್ಬಂದಿಗೆ ಸೂಚಿಸಿದರು.



ಗದಗ ತಾಲೂಕು ಪಂಚಾಯತಿಯಿಂದ ಬುಧವಾರ ಗೂಗಲ್ ಮೀಟ್ ಮೂಲಕ ಆಯೋಜಿಸಲಾದ ಸಭೆಯಲ್ಲಿ ಅವರು ಮಾತನಾಡಿದರು.

ತಾಲೂಕು ವ್ಯಾಪ್ತಿಯಲ್ಲಿ ಒಟ್ಟು 27 ಗ್ರಾಮ ಪಂಚಾಯತಿಗಳಿದ್ದು, ಒಟ್ಟು 52,022 ಸಕ್ರಿಯ ಉದ್ಯೋಗ ಚೀಟಿಗಳಿವೆ. ಸದ್ಯ ಸಕ್ರಿಯ ಉದ್ಯೋಗ ಚೀಟಿಗಳಿಗೆ ಇ- ಕೆವೈಸಿ ಮಾಡುವಂತೆ ಆಯುಕ್ತಾಲಯದಿಂದ ಆದೇಶ ಬಂದಿದೆ. ಅದರಂತೆ ತಾಲೂಕಿನ ಎಲ್ಲ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ತಮ್ಮ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಈ ಬಗ್ಗೆ ಜಾಗೃತಿ ಮೂಡಿಸಬೇಕು. ಜೊತೆಗೆ ಇ-ಕೆವೈಸಿ ಕಾರ್ಯಕ್ಕೆ ಅಗತ್ಯ ಸಿಬ್ಬಂದಿಯನ್ನು ನಿಯೋಜಿಸಿಕೊಂಡು ಸಕ್ರಿಯವಾಗಿರುವ ಜಾಬ್‌ಕಾರ್ಡ್‌ಗಳಿಗೆ ಇ-ಕೆವೈಸಿ ಮಾಡಿಸುವಂತೆ ಸೂಚಿಸಿದರು.

ತಾಲೂಕು ಪಂಚಾಯತಿ ಸಹಾಯಕ ನಿರ್ದೇಶಕ (ಉಖಾ) ಕುಮಾರ ಪೂಜಾರ ಅವರು ಮಾತನಾಡಿ, ಗದಗ ಜಿಲ್ಲೆಯಲ್ಲಿಯೇ ಅತಿ ಹೆಚ್ಚು ಗ್ರಾಪಂಗಳು ಗದಗ ತಾಲೂಕು ಪಂಚಾಯತಿ ವ್ಯಾಪ್ತಿಯಲ್ಲಿ ಬರುತ್ತವೆ. ಜಿಲ್ಲೆಯಲ್ಲಿ ಅತಿ ಹೆಚ್ಚು ಸಕ್ರಿಯ ಉದ್ಯೋಗ ಚೀಟಿಗಳು ಗದಗ ತಾಲೂಕಿನಲ್ಲಿವೇ. ಗ್ರಾಮ ಪಂಚಾಯತಿಯ ಗ್ರಾಮ ಕಾಯಕ ಮಿತ್ರರು, ಬಿಎಫ್‌ಟಿ, ಡಿಇಒ ಮತ್ತು ಕಾಯಕ ಬಂಧುಗಳನ್ನು ಸಕ್ರಿಯವಾಗಿ ಇ-ಕೆವೈಸಿ ಕಾರ್ಯದಲ್ಲಿ ತೊಡಗಿಸಿಕೊಂಡು ಪೂರ್ಣಗೊಳಿಸುವಂತೆ ತಿಳಿಸಿದರು.

# ಶ್ರೀ ಸತ್ಯನಾರಾಯಣ ಪೂಜೆಗೆ ಆಹ್ವಾನ

**ದಾವಣಗೆರೆ:** ದಾವಣಗೆರೆಯ ಶ್ರೀ ಗಾಯತ್ರಿ ದೇವಿಯ ಉಪಾಸಕರ ಕ್ರಿಯಾತ್ಮಕ ಆಧ್ಯಾತ್ಮ ಸಂಸ್ಥೆ ಶ್ರೀ ಗಾಯತ್ರಿ ಪರಿವಾರದ ಬೆಳ್ಳಿಹಬ್ಬದ ಪ್ರಯುಕ್ತ 07-12-2025 ರಂದು ಭಾನುವಾರ ನಗರದ ಎಂ.ಸಿ.ಸಿ 'ಎ' ಬ್ಲಾಕ್‌ನ ಶ್ರೀ ಸುಕೃತೀಂದ್ರ ಕಲಾಮಂದಿರದಲ್ಲಿ ಸಾಮೂಹಿಕ ಶ್ರೀ ಸತ್ಯನಾರಾಯಣ ಪೂಜೆ ಹಮ್ಮಿಕೊಳ್ಳಲಾಗಿದೆ ಎಂದು ಪರಿವಾರದ ಅಧ್ಯಕ್ಷರಾದ ಡಾ॥ ರಮೇಶ್ ಪಟೇಲ್ ತಿಳಿಸಿದ್ದಾರೆ.

ಯಾವುದೇ ಜಾತಿ, ಮತ, ಬೇಧವಿಲ್ಲದೇ ಸಾರ್ವಜನಿಕರು ಈ ಮಹತ್ವಪೂರ್ಣ ಪೂಜೆಯಲ್ಲಿ ಭಾಗವಹಿಸುವವರು ಸಂಕಲ್ಪಕ್ಕೆ ಈ ಕೆಳಗಿನ ಸನೀಹವಾಣಿಗಳಿಗೆ ಸಂಪರ್ಕಿಸಬಹುದು ಎಂದು ಪರಿವಾರದ ಕೋಶಾಧ್ಯಕ್ಷರಾದ ಪುರುಷೋತ್ತಮ ಡಿ.ಪಟೇಲ್ ಪ್ರಕಟಿಸಿದ್ದಾರೆ. ಶ್ರೀ ಗಾಯತ್ರಿ ಪರಿವಾರ 2000 ಇಸವಿಯಲ್ಲಿ ಪ್ರಾರಂಭವಾಗಿ 25 ವರ್ಷಗಳ ಕಾಲ ನಿರಂತರವಾಗಿ ಪ್ರತೀ ಹುಣ್ಣಿಮೆಯಂದು ಸಾರ್ವಜನಿಕವಾಗಿ ಯಾವುದೇ ಜಾತಿ, ಮತ, ಲಿಂಗಭೇದವಿಲ್ಲದೇ ಸಾಮೂಹಿಕ ಗಾಯತ್ರಿ ಪೂಜೆ, ಉಪಾಸನೆ ನಡೆಯುತ್ತಿರುವ ಈ ಗಾಯತ್ರಿ ಮಂತ್ರ ಪಠಣ ನಡೆಯುತ್ತಿರುವುದು ದಾವಣಗೆರೆಯ ಶ್ರೀ ಕೃಷ್ಣ ಸೇವಾ ಟ್ರಸ್ಟ್‌ನ ಸಹಯೋಗದಲ್ಲಿ ನಡೆಯುತ್ತಿರುವ ಈ ರಜತ ಮಹೋತ್ಸವಕ್ಕೆ ಭಾಗವಹಿಸುವವರು 9845277088, 9448979957, 9538732777, 9342441194 ಈ ಸನೀಹವಾಣಿಗಳಿಗೆ ಸಂಪರ್ಕಿಸಿ ಹೆಸರು ನೊಂದಾಯಿಸಬೇಕಾಗಿದೆ.

# ಮಧ್ಯಸ್ಥಿಕೆ ಕೇಂದ್ರದಲ್ಲಿ 92 ಪ್ರಕರಣಗಳು ಇತ್ಯರ್ಥ

**ಚಿಕ್ಕಮಗಳೂರು:** ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಧ್ಯಸ್ಥಿಕೆ ಮತ್ತು ಸಂಧಾನ ಸಮಿತಿಯ ಆಶ್ರಯದಲ್ಲಿ ಕಳೆದ ಜುಲೈ 1 ರಿಂದ ಅಕ್ಟೋಬರ್ 6ರವರೆಗೆ 'ರಾಷ್ಟ್ರಕ್ಕಾಗಿ ವಿಶೇಷ ಅಭಿಯಾನ'ದಡಿ ಜಿಲ್ಲಾ ಮತ್ತು ತಾಲ್ಲೂಕು ನ್ಯಾಯಾಲಯಗಳಿಗೆ ಸಂಬಂಧಿಸಿದಂತೆ ಮಧ್ಯಸ್ಥಿಕೆ ಕೇಂದ್ರಕ್ಕೆ ಬಂದ ಒಟ್ಟು 599 ಪ್ರಕರಣಗಳಲ್ಲಿ 92 ಪ್ರಕರಣಗಳು ಇತ್ಯರ್ಥಗೊಂಡಿವೆ.

ಜುಲೈ ಅಂತ್ಯಕ್ಕೆ ಬಾಕಿ ಇದ್ದ 203 ವೈವಾಹಿಕ ವಿವಾದಗಳಲ್ಲಿ 98 ಪ್ರಕರಣಗಳು ಮಧ್ಯಸ್ಥಿಕೆ ಕೇಂದ್ರಕ್ಕೆ ಬಂದಿದ್ದು, ಇವುಗಳ ಪೈಕಿ 33 ಪ್ರಕರಣಗಳು ಇತ್ಯರ್ಥವಾಗಿವೆ. ಅಪಘಾತ ಹಕ್ಕಿನ 307 ಪ್ರಕರ್ಣಗಳಲ್ಲಿ 135 ಮಧ್ಯಸ್ಥಿಕೆಗೆ ಬಂದರೂ ಇತ್ಯರ್ಥವಾಗಿಲ್ಲ. 57 ಕೌಟುಂಬಿಕ ದೌರ್ಜನ್ಯ ಪ್ರಕರಣಗಳಲ್ಲಿ 28 ಪ್ರಕರಣಗಳು ಮಧ್ಯಸ್ಥಿಕೆಗೆ ಬಂದಿದ್ದು, 8 ಪ್ರಕರಣಗಳು ಇತ್ಯರ್ಥವಾಗಿವೆ. ಚೆಕ್‌ಬೌನ್ಸ್‌ನ 268 ರಲ್ಲಿ 102 ಮಧ್ಯಸ್ಥಿಕೆಗೆ ಬಂದಿದ್ದು, 13 ಇತ್ಯರ್ಥವಾಗಿವೆ.

71 ವಾಣಿಜ್ಯ ವಿವಾದಗಳಲ್ಲಿ 15 ಮಧ್ಯಸ್ಥಿಕೆಗೆ ಬಂದಿದ್ದು, ಒಂದು ಮಾತ್ರ ಇತ್ಯರ್ಥವಾಗಿದೆ. ಸಂಜ್ಞೆಯ ಅಪರಾಧಿಕಾರದ 194 ರಲ್ಲಿ 64 ಮಧ್ಯಸ್ಥಿಕೆಗೆ ಬಂದಿದ್ದು, 2 ಮಾತ್ರ ಇತ್ಯರ್ಥವಾಗಿವೆ. ಮಧ್ಯಸ್ಥಿಕೆಗೆ ಬಂದಿದ್ದ ಸಾಲ ವಸೂಲಾತಿಯ ಒಂದು ಪ್ರಕರಣ ಇತ್ಯರ್ಥವಾಗಿದ್ದರೆ, 875 ವಿಭಾಗ ಪ್ರಕರಣಗಳಲ್ಲಿ ಮಧ್ಯಸ್ಥಿಕೆಗೆ ಬಂದಿದ್ದ 81 ರಲ್ಲಿ 13 ಮಾತ್ರ ಇತ್ಯರ್ಥವಾಗಿವೆ. ನಾಲ್ಕು ಭೂಸ್ವಾಧೀನ ಪ್ರಕರಣಗಳಲ್ಲಿ ಒಂದು ಮಾತ್ರ ಇತ್ಯರ್ಥವಾಗಿದೆ. ಇತರೆ ಸೂಕ್ತ ಸಿವಿಲ್‌ನ 752 ಪ್ರಕರಣಗಳ ಪೈಕಿ ಮಧ್ಯಸ್ಥಿಕೆಗೆ ಬಂದಿದ್ದ 75 ರಲ್ಲಿ 19 ಇತ್ಯರ್ಥವಾಗಿವೆ ಎಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ವಿ.ಹನುಮಂತಪ್ಪ ಅವರು ತಿಳಿಸಿದ್ದಾರೆ.

ರಾಜ್ಯಾದ್ಯಂತ ಒಟ್ಟು 13,86,837 ಪ್ರಕರಣಗಳಲ್ಲಿ 5575 ಪ್ರಕರಣಗಳು ಇತ್ಯರ್ಥವಾಗಿವೆ ಎಂದು ಅವರು ಮಾಹಿತಿ ನೀಡಿದ್ದಾರೆ.

# ಉಚಿತ ತರಬೇತಿ

**ಚಿಕ್ಕಮಗಳೂರು:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಬ್ಯೂಟಿ ಪಾರ್ಲರ್ ಕುರಿತ 35 ದಿನಗಳ ಉಚಿತ ತರಬೇತಿಯು ನವೆಂಬರ್ 4 ರಿಂದ ಪ್ರಾರಂಭವಾಗಲಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವತಿಯರು ಅರ್ಜಿ ಸಲ್ಲಿಸಬಹುದು.

ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಬಿಪಿಎಲ್ ಕಾರ್ಡ್ ಅಥವಾ ಜಾಬ್ ಕಾರ್ಡ್ ಹಾಗೂ ಆಧಾರ್ ಕಾರ್ಡ್ ಅನ್ನು ಕಡ್ಡಾಯವಾಗಿ ಹೊಂದಿರುವ ಗ್ರಾಮೀಣ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು. ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು.

ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗೆ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9380162042, 9481506564, 9113880324, 08027728166 ಅನ್ನು ಸಂಪರ್ಕಿಸಬಹುದು ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕ ರವಿಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಗತಿ ಪರಿಶೀಲನಾ ಸಭೆ

**ಗದಗ :** ಕನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರಾದ ಬಿ.ಆರ್ ಪಾಟೀಲ್ ರವರ ಅಧ್ಯಕ್ಷತೆಯಲ್ಲಿ ಆಕ್ಟೋಬರ್ 8 ರಂದು ಬೆಳಗ್ಗೆ 10ಗಂಟೆಗೆ ಮಹಾತ್ಮಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ,

ಗದಗದಲ್ಲಿ ಬೆಳಗಾವಿ ವಿಭಾಗದ ಕಿತ್ತೂರು ಕರ್ನಾಟಕದ ಅಡಿಯಲ್ಲಿ ಬರುವ 07ಜಿಲ್ಲೆಗಳು 2026/27ನೇ ಸಾಲಿನ ವಾರ್ಷಿಕ ಜಿಲ್ಲಾ ಕರುಡು ಯೋಜನೆ, ಸಮಗ್ರ ಮತ್ತು ಸುಸ್ಥಿರ ಜಿಲ್ಲಾ ಅಭಿವೃದ್ಧಿ ಯೋಜನೆ-2025 ಹಾಗೂ ಜಿಲ್ಲಾ ಮಾನವ ಅಭಿವೃದ್ಧಿ ಯೋಜನೆ-2025 ವರದಿಗಳ ತಯಾರಿಕೆ ಕುರಿತು ಪ್ರಗತಿ ಪರಿಶೀನಾ ಸಭೆಯನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿರುತ್ತಾರೆ.

## ಸತ್ಯಮ್ಮದೇವಿ ಜಾತ್ರಾ ಮಹೋತ್ಸವ

**ಗದಗ:** ಮುಂಡರಗಿ ತಾಲೂಕಿನ ಹಾರೋಗೇರಿ ಗ್ರಾಮದಲ್ಲಿ ಸತ್ಯಮ್ಮದೇವಿ ಜಾತ್ರಾಮಹೋತ್ಸವ ಅದ್ದೂರಿಯಿಂದ ಜರುಗಿತು.

ಜಾತ್ರಾ ಮಹೋತ್ಸವದ ಅಂಗವಾಗಿ ಸತ್ಯಮ್ಮದೇವಿಗೆ ವಿಶೇಷ ಅಲಂಕಾರ ಮಾಡಲಾಗಿತ್ತು. ಹಾರೋಗೇರಿ ಸೇರಿ ಸುತ್ತಮುತ್ತಲಿನ ಗ್ರಾಮಸ್ಥರು ದೇವಿಯ ದರ್ಶನಾಶೀರ್ವಾದ ಪಡೆದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದೊಂದಿಗೆ ಕಲಾವಿದೆ ಸುಮಂಗಲಾ ಪೂಜಾರ ಅವರಿಂದ ಸುಗಮ ಸಂಗೀತ ಕಾರ್ಯಕ್ರಮ ಹಾಗೂ ಶ್ರೀ ಸತ್ಯಮ್ಮದೇವಿ ಬಯಲಾಟ ಸಂಘದಿಂದ ರಕ್ತರಾತ್ರಿ ಅರ್ಥಾತ್ ವೀರ ಅಶ್ವತ್ಥಾಮ ಸಾಮಾಜಿಕ ನಾಟಕ ಪ್ರದರ್ಶನಗೊಂಡಿತು.



## ಕೇಶ ವಿನ್ಯಾಸಗಾರರಿಗೆ ಕಿಟ್ ವಿತರಿಸಿದ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್



**ದಾವಣಗೆರೆ:** ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಅವರ 58ನೇ ಜನ್ಮದಿನದ ಹಿನ್ನೆಲೆಯಲ್ಲಿ ಜಿಲ್ಲೆಯ ಕೇಶ ವಿನ್ಯಾಸಗಾರರಿಗೆ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರು ತಮ್ಮ ಗೃಹಕಚೇರಿಯ ಆವರಣದಲ್ಲಿ ಮಂಗಳವಾರ ಸುಮಾರು 500 ಕಿಟ್‌ಗಳನ್ನು ವಿತರಿಸಿದರು.

ಈ ಕಾರ್ಯಕ್ರಮವನ್ನು ಎಸ್.ಎಸ್.ಎಂ. ಫೌಂಡೇಶನ್‌ನಿಂದ ಆಯೋಜಿಸಲಾಗಿತ್ತು.

ಈ ಮೂಲಕ ಸ್ಥಳೀಯ ಕೇಶ ವಿನ್ಯಾಸಗಾರರ ವೃತ್ತಿಜೀವನಕ್ಕೆ ಅಗತ್ಯವಾದ ಆಧಾರವನ್ನು ಒದಗಿಸುವುದರ ಜೊತೆಗೆ, ಅವರ ಸ್ವಾವಲಂಬನೆಗೆ ಬಲ ನೀಡುವ ಮಹತ್ವದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ಮಾತನಾಡಿದ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರು ಕಿಟ್ ನ ಸಮರ್ಪಕವಾಗಿ ಬಳಕೆ ಮಾಡಿಕೊಂಡು ವೃತ್ತಿಜೀವನ ನಡೆಸಬೇಕೆಂದು ಸಲಹೆ ನೀಡಿದರು.

## ಪಟಾಕಿ ಮಾರಾಟ : ಅಗತ್ಯ ಸುರಕ್ಷತಾ ಕ್ರಮ ಅನುಸರಿಸಲು ಸೂಚನೆ

ಹಾಸನ ಅ.8(ಕರ್ನಾಟಕ ವಾರ್ತೆ):- ದೀಪಾವಳಿ ಹಬ್ಬದ ಹಿನ್ನೆಲೆಯಲ್ಲಿ ಪಟಾಕಿ ಮಾರಾಟ ಮಾಡಲು ತಾತ್ಕಾಲಿಕ ಪರವಾನಗಿ ಪಡೆದು ಮಾರಾಟ ಮಾಡುವ ಸಂದರ್ಭದಲ್ಲಿ ಅಗತ್ಯ ಸುರಕ್ಷತಾ ಕ್ರಮಗಳನ್ನು ಅನುಸರಿಸುವಂತೆ ಜಿಲ್ಲಾಧಿಕಾರಿ ಲತಾ ಕುಮಾರಿ ಅವರು ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇಂದು ನಡೆದ ಪಟಾಕಿ ಮಾರಾಟ ಕುರಿತು ನಡೆದ ಸಭೆ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಜಿಲ್ಲಾ ಮಟ್ಟದಲ್ಲಿ ಒಂದು ಸಮಿತಿ ರಚಿಸಿ ಅವರ ಕರ್ತವ್ಯ ಮತ್ತು ಜವಾಬ್ದಾರಿ ನಿರ್ವಹಣೆಗೆ ಕ್ರಮವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಅ.19 ರಿಂದ 22 ವರೆಗೆ ಬೆಳಗ್ಗೆ 9.30 ರಿಂದ ಸಂಜೆ 7.30 ವರೆಗೆ ಮಾತ್ರ ಮಾರಾಟ ಮಾಡಬೇಕು. ಎಸ್.ಎಂ.ಕೃಷ್ಣ ನಗರದ ಸಿ.ಐ.ಟಿ.ಬಿ. ವ್ಯಾಪ್ತಿಯಲ್ಲಿರುವ ಖಾಲಿ ಪ್ರದೇಶದ ನಿಗಧಿತ ಸ್ಥಳದಲ್ಲಿ ಮಾರಾಟ ಮಾಡಬೇಕು,ಹಸಿರು ಪಟಾಕಿಗಳನ್ನು ಮಾತ್ರ ಮಾರಾಟ ಮಾಡಬೇಕು.ಸ್ವಚ್ಛತೆಗೆ ಕ್ರಮವಹಿಸಬೇಕು ಹಾಗೂ ಪ್ರವೇಶ ಮತ್ತು ನಿರ್ಗಮನ ದ್ವಾರದಲ್ಲಿ ಸಿ.ಸಿ.ಕ್ಯಾಮರ ಅಳವಡಿಸಬೇಕು ಎಂದು ತಿಳಿಸಿದರು.

ಪರವಾನಗಿ ಪಡೆಯದೆ ಕಾನೂನು ಬಾಹಿರವಾಗಿ ಪಟಾಕಿ ಮಾರಾಟ ಮಾಡುವುದು ಕಂಡುಬಂದಲ್ಲಿ ತಕ್ಷಣ ಪ್ರಕರಣ ದಾಖಲಿಸಿ ಉಲ್ಲಂಘನೆ ಮಾಡಿದವರ ವಿರುದ್ಧ ಕ್ರಮಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಪಟಾಕಿ ಮಾರಾಟ ಮಾಡಲು ತಾತ್ಕಾಲಿಕ ಪರವಾನಗಿ ಪಡೆಯುವವರು ಎ.ಬಿ.ಸಿ.ಪೌಡರ್ ನಿರ್ವಹಣೆ ಬಗ್ಗೆ ಅಂಗಡಿ ಮಳಿಗೆ ತೆರೆಯುವ ಮುಂಚೆ ಕಡ್ಡಾಯವಾಗಿ ಅಗ್ನಿಶಾಮಕ ಇಲಾಖೆಯಿಂದ ತರಬೇತಿ ಪಡೆಯುವಂತೆ ತಿಳಿಸಿದರು.

ತಾತ್ಕಾಲಿಕ ಪಟಾಕಿ ಮಾರಾಟ ಪರವಾನಗಿಯು ಕೇವಲ ಪರವಾನಗಿಯಲ್ಲಿ ನಿರ್ದಿಷ್ಟಪಡಿಸಿದ ಅವಧಿಯವರೆಗೆ ಮಾತ್ರ ಚಾಲ್ತಿಯಲ್ಲಿರುತ್ತದೆ.ಸದರಿ ಪರವಾನಗಿಯು ಕೇವಲ ಪಟಾಕಿ ಮಾರಾಟ ಮಾಡುವ ಸಲುವಾಗಿ ನೀಡಲಿದ್ದು, ಯಾವುದೇ ರೀತಿಯ ಪಟಾಕಿಗಳನ್ನು ತಯಾರಿಸುವಂತಿಲ್ಲ ಮತ್ತು ಅವಧಿ ನಂತರ ಮಾರಾಟ ಮತ್ತು ಶೇಖರಣೆ ಮಾಡಬಾರದು ಎಂದು ತಿಳಿಸಿದರು.

ಸಾರ್ವಜನಿಕರು ರಾತ್ರಿ 10 ಗಂಟೆ ನಂತರ ಪಟಾಕಿಯನ್ನು ಸಿಡಿಸಬಾರದು ಹಾಗೂ ಪಟಾಕಿ ಸಿಡಿಸಿದ ನಂತರ ತ್ಯಾಜ್ಯ ವಸ್ತುಗಳನ್ನು ಸ್ವಚ್ಛಗೊಳಿಸಿ ಸರಿಯಾದ ರೀತಿಯಲ್ಲಿ ವಿಲೇವಾರಿ ಮಾಡಬೇಕು ಎಂದು ತಿಳಿಸಿದರು.

## ಮನೆ ಮನೆ ಭೇಟಿ ನೀಡಿ ಇ ಕೆವೈಸಿ ಪ್ರಕ್ರಿಯೆ ನಡೆಸಿದ ಮುಂಡರಗಿ ತಾಪಂ ಇಓ

**ಮುಂಡರಗಿ:** ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿ ಕೆಲಸ ಮಾಡುತ್ತಿರುವ ಕೂಲಿಕಾರರಿಗೆ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯದಿಂದ ಇ-ಕೆವೈಸಿ ಕಡ್ಡಾಯವಾಗಿರುವ ಹಿನ್ನೆಲೆ ಇಂದು ತಾಪಂ ಇಓ ವಿಶ್ವನಾಥ ಹೊಸಮನಿ ಕೊರ್ಲಹಳ್ಳಿ ಗ್ರಾಪಂ ವ್ಯಾಪ್ತಿಯ ಬೆಣ್ಣಿಹಳ್ಳಿ ಗ್ರಾಮದ ಮನೆಮನೆಗಳಿಗೆ ಭೇಟಿ ನೀಡಿ ಇ-ಕೆವೈಸಿ ಪ್ರಕ್ರಿಯೆಯನ್ನು ಖುದ್ದು ಅವರೇ ನಿರ್ವಹಿಸಿದರು.

ನರೇಗಾ ಯೋಜನೆಯ ವಿಶ್ವಾಸಾರ್ಹತೆ ಹಾಗೂ ಪಾರದರ್ಶಕತೆ ಹೆಚ್ಚಿಸುವ ನಿಟ್ಟಿನಲ್ಲಿ ಇ ಕೆವೈಸಿ ಪ್ರಕ್ರಿಯೆ ಪೂರ್ಣಗೊಂಡರೆ ಕೂಲಿ ಪಾವತಿಗೆ ವೇಗ ಸಿಗಲಿದೆ. ಈ ಪ್ರಕ್ರಿಯೆಯಲ್ಲಿ ಫೇಸ್ ಅಥೆಂಟಿಕೇಶನ್ ಮೂಲಕ ಮಾಹಿತಿಯನ್ನು ನಿಖರವಾಗಿ ದಾಖಲಿಸಬಹುದು. ಕಾಮಗಾರಿ ನಂತರ ಕೂಲಿಕಾರರ ಪೋಟೊ ಮತ್ತವರ ಆಧಾರ್ ಸಂಖ್ಯೆಯೊಂದಿಗೆ ಹಾಜರಾತಿ ದೃಢೀಕರಣವು ನಡೆಯಲಿದೆ.

ಎನ್ ಎಂಎಂಎಸ್ (ನ್ಯಾಷನಲ್ ಮೋಬೈಲ್ ಮಾನಿಟರಿಂಗ್ ಸಿಸ್ಟಂ) ಇ ಕೆವೈಸಿ ಪ್ರಕ್ರಿಯೆ ನರೇಗಾ ಕೂಲಿಕಾರರಿಗೆ ಕಡ್ಡಾಯವಾಗಿದ್ದು, ಮುಂಡರಗಿ ತಾಲೂಕಿನಲ್ಲಿ ಈ ಪ್ರಕ್ರಿಯೆ ಜಾರಿಯಲ್ಲಿದೆ. ಇದನ್ನು ತೀವ್ರತರದಲ್ಲಿ ಪ್ರಗತಿ ಸಾಧಿಸುವ ನಿಟ್ಟಿನಲ್ಲಿ




ತಾಪಂ ಇಓ ವಿಶ್ವನಾಥ ಅವರು, ಬೆಣ್ಣಿಹಳ್ಳಿ ಗ್ರಾಮದ ನರೇಗಾ ಕೂಲಿಕಾರರ ಮನೆಮನೆಗೆ ಭೇಟಿ ನೀಡಿ ಖುದ್ದು ತಾವೇ ಮೋಬೈಲ್ ಮೂಲಕ ಪ್ರಕ್ರಿಯೆಯನ್ನು ನಿರ್ವಹಿಸಿದರು.

ನರೇಗಾ ಯೋಜನೆ ಮೂಲಕ ಗ್ರಾಮೀಣ ಜನರಿಗೆ, ಕೂಲಿಕಾರರಿಗೆ 100 ದಿನಗಳ ಉದ್ಯೋಗ ಖಾತ್ರಿಯಾಗಿದ್ದು, ಪಾರದರ್ಶಕತೆಯಿಂದ ಕೇಂದ್ರ ಹಾಗೂ ರಾಜ್ಯ ಸರಕಾರಗಳ ಮಹತ್ವಾಕಾಂಕ್ಷಿ ಯೋಜನೆಯ ಕಾಮಗಾರಿಗಳ ಸಮರ್ಪಕ ಅನುಷ್ಠಾನದ ಜೊತೆಗೆ ಪಾರದರ್ಶಕ ಹಾಜರಾತಿಗೆ ಇ ಕೆವೈಸಿ ವಿಧಾನ ವರದಾನವಾಗಿದೆ.

## ಸಮೀಕ್ಷೆಗೆ ಒಳಗೊಳ್ಳಲು ತಾಲ್ಲೂಕಿನದ್ಯಾಂತ ಸಹಾಯವಾಣಿ ತೆರೆಯಲಾಗಿದೆ: ಡಿಸಿ ಗುರುದತ್ತ ಹೆಗಡೆ

**ಶಿವಮೊಗ್ಗ:** ಜಿಲ್ಲೆಯಲ್ಲಿ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಸಮೀಕ್ಷೆಗೆ ಒಳಪಡದ ಕುಟುಂಬಗಳು ಹಾಗೂ ಸದಸ್ಯರು ಸಮೀಕ್ಷೆಗೆ ಒಳಗೊಳ್ಳಲು ಆಯಾ ತಾಲ್ಲೂಕಿನಲ್ಲಿ ಸಹಾಯವಾಣಿಯನ್ನು ತೆರೆಯಲಾಗಿದೆ ಎಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ತಿಳಿಸಿದ್ದಾರೆ.

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಹಮ್ಮಿಕೊಂಡಿರುವ ಕರ್ನಾಟಕ ರಾಜ್ಯದ ನಾಗರೀಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಸಮೀಕ್ಷಾ ಕಾರ್ಯವು ಪ್ರಗತಿಯಲಿದ್ದು, ಶಿವಮೊಗ್ಗ ಜಿಲ್ಲೆಯಲ್ಲಿ ಇದುವರೆಗೂ ಶೇ.85 ರಷ್ಟು ಸಮೀಕ್ಷಾ ಕಾರ್ಯವು ಪೂರ್ಣಗೊಂಡಿದೆ.

ರಾಜ್ಯದ ಸರ್ಕಾರದ ಆದೇಶದಂತೆ ನಿಗದಿತ ಕಾಲಮಿತಿಯಲ್ಲಿ ಸಮೀಕ್ಷಾ ಕಾರ್ಯವನ್ನು ಪೂರ್ಣಗೊಳಿಸಲಾಗಿದ್ದು, ಇನ್ನೂ ಹಲವು ಕುಟುಂಬಗಳು ಸಮೀಕ್ಷೆಗೆ ಒಳಪಟ್ಟಿರುವುದಿಲ್ಲ ಹಾಗೂ ಸಮೀಕ್ಷೆಗೆ ಒಳಪಟ್ಟಿರುವ ಮನೆಗಳಲ್ಲಿ ಕುಟುಂಬದ ಸದಸ್ಯರು ಸಹಿತ ಹೊರಗೆ ಉಳಿದಿರುವುದು ಕಂಡುಬಂದಿದೆ. ಹಾಗಾಗಿ ಸಮೀಕ್ಷೆಗೆ ಒಳಪಡದ ಕುಟುಂಬಗಳು ಹಾಗೂ ಸದಸ್ಯರು ಸಮೀಕ್ಷೆಗೆ ಒಳಗೊಳ್ಳಲು ಸಹಾಯವಾಣಿಯನ್ನು ತೆರೆಯಲಾಗಿದೆ.

ಆಯಾ ತಾಲ್ಲೂಕಿಗೆ ಸಂಬಂಧಿಸಿದ ದೂರವಾಣಿ ಸಂಖ್ಯೆ: ಶಿವಮೊಗ್ಗ-08182-279312, ಭದ್ರಾವತಿ-8904325166, ಶಿಕಾರಿಪುರ-7795352158, ಸಾಗರ-08183-298014, ಸೊರಬ-9611097690, ತೀರ್ಥಹಳ್ಳಿ-9901088210/9481075115, ಹೊಸನಗರ-9741621135 ಗಳನ್ನು ಸಂಪರ್ಕಿಸಿ ತಮ್ಮ ವಾಸ ಸ್ಥಳದ ವಿವರವನ್ನು ನೀಡಿದಲ್ಲಿ ಗಣತಿದಾರರು ತಮ್ಮ ಮನೆಗೆ ಬಂದು ಸಮೀಕ್ಷೆ ಕಾರ್ಯವನ್ನು ನಡೆಸಲಿದ್ದಾರೆ.

## ಅರ್ಜಿ ಸಲ್ಲಿಸಲು ಸೂಚನೆ

**ರಾಮನಗರ:** 2025-26ನೇ ಸಾಲಿನಲ್ಲಿ ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ನಿರ್ದೇಶನಾಲಯದ ವತಿಯಿಂದ ನೊಂದಾಯಿತ ಭೌದ್ಧ ಧರ್ಮದಲ್ಲಿನ ಭೌದ್ಧ ವಿಹಾರಗಳಲ್ಲಿ ಮತ್ತು ನಿತ್ಯದ ಬೌದ್ಧದ ಧಾರ್ಮಿಕ ಕಾರ್ಯಗಳನ್ನು ನಡೆಸುತ್ತಾ ಸೇವೆ ಸಲ್ಲಿಸುತ್ತಿರುವ ಧರ್ಮಾಚಾರಿಗಳ (ಅರ್ಚಕರ) ಗಳಿಗೆ ಮಾಸಿಕ ಗೌರವಧನ ನೀಡುವ ಯೋಜನೆಗೆ ಅರ್ಹ ನೋಂದಾಯಿತ ಆಡಳಿತ ಮಂಡಳಿಗಳಿಂದ ಮಾಹಿತಿಯೊಂದಿಗೆ ನಿಗಧಿತ ನಮೂನೆಯನ್ನು ಭರ್ತಿ ಮಾಡಿ ಅರ್ಜಿಯನ್ನು ಒಂದು ವಾರದೊಳಗೆ ಬೆಂಗಳೂರು ದಕ್ಷಿಣ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ ಅಗತ್ಯ ದಾಖಲಾತಿಗಳೊಂದಿಗೆ ಸಲ್ಲಿಸಬೇಕು.ಹೆಚ್ಚಿನ ಮಾಹಿತಿಗೆ ಬೆಂಗಳೂರು ದಕ್ಷಿಣ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳ ಕಚೇರಿ, ಕೊಠಡಿ ಸಂಖ್ಯೆ:308,

ಕಂದಾಯಭವನ, ರಾಮನಗರ ಈ ಕಚೇರಿಯನ್ನು ಅಥವಾ ಮಾಹಿತಿ ಕೇಂದ್ರದ ಸಿಬ್ಬಂದಿಗಳ ದೂ.ಸಂಖ್ಯೆ 9886558821, 9880297132, 8197514161 ಅಥವಾ ದೂ. ಸಂಖ್ಯೆ: 080-27271104 ಅನ್ನು ಸಂಪರ್ಕಿಸುವಂತೆ ಬೆಂಗಳೂರು ದಕ್ಷಿಣ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಮೀಕ್ಷೆ ಸಂಬಂಧ ಸಹಾಯವಾಣಿ ಆರಂಭ

**ಚಿಕ್ಕಮಗಳೂರು:** 2025-26ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ನಡೆಸುತ್ತಿರುವ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಚಿಕ್ಕಮಗಳೂರು ತಾಲ್ಲೂಕಿನ ಗ್ರಾಮೀಣ ಪ್ರದೇಶದಲ್ಲಿ ಹಾಗೂ ನಗರದ 35 ವಾರ್ಡ್‌ಗಳಲ್ಲಿ ನಡೆಸಲು ಅನುಕೂಲವಾಗುವಂತೆ ಸಹಾಯವಾಣಿ ಸಂಖ್ಯೆಗಳನ್ನು ಆರಂಭಿಸಲಾಗಿದೆ.ಸಮೀಕ್ಷೆಗಾಗಿ ಪ್ರತಿ ಮನೆ ಮನೆಗೆ ಗಣತಿದಾರರು ಭೇಟಿ ನೀಡಿ ಗಣತಿ ಮಾಡುವ ಜೊತೆಗೆ ಗ್ರಾಮ ಪಂಚಾಯಿತಿಯ ಮಟ್ಟದಲ್ಲಿ ಗ್ರಾಮ ಪಂಚಾಯಿತಿ ಕಾರ್ಯಾಲಯಗಳಲ್ಲಿ ಹಾಗೂ ನಗರದ 35 ವಾರ್ಡ್ ಗಳಲ್ಲಿ ಶಿಬಿರದ ಮೂಲಕ ಕೈಗೊಂಡಿರುವ (ಮನೆ ಮನೆ ಭೇಟಿ ಸಂದರ್ಭದಲ್ಲಿ ಬಿಟ್ಟು ಹೋದ ಕುಟುಂಬಗಳು) ಸಮೀಕ್ಷೆಯಲ್ಲಿ ಭಾಗವಹಿಸಲು ಇದರಿಂದ ಅನುಕೂಲವಾಗಲಿದೆ.ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸಹಾಯವಾಣಿ ಸಂಖ್ಯೆ: ಟೋಲ್ ಫ್ರೀ ಸಂಖ್ಯೆ: 18004252281 ಹಾಗೂ ಕಚೇರಿ ದೂರವಾಣಿ ಸಂಖ್ಯೆ 08262-34017 ಹಾಗೂ ನಗರ ವ್ಯಾಪ್ತಿಗೆ ಸಹಾಯವಾಣಿ ಸಂಖ್ಯೆ: 08262-233136 ಆಗಿದೆ ಎಂದು ತಾಲ್ಲೂಕು ತಹಸೀಲ್ದಾರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## ಮತಕಳವು ಪ್ರಜಾಪ್ರಭುತ್ವದ ಕಗ್ಗೊಲೆ

**ಚಿಕ್ಕಮಗಳೂರು:** ದೇಶದಲ್ಲಿ ನಡೆಯುತ್ತಿರುವ ಮತಕಳ್ಳತನ ಪ್ರಕರಣತಡೆಯುವಂತೆ ಆಗ್ರಹಿಸಿ ಕಾಂಗ್ರೆಸ್‌ಕಾರ್ಯಕರ್ತರು ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಿ ಸಹಿ ಸಂಗ್ರಹಅಭಿಯಾನ ನಡೆಸಿದರು.



ಇಂದು ಬೆಳಗ್ಗೆ ಜಿಲ್ಲಾಕಾಂಗ್ರೆಸ್ ಹಾಗೂ ಬ್ಲಾಕ್‌ಕಾಂಗ್ರೆಸ್ ವತಿಯಿಂದಏರ್ಪಡಿಸಲಾಗಿದ್ದ ಸಹಿ ಸಂಗ್ರಹಅಭಿಯಾನದ ಅಂಗವಾಗಿ ನಗರದಆಜಾದ್ ಪಾರ್ಕ್‌ನಲ್ಲಿ ಸಮಾವೇಶಗೊಂಡ ಹಲವಾರು ಮುಖಂಡರು, ಕಾರ್ಯಕರ್ತರುಕೇಂದ್ರ ಸರಕಾರ ಮತ್ತುಚುನಾವಣಾಆಯೋಗದ ವಿರುದ್ಧ ಹರಿಹಾಯ್ದರು. ಕೇಂದ್ರ ಸರಕಾರದ ವಿರುದ್ಧಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.ಈ ವೇಳೆ ಶಾಸಕ ಎಚ್.ಡಿ.ತಮ್ಮಯ್ಯ ಮಾತನಾಡಿ, ಈಗಿನ ಬಿಜೆಪಿ ನೇತೃತ್ವದಕೇಂದ್ರ ಸರಕಾರ ಅಧಿಕಾರ ದುರ್ಬಳಕೆ ಮಾಡಿಕೊಂಡಷ್ಟುಯಾವ ಸರಕಾರಗಳು ಮಾಡಿಕೊಂಡಿಲ್ಲಎಂದು ಆರೋಪಿಸಿದರು. ಬಿಜೆಪಿ ಅಧಿಕಾರಕ್ಕೆ ಬಂದ ನಂತರ ಸಿಬಿಐ, ಇಡಿ ಮತ್ತಿತರೆ ಅನೇಕ ಸ್ವಾಯತ್ತ ಸಂವಿಧಾನಿಕ ಸಂಸ್ಥೆಗಳನ್ನು ದುರುಪಯೋಗಪಡಿಸಿಕೊಳ್ಳುತ್ತಿದೆ. ನ್ಯಾಯಾಂಗ ವ್ಯವಸ್ಥೆಯನ್ನೂ ಹದಗೆಡಿಸಿದೆ. ಈಗ ಮತಕಳ್ಳತನಕ್ಕೂ ಇಳಿದುಬಿಟ್ಟಿದೆ. ಇದನ್ನುಕಾಂಗ್ರೆಸ್ ಪ್ರತಿಪಕ್ಷ ನಾಯಕರಾಹುಲ್‌ಗಾಂಧಿಅವರು ಸಾಕ್ಷಿ ಸಮೇತ ಸಾಬೀತುಪಡಿಸಿದ್ದಾರೆ. ಕಾಂಗ್ರೆಸ್ ಮತದಾರರನ್ನುಡಿಲೀಟ್ ಮಾಡುವುದು, ಸತ್ತವರನ್ನು ಬದುಕಿಸುವುದು, ಬದುಕಿರುವವರನ್ನು ಸಾಯಿಸುವ ಕೆಲಸವನ್ನು ಮಾಡಿದ್ದಾರೆ. ಈ ಬಗ್ಗೆ ಮತದಾರರುಜಾಗೃತರಾಗಬೇಕುಎಂದು ಹೇಳಿದರು.ಕಾಂಗ್ರೆಸ್ ಮುಖಂಡ ಎಂ.ಎಲ್.ಮೂರ್ತಿ ಮಾತನಾಡಿ, ಮತಕಳ್ಳತನದ ಮೂಲಕ ದೇಶದಲ್ಲಿ ಪ್ರಜಾಪ್ರಭುತ್ವದಕಗ್ಗೊಲೆಯಾಗುತ್ತಿದೆ. ನಿನ್ನೆ ಸುಪ್ರೀಂಕೋರ್ಟ್ ಮುಖ್ಯ ನ್ಯಾಯಾಧೀಶರ ಮೇಲೆ ಶೂ ಎಸೆಯುವ ಪ್ರಯತ್ನ, ಕೇರಳದಲ್ಲಿ ರಾಹುಲ್‌ಗಾಂಧಿಗೆ ಬೆದರಿಕೆ, ಹೀಗೆ ದಿನನಿತ್ಯದೇಶದಲ್ಲಿ ಭಯದ ವಾತಾವರಣವನ್ನುಕಾಣುತ್ತಿದ್ದೇವೆ. ಮತಕಳವು ತಡೆಯಬೇಕಾದರೆಚುನಾವಣಾಆಯೋಗದ ಮುಖ್ಯಸ್ಥಯಾವುದೇ ಪಕ್ಷದ ಚಮಚಾ ಆಗಿರಬಾರದುಎಂದು ಹೇಳಿದರು. ಎಐಸಿಸಿ ಕಾರ್ಯದರ್ಶಿ ಬಿ.ಎಂ.ಸಂದೀಪ್, ಜಿಲ್ಲಾಧ್ಯಕ್ಷಡಾ. ಅಂಶುಮಂತ್, ಕೆಪಿಸಿಸಿ ವಕ್ತಾರಎಚ್.ಎಚ್.ದೇವರಾಜ್, ವಿಧಾನ ಪರಿಷತ್ ಮಾಜಿ ಸದಸ್ಯೆಗಾಯತ್ರಿಶಾಂತೇಗೌಡ ಮಾತನಾಡಿದರು.ಪ್ರತಿಭಟನೆಯಲ್ಲಿ ಬ್ಲಾಕ್‌ಕಾಂಗ್ರೆಸ್‌ಅಧ್ಯಕ್ಷಎಚ್.ಪಿ.ಮಂಜೇಗೌಡ, ಗ್ಯಾರಂಟಿ ಪ್ರಾಧಿಕಾರದಜಿಲ್ಲಾಧ್ಯಕ್ಷ ಎಂ.ಸಿ.ಶಿವಾನಂದ ಸ್ವಾಮಿ, ಸಿಡಿಎ ಅಧ್ಯಕ್ಷ ನಯಾಜ್‌ಅಹ್ಮದ್, ಮಲ್ಲೇಶಸ್ವಾಮಿ, ಪ್ರವೀಣ್, ಹಿರೇಮಗಳೂರು ರಾಮಚಂದ್ರ, ಮತ್ತಿತರರಿದ್ದರು.

## ಒಡಿಶ್ಶಾ ಅಥ್ಲೆಟಿಕ್ ಚಾಂಪಿಯನ್‌ಶಿಪ್‌ಗೆ ಜಿಲ್ಲಾ ಕ್ರೀಡಾಪಟುಗಳ ಆಯ್ಕೆ



**ಶಿವಮೊಗ್ಗ:** ಒಡಿಶಾದ ಭುವನೇಶ್ವರದಲ್ಲಿ ಅ.10 ರಿಂದ 14 ರವರೆಗೆ ನಡೆಯುವ 40ನೇ ನ್ಯಾಷನಲ್ ಜೂನಿಯರ್ ಅಥ್ಲೆಟಿಕ್ ಚ್ಯಾಂಪಿಯನ್ ಶಿಪ್-2025ರ ಕ್ರೀಡಾಕೂಟಕ್ಕೆ ಶಿವಮೊಗ್ಗ ಜಿಲ್ಲೆಯ ವಸತಿಶಾಲೆ/ಕ್ರೀಡಾಶಾಲೆಯ ಕ್ರೀಡಾಪಟುಗಳು ಆಯ್ಕೆಯಾಗಿದ್ದಾರೆ.

ಸಂಜಯ್ ಸುನೀಲ್ ಹಂಚಿನಮನೆ -60 ಮೀ ಓಟ ಹಾಗೂ ಮಿಡ್ಲ್ ರಿಲೇ, ಶರತ್ ಕೆ.ಜೆ.- 600 ಮೀ ಓಟ ಮತ್ತು ಮಿಡ್ಲ್ ರಿಲೇ, ಸಚಿನ್ ಎಲ್.ಜೆ.-60 ಮೀ ಓಟ, ಸಿರಿ ಕೆ.ಜೆ.-80 ಮೀ ಹರ್ಡಲ್ಸ್, ಆರ್ಯನ್ ಮತ್ತು ಅನ್ವಿತ ಎಂ.ಆರ್ ಎತ್ತರ ಜಿಗಿತ ಕ್ರೀಡೆಗಳಿಗೆ ಆಯ್ಕೆಯಾದ ಕ್ರೀಡಾಪಟುಗಳು. ಇವರುಗಳು ಕ್ರೀಡಾ ಇಲಾಖೆಯ ಕ್ರೀಡಾ ವಸತಿ ನಿಲಯದ ಅಥ್ಲೆಟಿಕ್ ತರಬೇತುದಾರ ಬಾಳಪ್ಪ ಮಾನೆಯವರಿಂದ ತರಬೇತಿ ಪಡೆಯುತ್ತಿದ್ದಾರೆ. ಆಯ್ಕೆಯಾದ ಕ್ರೀಡಾಪಟುಗಳಿಗೆ ಜಿಲ್ಲಾಧಿಕಾರಿಗಳು, ಕ್ರೀಡಾ ಇಲಾಖೆಯ ರೇಖ್ಯಾ ನಾಯ್ಕ, ಜಿಲ್ಲಾ ಅಥ್ಲೆಟಿಕ್ ಅಸೋಸಿಯೇಷನ್ ಕಾರ್ಯದರ್ಶಿಗಳು ಹಾಗೂ ಸಿಬ್ಬಂದಿ ವರ್ಗದವರು ಶುಭ ಕೋರಿದ್ದಾರೆ.

## ಮಾನ್ಯ ಸಿವಿಲ್ ಜಡ್ಜ ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ ಹೊನ್ನಾಳಿ

**ಕ್ರಿಮಿನಲ್ ಮಿಸ್ ನಂ: 366: 2025**

**ಅರ್ಜಿದಾರರು:** 1.) ಶ್ರೀ.ನಿಂಗಪ್ಪ ಟಿ. ಬಿನ್ ಲೇಟ್ ಮಲ್ಲಪ್ಪ ವಯಸ್ಸು ಸುಮಾರು 69 ವರ್ಷ. ವಾಸ: ಹರಳಹಳ್ಳಿ ಗ್ರಾಮ ಹೊನ್ನಾಳಿ ತಾಲೂಕು, ದಾವಣಗೆರೆ ಜಿಲ್ಲೆ 2.) ಗಂಗಮ್ಮ ಕೋಂ ಲೇಟ್ ಬಸಪ್ಪ ವಯಸ್ಸು ಸುಮಾರು 74 ವರ್ಷ. ವಾಸ: ಕುರುವ ಗ್ರಾಮ ನ್ಯಾಮತಿ ತಾಲೂಕು, ದಾವಣಗೆರೆ ಜಿಲ್ಲೆ, 3.) ಶಿವಮ್ಮ ಕೋಂ ಲೇಟ್ ಯಲ್ಲಪ್ಪ ವಯಸ್ಸು ಸುಮಾರು 70 ವರ್ಷ, ವಾಸ: ಗುಳದಹಳ್ಳಿ ಗ್ರಾಮ ಶಿಕಾರಿಪುರ ತಾಲೂಕು, ಶಿವಮೊಗ್ಗ ಜಿಲ್ಲೆ.

**: ವಿರುದ್ಧ :**

**ಎದುರುದಾರರು :** ತಹಸಿಲ್ದಾರರು, ಜನನ ಮತ್ತು ಮರಣ ನೋಂದಾಣಿ ಅಧಿಕಾರಿಗಳು ಹೊನ್ನಾಳಿ ಹೊನ್ನಾಳಿ ತಾಲೂಕು, ದಾವಣಗೆರೆ ಜಿಲ್ಲಾ

**: ಪ್ರಕಟಣೆ :**

ಈ ಮೇಲ್ಕಂಡ ಅರ್ಜಿದಾರರು ಸನ್ನಿಧಿ ನ್ಯಾಯಾಲಯದಲ್ಲಿ ಅರಿಕೆ ಮಾಡಿಕೊಳ್ಳುವುದೇನೆಂದರೆ. ಅರ್ಜಿದಾರರ ಅಮ್ಮನಾದ ಶ್ರೀಮತಿ, ಚೊಳಚಮ್ಮ ಕೋಂ ಮಲ್ಲಪ್ಪ ಇವರು ದಿನಾಂಕ ತಾ: 15-08-2000 ರಂದು ಹರಳಹಳ್ಳಿ ಗ್ರಾಮ ಹೊನ್ನಾಳಿ ತಾಲೂಕಿನಲ್ಲಿ ಮರಣಹೊಂದಿರುತ್ತಾರೆ. ಈ ದಿನಾಂಕಗಳನ್ನು ಮರಣದ ನಂತರ ಎದುರುದಾರರಿಗೆ ತಿಳಿಸದೇ ಇರುವುದರಿಂದ, ಆ ಮರಣ ದಿನಾಂಕವು ನೊಂದಾಣೇ ಆಗಿರುವುದಿಲ್ಲವೆಂದು ಹಾಗೂ ಲಭ್ಯವಿಲ್ಲವೆಂದು ಎದುರುದಾರರು ದಿನಾಂಕ: 13-11-2024 ರಂದು ಹಿಂಬರಹ ಕೊಟ್ಟಿರುತ್ತಾರೆ. ಅರ್ಜಿದಾರರು ತಮ್ಮ ಆಸ್ತಿಗಳ ಖಾತೆ ಬದಲಾವಣೆ ಮಾಡುವ ಉದ್ದೇಶದ ಸಲುವಾಗಿ ಈ ಮರಣ ದಾಖಲೆಯನ್ನು ಕೋರಿ ಈ ಮೇಲೆ ಹೇಳಿದ ಸದರಿ ನ್ಯಾಯಲಯಕ್ಕೆ ಅರ್ಜಿಯನ್ನು ಸಲ್ಲಿಸಿದ್ದು. ಸದರಿ ಮರಣ ದಿನಾಂಕವನ್ನು ನ್ಯಾಯಲಯದಿಂದ ಪಡೆಯಲು ಯಾರದಾದರೂ ತಕರಾರು: ಅಥವಾ ಅಭ್ಯಂತರವು, ಇದ್ದರೆ ಈ ಕೇಸಿನಲ್ಲಿ ಭಾಗವಹಿಸಲು ಅಥವಾ ತಕರಾರು ವಗೈರೆ ಸಲ್ಲಿಸಲು ಇಚ್ಛಿಸಿದಲ್ಲಿ ತಾ: 13/11/25 ರಂದು ಸದರಿ ಕೇಸು ಇದ್ದು. ಆ ದಿನ ಅಪೇಕ್ಷೆಯುಳ್ಳವರು ಹಾಜರಾಗಿ ತಮ್ಮ ಅಹವಾಲನ್ನು ಸಲ್ಲಿಸುವುದು. ಇಲ್ಲವಾದಲ್ಲಿ ಯಾರದ್ದೂ ಯಾವುದೇ ರೀತಿಯ ತಕರಾರು ವಗೈರೆ ಇಲ್ಲವೆಂದು ಪರಿಗಣಿಸಿ ಏಕಪಕ್ಷೀಯವಾಗಿ ಕೇಸು ತೀರ್ಮಾನಿಸಲ್ಪಡು ತಿಳಿಯಿರಿ.
ನ್ಯಾಯಾಲಯದ ಮುದ್ರೆ, ಸಹಿ ಹಾಗೂ ನನ್ನ ಸಹಿಯೊಂದಿಗೆ ಗೆ ತಾ-08/10/25 ರಂದು ನೀಡಲ್ಪಟ್ಟಿದೆ.

ಸಹಿ/-
ಅರ್ಜಿದಾರರ ಪರ ವಕೀಲರು
(ಸಂತೋಷ್ ಕುಮಾರ್ ಎಸ್.ಹೆಚ್)
ಬಿಎಸ್.ಸಿ ಎಲ್.ಎಲ್.ಬಿ

**ನ್ಯಾಯಾಲಯದ ಅಪ್ಪಣೆಯ ಮೇರೆಗೆ**
ಸಹಿ/
ಶಿರಸ್ತೇದಾರರು
ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ

## ಮಾನ್ಯ ಸಿವಿಲ್ ಜಡ್ಜ ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ ಹೊನ್ನಾಳಿ

**ಕ್ರಿಮಿನಲ್ ಮಿಸ್ ನಂ: 367: 2025**

**ಅರ್ಜಿದಾರರು:** 1.) ಶ್ರೀ.ನಿಂಗಪ್ಪ ಟಿ. ಬಿನ್ ಲೇಟ್ ಮಲ್ಲಪ್ಪ ವಯಸ್ಸು ಸುಮಾರು 69 ವರ್ಷ. ವಾಸ: ಹರಳಹಳ್ಳಿ ಗ್ರಾಮ ಹೊನ್ನಾಳಿ ತಾಲೂಕು, ದಾವಣಗೆರೆ ಜಿಲ್ಲೆ 2.) ಗಂಗಮ್ಮ ಕೋಂ ಲೇಟ್ ಬಸಪ್ಪ ವಯಸ್ಸು ಸುಮಾರು 74 ವರ್ಷ. ವಾಸ: ಕುರುವ ಗ್ರಾಮ ನ್ಯಾಮತಿ ತಾಲೂಕು, ದಾವಣಗೆರೆ ಜಿಲ್ಲೆ, 3.) ಶಿವಮ್ಮ ಕೋಂ ಲೇಟ್ ಯಲ್ಲಪ್ಪ ವಯಸ್ಸು ಸುಮಾರು 70 ವರ್ಷ, ವಾಸ: ಗುಳದಹಳ್ಳಿ ಗ್ರಾಮ ಶಿಕಾರಿಪುರ ತಾಲೂಕು, ಶಿವಮೊಗ್ಗ ಜಿಲ್ಲೆ.

**: ವಿರುದ್ಧ :**

**ಎದುರುದಾರರು :** ತಹಸಿಲ್ದಾರರು, ಜನನ ಮತ್ತು ಮರಣ ನೋಂದಾಣಿ ಅಧಿಕಾರಿಗಳು ಹೊನ್ನಾಳಿ ಹೊನ್ನಾಳಿ ತಾಲೂಕು, ದಾವಣಗೆರೆ ಜಿಲ್ಲಾ

**: ಪ್ರಕಟಣೆ :**

ಈ ಮೇಲ್ಕಂಡ ಅರ್ಜಿದಾರರು ಸನ್ನಿಧಿ ನ್ಯಾಯಾಲಯದಲ್ಲಿ ಅರಿಕೆ ಮಾಡಿಕೊಳ್ಳುವುದೇನೆಂದರೆ. ಅರ್ಜಿದಾರರ ಅಕ್ಕನಾದ ಶ್ರೀಮತಿ, ಸಾಮತಮ್ಮ ಕೋಂ ರಾಮಪ್ಪ ಇವರು ದಿನಾಂಕ ತಾ: 25-10-1996 ರಂದು ಕುರುವ ಗ್ರಾಮ ನ್ಯಾಮತಿ ತಾಲೂಕಿನಲ್ಲಿ ಮರಣಹೊಂದಿರುತ್ತಾರೆ. ಈ ದಿನಾಂಕಗಳನ್ನು ಮರಣದ ನಂತರ ಎದುರುದಾರರಿಗೆ ತಿಳಿಸದೇ ಇರುವುದರಿಂದ, ಆ ಮರಣ ದಿನಾಂಕವು ನೊಂದಾಣೇ ಆಗಿರುವುದಿಲ್ಲವೆಂದು ಹಾಗೂ ಲಭ್ಯವಿಲ್ಲವೆಂದು ಎದುರುದಾರರು ದಿನಾಂಕ: 13-11-2024 ರಂದು ಹಿಂಬರಹ ಕೊಟ್ಟಿರುತ್ತಾರೆ. ಅರ್ಜಿದಾರರು ತಮ್ಮ ಆಸ್ತಿಗಳ ಖಾತೆ ಬದಲಾವಣೆ ಮಾಡುವ ಉದ್ದೇಶದ ಸಲುವಾಗಿ ಈ ಮರಣ ದಾಖಲೆಯನ್ನು ಕೋರಿ ಈ ಮೇಲೆ ಹೇಳಿದ ಸದರಿ ನ್ಯಾಯಲಯಕ್ಕೆ ಅರ್ಜಿಯನ್ನು ಸಲ್ಲಿಸಿದ್ದು. ಸದರಿ ಮರಣ ದಿನಾಂಕವನ್ನು ನ್ಯಾಯಲಯದಿಂದ ಪಡೆಯಲು ಯಾರದಾದರೂ ತಕರಾರು ಅಥವಾ ಅಭ್ಯಂತರವು, ಇದ್ದರೆ ಈ ಕೇಸಿನಲ್ಲಿ ಭಾಗವಹಿಸಲು ಅಥವಾ ತಕರಾರು ವಗೈರೆ ಸಲ್ಲಿಸಲು ಇಚ್ಛಿಸಿದಲ್ಲಿ ತಾ: 13/11/25 ರಂದು ಸದರಿ ಕೇಸು ಇದ್ದು. ಆ ದಿನ ಅಪೇಕ್ಷೆಯುಳ್ಳವರು ಹಾಜರಾಗಿ ತಮ್ಮ ಅಹವಾಲನ್ನು ಸಲ್ಲಿಸುವುದು. ಇಲ್ಲವಾದಲ್ಲಿ ಯಾರದ್ದೂ ಯಾವುದೇ ರೀತಿಯ ತಕರಾರು ವಗೈರೆ ಇಲ್ಲವೆಂದು ಪರಿಗಣಿಸಿ ಏಕಪಕ್ಷೀಯವಾಗಿ ಕೇಸು ತೀರ್ಮಾನಿಸಲ್ಪಡು ತಿಳಿಯಿರಿ.
ನ್ಯಾಯಾಲಯದ ಮುದ್ರೆ, ಸಹಿ ಹಾಗೂ ನನ್ನ ಸಹಿಯೊಂದಿಗೆ ಗೆ ತಾ-08/10/25 ರಂದು ನೀಡಲ್ಪಟ್ಟಿದೆ.

ಸಹಿ/-
ಅರ್ಜಿದಾರರ ಪರ ವಕೀಲರು
(ಸಂತೋಷ್ ಕುಮಾರ್ ಎಸ್.ಹೆಚ್)
ಬಿಎಸ್.ಸಿ ಎಲ್.ಎಲ್.ಬಿ

**ನ್ಯಾಯಾಲಯದ ಅಪ್ಪಣೆಯ ಮೇರೆಗೆ**
ಸಹಿ/
ಶಿರಸ್ತೇದಾರರು
ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ

# ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ



**ಹಾಸನ :** ಕರ್ನಾಟಕ ಸರ್ಕಾರ, ಜಿಲ್ಲಾಆರೋಗ್ಯಮತ್ತುಕುಟುಂಬ ಕಲ್ಯಾಣಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯಕಾರ್ಯಕ್ರಮ ವಿಭಾಗ ಹಾಸನ, ಮನೋವೈದ್ಯಕೀಯ ವಿಭಾಗ, ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಜಿಲ್ಲಾ ಮಾನಸಿಕ ಆರೋಗ್ಯ ವಿಮರ್ಶನಾ ಮಂಡಳಿ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಂಯುಕ್ತಾಶ್ರಯದಲ್ಲಿ ಅ.10ರಂದು ಬೆ.09.30ಗಂಟೆಗ 'ಹಿಮ್ಸ್‌ಆಸ್ಪತ್ರೆಯಲ್ಲಿಮಾನಸಿಕ ಆರೋಗ್ಯ ವಿಮರ್ಶನಾ ಮಂಡಳಿಯ ಕೊಠಡಿಯಉದ್ಘಾಟನೆಯೊಂದಿಗೆವಿಶ್ವ ಮಾನಸಿಕ ಆರೋಗ್ಯ ದಿನಾಚರಣೆಯನ್ನುಆಯೋಜಿಸಲಾಗಿದೆ. ಅಂದು ಬೆ.10 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಿಂದ ಡಾ.ಬಿ.ಆರ್ ಅಂಬೇಡ್ಕರ್ ಭವನದವರೆಗೆ ಕಲಾ ತಂಡಗಳೊಂದಿಗೆ ಮೆರವಣಿಗೆ ನಡೆಯಲಿದೆ.

1ನೇ ಅಧಿಕಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಮಾನಸಿಕ ಆರೋಗ್ಯ ವಿಮರ್ಶನಾ ಮಂಡಳಿಯಅಧ್ಯಕ್ಷರಾದ ಶೈಲ ಬಿ.ಎಂಅವರುಕಾರ್ಯಕ್ರಮವುಉದ್ಘಾಟನೆ ಮಾಡಲಿದ್ದಾರೆ.ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕರಾದಡಾ॥ ರಾಜಣ್ಣಅವರು ಕಾರ್ಯಕ್ರಮದಅಧ್ಯಕ್ಷತೆ ವಹಿಸಲಿದ್ದಾರೆ.ಮುಖ್ಯ ಅತಿಥಿಗಳಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸದಸ್ಯ ಕಾರ್ಯದರ್ಶಿ ದಾಕ್ಷಾಯಿಣಿಜೆ.ಕೆ, ಜಿಲ್ಲಾಆರೋಗ್ಯ ಮತ್ತುಕುಟುಂಬ ಕಲ್ಯಾಣಾಧಿಕಾರಿಡಾ॥ಅನಿಲ್. ಹೆಚ್‌ಅವರು ಭಾಗವಹಿಸಲಿದ್ದಾರೆ. ಹಿಮ್ಸ್‌ನ ಮನೋವೈದ್ಯಕೀಯ ವಿಭಾಗದ ಮುಖ್ಯಸ್ಥರು ಹಾಗೂ ಪ್ರಾಧ್ಯಾಪಕರಾದಡಾ॥ಸಂತೋಷ್‌ಎಸ್.ವಿಅವರುಉಪನ್ಯಾಸ ನೀಡಲಿದ್ದಾರೆ.

# ಚನ್ನಗಿರಿಯಲ್ಲಿ ನೂತನ ಬಸ್ ಘಟಕ ಉದ್ಘಾಟನೆ, ಬಹು ದಿನಗಳ ಬೇಡಿಕೆ ಈಡೇರಿಕೆ ಸದ್ಬಳಕೆ ಮಾಡಿಕೊಳ್ಳಿ

**ದಾವಣಗೆರೆ:** ಚನ್ನಗಿರಿಯಲ್ಲಿ ಕೆಎಸ್ ಆರ್ ಟಿಸಿ ನೂತನ ಬಸ್ ಘಟಕ ಆರಂಭದಿಂದ

ಈ ಭಾಗದ ಜನರ ಬಹು ದಿನಗಳ ಬೇಡಿಕೆ ಈಡೇರಿದ್ದು ಇದರ ಪ್ರಯೋಜನ ಪಡೆದು ಕೊಳ್ಳುವಂತೆ ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್ ಮಲ್ಲಿಕಾರ್ಜುನ್ ಅವರು ತಿಳಿಸಿದರು.

ಅವರು ಬುಧವಾರ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ದಾವಣಗೆರೆ ಜಿಲ್ಲೆ ವತಿಯಿಂದ ಏರ್ಪಡಿಸಿದ್ದ ಚನ್ನಗಿರಿಯ ಅಜ್ಜಿಹಳ್ಳಿ ಬಳಿ ನೂತನವಾಗಿ ನಿರ್ಮಾಣ ಮಾಡಿರುವ ಬಸ್ ಘಟಕ ಉದ್ಘಾಟನೆ ಮಾಡಿ ಮಾತನಾಡಿದರು.

ಚನ್ನಗಿರಿ ಬಸ್ ಘಟಕ ಸ್ಥಾಪನೆಯಿಂದ ಈ ಭಾಗದಲ್ಲಿನ ವಾಹನ ಸಂಚಾರ ಸಮಸ್ಯೆ ನೀಗಿದ್ದು, ಹೊಸದಾಗಿ 40 ಹೆಚ್ಚುವರಿ ಬಸ್ ಘಟಕ್ಕೆ ಸೇರಿದಂತಾಗಿದೆ. ಇದರಿಂದ ತಾಲ್ಲೂಕಿನ ಪಟ್ಟಣ ಮತ್ತು ಗ್ರಾಮೀಣ ಭಾಗದ ಜನತೆಗೆ, ಸಾರ್ವಜನಿಕರಿಗೆ, ಮಹಿಳೆಯರು, ವಿಧ್ಯಾರ್ಥಿಗಳಿಗೆ ಹಾಗೂ ಹಳ್ಳಿಗಳಿಂದ ನಗರಕ್ಕೆ ಅಥವಾ ಇತರೆಡೆಗೆ ಹೋಗುವ ಕಾರ್ಮಿಕರಿಗೆ, ನೌಕರರಿಗೆ ಸಾಕಷ್ಟು ಅನುಕೂಲವಾಗಿದೆ. ಜಿಲ್ಲೆಯ ಎಲ್ಲಾ ತಾಲೂಕುಗಳಿಗೆ ಬಸ್ ನಿಲ್ದಾಣಗಳ ಅವಶ್ಯಕತೆ ಇದೆ. ಅದೇ ರೀತಿ ಚನ್ನಗಿರಿ ತಾಲೂಕಿನಲ್ಲಿಯೂ ಸಹ ಬಸ್ ನಿಲ್ದಾಣ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗಿದೆ. ದಾವಣಗೆರೆ ವಿಭಾಗದ ಹೊನ್ನಾಳಿ, ಹರಿಹರ ಜಗಳೂರು ಸೇರ್ಪಡೆಗೆ ಕ್ರಮವಹಿಸಲಾಗುವುದು ಎಂದು ತಿಳಿಸಿದರು.

ನೂತನ ಬಸ್ ನಿಲ್ದಾಣಕ್ಕೆ ಪಂಪಾಪತಿ ಹೆಸರು:



ದಾವಣಗೆರೆ ನೂತನ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣಕ್ಕೆ ಕ್ಷೇತ್ರದಲ್ಲಿ ಹೆಚ್ಚು ಜನಪರ ಕೆಲಸ ಮಾಡಿದ ಪಂಪಾಪತಿ ಅವರ ಹೆಸರಿಡಲು ತೀರ್ಮಾನಿಸಲಾಗಿದೆ. ಶಕ್ತಿ ಯೋಜನೆಯಡಿ ಜಿಲ್ಲೆಯಲ್ಲಿ 10.83 ಕೋಟಿ ಮಹಿಳಾ ಪ್ರಯಾಣಿಕರು ಪ್ರಯಾಣಿಸಿದ್ದು, ಇದರಲ್ಲಿ ಚನ್ನಗಿರಿ ತಾಲೂಕಿನ 13.11 ಲಕ್ಷ ಮಹಿಳಾ ಪ್ರಯಾಣಿಕರು ಪ್ರಯಾಣಿಸಿದ್ದಾರೆ ಎಂದು ತಿಳಿಸಿದರು.

ಕೆಎಸ್ ಆರ್ ಟಿಸಿಯಿಂದ ನೂತನವಾಗಿ 900 ಬಸ್ ಖರೀದಿಸಲಾಗುತ್ತಿದೆ. ಅದರಲ್ಲಿ ಜಿಲ್ಲೆಗೆ ಅವಶ್ಯವಿರುವ ಹೆಚ್ಚುವರಿ ಬಸ್‌ಗಳನ್ನು ನೀಡುವಂತೆ ಸಾರಿಗೆ ಸಚಿವರಿಗೆ ಮನವಿ ಮಾಡಿದರು.

ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ ಅವರು ಮಾತನಾಡಿ ನಾಲ್ಕು ಎಕರೆ ಜಮೀನಿನಲ್ಲಿ ಎಂಟು ಕೋಟಿ

ರೂ ವೆಚ್ಚದಲ್ಲಿ ಚನ್ನಗಿರಿ ತಾಲೂಕು ಬಸ್ ಘಟಕ ನಿರ್ಮಾಣ ಮಾಡಲಾಗಿದೆ. ರಾಜ್ಯದಲ್ಲಿ ಅತಿ ದೊಡ್ಡ ಬಸ್ ನಿಲ್ದಾಣ ವೆಂದರೆ ಬೆಂಗಳೂರು ಬಸ್ ನಿಲ್ದಾಣ, ಅದನ್ನು ಹೊರತುಪಡಿಸಿದರೆ ಎಲ್ಲಾ ಸೌಕರ್ಯ ಗಳೊಂದಿಗೆ ನಿರ್ಮಾಣ ಮಾಡಿರುವ ವಿಶಾಲವಾದ ಬಸ್ ನಿಲ್ದಾಣ ದಾವಣಗೆರೆಯಾಗಿದೆ.

ಶಕ್ತಿ ಯೋಜನೆಯಿಂದ ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ರಾಜ್ಯದಲ್ಲಿ ಶೇ 23 ರಷ್ಟು ಉದ್ಯೋಗಾವಕಾಶ ಕಲ್ಪಿಸಿದೆ ಎಂದು ಹೇಳಿದರು.

ಶಾಸಕರಾದ ಬಸವರಾಜ ವಿ. ಶಿವಗಂಗಾ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ಬಸ್ ಘಟಕ ನಿರ್ಮಾಣಕ್ಕೆ ನಿವೇಶನ ಸಮಸ್ಯೆ ಇತ್ತು, ಅದನ್ನು ಬಗೆ ಹರಿಸಲಾಗಿದೆ. ಹೊಸ ಬಸ್ ನಿಲ್ದಾಣಕ್ಕೆ ಎರಡು ಎಕರೆ ನಿವೇಶನ ಗುರುತಿಸಲಾಗಿದೆ. ಇನ್ನು ಎರಡು ತಿಂಗಳಲ್ಲಿ ಬಸ್ ನಿಲ್ದಾಣಕ್ಕೆ ಗುದ್ದಲಿ ಪೂಜೆ ಮಾಡಲಾಗುವುದು ಎಂದ ಅವರು ಚನ್ನಗಿರಿಯಿಂದ ಯಾತ್ರಾ ಸ್ಥಳಗಳಿಗೆ ಬಸ್ ಸೇವೆ ಒದಗಿಸಲಾಗಿದೆ. ಸಾರ್ವಜನಿಕರು ಇದರ ಪ್ರಯೋಜನೆ ಪಡೆದುಕೊಳ್ಳುವಂತೆ ತಿಳಿಸಿದರು.

ಬಸ್ ಘಟಕಕ್ಕೆ ಅವಶ್ಯವಿರುವ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ಸಹ ಈಗಾಗಲೇ ನಿಯೋಜಿಸಲಾಗಿದೆ ಎಂದು ತಿಳಿಸಿದರು.

ಮಾಯಕೊಂಡ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ.ಎಸ್. ಬಸವಂತಪ್ಪ, ಕರ್ನಾಟಕ ಜೀವ ವೈವಿಧ್ಯ ನಿಗಮ ಮಂಡಳಿ ಅಧ್ಯಕ್ಷರಾದ ವಡ್ನಾಳ್ ಜಗದೀಶ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ

ಅಧ್ಯಕ್ಷರಾದ ಶಾಮನೂರು ಟಿ. ಬಸವರಾಜ್ , ಅಜ್ಜಿಹಳ್ಳಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಗೋವಿಂದರಾಜ್ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ವ್ಯವಸ್ಥಾಪಕ ನಿರ್ದೇಶಕರಾದ ಅಕ್ರಂ ಪಾಶ, ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರ ಸ್ವಾಮಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ ವಿಠ್ಠಲ್ ರಾವ್ , ಹಿರಿಯ ವಿಭಾಗೀಯ ನಿಯಂತ್ರಣಾಧಿಕಾರಿ ಬಿ.ಎಸ್.ಶಿವಕುಮಾರಯ್ಯ ಹಾಗೂ ಇತರರು ಉಪಸ್ಥಿತರಿದ್ದರು.

# ಅಂಗನವಾಡಿ ಕಾರ್ಯಕರ್ತೆಯರು-ಸಹಾಯಕಿಯರ ಹುದ್ದೆ

**ಚಿಕ್ಕಮಗಳೂರು:** ತಾಲ್ಲೂಕು ಶಿಶು ಅಭಿವೃದ್ಧಿ ಯೋಜನೆಯ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆಯರು ಸಹಾಯಕಿಯರ ಹುದ್ದೆಗಳನ್ನು ಗೌರವಧನ ಆಧಾರದ ಮೇಲೆ ಅರ್ಹ 19 ರಿಂದ 35 ವ?ದೊಳಗಿನ ಸ್ಥಳೀಯ ಮಹಿಳಾ ಲಿಂಗತ್ವ ಅಲ್ಪಸಂಖ್ಯಾತ ಮಹಿಳಾ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ

ಇಲಾಖೆಯ ವೆಬ್‌ಸೈಟ್ <https://karnemakaone.kar.nic.in/abcd/home.aspx> ಮೂಲಕ ನವೆಂಬರ್ 4 ರೊಳಗೆ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗೆ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯನ್ನು ಅಥವಾ (ದೂ ಸಂ: 08262-235793)ಸಂಪರ್ಕಿಸಬಹುದು ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗವಾಯಿ ಅವರ ಮೇಲೆ ಹಿರಿಯ ವಕೀಲ ಶೂ ಎಸೆದಿರುವ ಘಟನೆ ಖಂಡನೀಯ

**ಚಿಕ್ಕಮಗಳೂರು:** ಸುಪ್ರೀಂಕೋರ್ಟ್ ಮುಖ್ಯ ನ್ಯಾಯಾಧೀಶ ಗವಾಯಿ ಅವರ ಮೇಲೆ ಹಿರಿಯ ವಕೀಲ ಶೂ ಎಸೆದಿರುವ ಘಟನೆ ಖಂಡನೀಯ. ಈ ಘಟನೆ ಪ್ರಜಾಪ್ರಭುತ್ವ ವ್ಯವಸ್ಥೆಗೆ ಮಾಡಿರುವ ಅಪಮಾನವಾಗಿದೆ. ಆರೆಸೆಸ್, ಬಿಜೆಪಿಯಂತಹ ಸಂಘಪರಿವಾರದ ಸಿದ್ಧಾಂತದಿಂದ ಪ್ರಭಾವಿತನಾಗಿರುವ ಈ ವಕೀಲ ಭಾರತದ ನ್ಯಾಯಾಂಗ ವ್ಯವಸ್ಥೆಗೆ ಕಪ್ಪುಚುಕ್ಕಿಯಾಗಿದ್ದು, ಸರಕಾರ ಈ ವ್ಯಕ್ತಿ ವಿರುದ್ಧ ಕಠಿಣ ಕಾನೂನು ಕ್ರಮಕೈಗೊಳ್ಳಬೇಕು ಎಂದು ಜಿಲ್ಲಾ ಕಾಂಗ್ರೆಸ್ ವಕ್ತಾರ ಎಂ.ಎಸ್.ಅನಂತ್ ಆಗ್ರಹಿಸಿದ್ದಾರೆ.

ಬುಧವಾರ ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು, ಆರೆಸೆಸ್, ಬಿಜೆಪಿ ಸೇರಿದಂತೆ ಸಂಘಪರಿವಾರದ ಭಾರತ ಸಂವಿಧಾನದ ಆಶಯಗಳನ್ನು ನಿರಂತರವಾಗಿ ಧಿಕ್ಕರಿಸಿಕೊಂಡು ಬರುತ್ತಿವೆ. ಈ ಸಂಸ್ಥೆಗಳಿಗೆ ಡಾ.ಬಿ.ಆರ್.ಅಂಬೇಡ್ಕರ್ ಅವರು ರಚಿಸಿರುವ ಭಾರತ ಸಂವಿಧಾನದ ಮೇಲೆ ಕಿಂಚಿತ್ ಗೌರವ ಇಲ್ಲ, ಈ ಕಾರಣಕ್ಕೆ ಸಂವಿಧಾನವನ್ನು ಬದಲಾಯಿಸುವ ಹೇಳಿಕೆಗಳನ್ನು ಪದೇ ಪದೇ ನೀಡುತ್ತಿದ್ದಾರೆ. ಸದ್ಯ ಸುಪ್ರೀಂಕೋರ್ಟ್ ನ್ಯಾಯಾಧೀಶ ಗವಾಯಿ ಅವರ ಮೇಲೆ ಶೂ ಎಸೆದಿರುವ ಪ್ರಕರಣದ ಹಿಂದೆ ಇರುವುದು ಆರೆಸೆಸ್ ಸಿದ್ಧಾಂತವೇ ಆಗಿದೆ ಎಂದವರು ಹೇಳಿದ್ದಾರೆ.

ಗವಾಯಿ ಅವರು ದಲಿತ ಸಮುದಾಯದವರಾಗಿದ್ದು, ದಲಿತ ಸಮುದಾಯದ ಓರ್ವ ವ್ಯಕ್ತಿ ಭಾರತದ ನ್ಯಾಯಾಂಗ ವ್ಯವಸ್ಥೆಯಲ್ಲಿಯೇ ಅತ್ಯುನ್ನತ ಹುದ್ದೆಯನ್ನು ಅಲಂಕರಿಸಿರುವುದನ್ನು ಸಹಿಸದ ಆರೆಸೆಸ್ ಚಿಂತನೆಯ ವಕೀಲ ತನ್ನ ಅರ್ಜಿಯನ್ನು ವಜಾ ಮಾಡಿದ ಏಕೈಕ ಕಾರಣಕ್ಕೆ ಸುಪ್ರೀಂ ಮುಖ್ಯ ನ್ಯಾಯಾಧೀಶ ಗವಾಯಿ ಅವರ ಮೇಲೆ ಶೂ ಎಸೆದಿದ್ದಾನೆ. ಈ ಮೂಲಕ ತಾನು ಆರೆಸೆಸ್ ಸಿದ್ಧಾಂತ ಪಾಲಿಸುವ ಅಪ್ಪಟ ಜಾತಿವಾದಿ ಎಂಬುದನ್ನು ಸಾರಿ ಹೇಳಿದ್ದಾನೆ. ಇಂತಹ ವಿಕೃತ ಮನಸ್ಥಿತಿಯನ್ನು ಪ್ರದರ್ಶಿಸಿರುವ ಈ ವಕೀಲ ನ್ಯಾಯಾಂಗ ವ್ಯವಸ್ಥೆಯಲ್ಲಿ ಸೇವೆ ಸಲ್ಲಿಸಲು ಯಾವ ಯೋಗ್ಯತೆಯನ್ನೂ ಹೊಂದಿಲ್ಲ ಎಂದಿರುವ ಅವರು, ಈತನ ವಿರುದ್ಧ ಭಾರತ ಸರಕಾರ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದಿದ್ದಾರೆ.

ಕೇಂದ್ರದಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರಕಾರ ಅಧಿಕಾರಕ್ಕೆ ಬಂದ ಬಳಿಕ ದೇಶದಲ್ಲಿ ಜಾತಿವಾದ, ಕೋಮುವಾದ ಹೆಚ್ಚುತ್ತಿದೆ. ದಲಿತರು,



ಅಲ್ಪಸಂಖ್ಯಾತರ ಮೇಲಿನ ದಾಳಿಗಳು ಹೆಚ್ಚುತ್ತಿವೆ. ದೇಶಾದ್ಯಂತಹ ಮತೀಯ ಸಂಘರ್ಷಗಳು ಹೆಚ್ಚುತ್ತಿವೆ ಎಂದಿರುವ ಅವರು, ಆರೆಸೆಸ್ ಮತ್ತು ಮೋದಿ ಸರಕಾರದ ಕೋಮುವಾದದ ಪರಿಣಾಮವೇ ಸುಪ್ರೀಂ ಮುಖ್ಯ ನ್ಯಾಯಾಧೀಶರ ಮೇಲೆ ಶೂ ಎಸೆತದ ಘಟನೆಯಾಗಿದೆ ಎಂದು ಅವರು ವಾಗ್ದಾಳಿ ನಡೆಸಿದ್ದಾರೆ.

ಭಾರತದ ಸರ್ವೋಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿ ಗವಾಯಿ ಅವರ ಮೇಲೆ ಶೂ ಎಸೆಯಲು ಯತ್ನಿಸಿದ ಕೃತ್ಯವು ನಮ್ಮ ಪ್ರಜಾಪ್ರಭುತ್ವದ ಅಡಿಪಾಯಕ್ಕೆ ಕೊಡಲಿ ಏಟು ನೀಡಿದಂತಿದೆ. ಶ್ರಮಪಟ್ಟು, ಅಸಮಾನತೆಯ ಗೋಡೆಗಳನ್ನು ಒಡೆದು ಅತ್ಯುನ್ನತ ಸ್ಥಾನಕ್ಕೆ ಏರಿದ ಒಬ್ಬ ದಲಿತ ವ್ಯಕ್ತಿತ್ವದ ಮೇಲೆ ನಡೆದ ಈ ದಾಳಿಯು ಕೇವಲ ಕಾನೂನು ಸುವ್ಯವಸ್ಥೆಯ ಸಮಸ್ಯೆಯಲ್ಲ, ಇದು ಜಾತಿವಾದಿ ಶಕ್ತಿಗಳು ಸಂವಿಧಾನ ಮತ್ತು ಸಾಮಾಜಿಕ ನ್ಯಾಯದ ಹಾದಿಗೆ ಅಡ್ಡಗಾಲು ಹಾಕಲು ಮಾಡಿದ ವ್ಯವಸ್ಥಿತ ಆಕ್ರಮಣವಾಗಿದೆ. ನ್ಯಾಯಮೂರ್ತಿ ಗವಾಯಿ ಅವರು ಈ ರಾಷ್ಟ್ರದ ಸಂವಿಧಾನವನ್ನು ರಕ್ಷಿಸುತ್ತಿರುವ ಭಾರತೀಯರು. ಅವರ ಮೇಲಿನ ದಾಳಿಯು, ಭಾರತದ ಘನತೆಯ ಮೇಲಿನ ದಾಳಿಯಾಗಿದೆ ಎಂದವರು ಹೇಳಿಕೆಯಲ್ಲಿ ತಿಳಿಸಿದ್ದಾರೆ.

ನ್ಯಾಯಾಲಯದ ಘನತೆಗೆ ಧಕ್ಕೆ ತಂದಿರುವ ಅಪರಾಧಿಗೆ ಕಾನೂನಿನ ಚೌಕಟ್ಟಿನಲ್ಲಿ ಅತ್ಯಂತ ಕಠಿಣ ಮತ್ತು ಮಾದರಿಯಾಗುವ ಶಿಕ್ಷೆ ಆಗಲೇಬೇಕು. ನ್ಯಾಯದ ಅರಿವು ಮೂಡಿಸುವ ಶಿಕ್ಷೆ ನ್ಯಾಯಾಂಗದ ನಂಬಿಕೆಯನ್ನು ಇನ್ನಷ್ಟು ಗಟ್ಟಿಗೊಳಿಸುತ್ತದೆ. ಈ ಕೃತ್ಯದ ಹಿಂದಿರುವ ಸಂಘ ಪರಿವಾರದ ಸೈದ್ಧಾಂತಿಕ ಪ್ರಚೋದನೆಗಳ ಕುರಿತು ಸಮಗ್ರ ತನಿಖೆ ನಡೆಸಿ, ಎಲ್ಲ ಪಿತೂರಿಗಳನ್ನು ಬಯಲು ಮಾಡಬೇಕು ಎಂದವರು ಆಗ್ರಹಿಸಿದ್ದಾರೆ.

# ಹಾಸನಾಂಬ ಜಾತ್ರಾ ಮಹೋತ್ಸವ



**ಹಾಸನ:** ನಗರದ ಶ್ರೀ ಹಾಸನಾಂಬ ದೇವಿ ದರ್ಶನ ಮತ್ತು ಶ್ರೀ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವವನ್ನು ಪ್ರತಿ ವರ್ಷ ಅತ್ಯಂತ ವಿಜೃಂಭಣೆಯಿಂದ ಆಯೋಜಿಸಲಾಗುತ್ತಿದ್ದು, ಸದರಿ ಜಾತ್ರಾ ಮಹೋತ್ಸವಕ್ಕೆ ಬೇರೆ ಬೇರೆ ರಾಜ್ಯ, ಜಿಲ್ಲೆಗಳಿಂದ ಭಕ್ತರು ಅಪಾರ ಸಂಖ್ಯೆಯಲ್ಲಿ ಭಾಗವಹಿಸುತ್ತಾರೆ.

ಈ ನಿಟ್ಟಿನಲ್ಲಿ ಜಿಲ್ಲಾಡಳಿತ, ಹಾಸನ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯೊಂದಿಗೆ 2025ನೇ ಸಾಲಿನ ಶ್ರೀ ಹಾಸನಾಂಬ ದೇವಿ ದರ್ಶನ ಮತ್ತು ಶ್ರೀ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವದ ಅಂಗವಾಗಿ

ಅ.09ರಿಂದ ಅ.21ರವರೆಗೆ ಈ ಕೆಳಕಾಣಿಸಿದ ವೇದಿಕೆಗಳಲ್ಲಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ಅ.09 ರಂದು ಜಾನಪದ ಜಾತ್ರೆ ಸಂಜೆ 6.30 ಹೇಮಾವತಿ ಪ್ರತಿಮೆ ಎದುರು, ಅ.10ರಿಂದ ಅ.21ರವರೆಗೆ ದೇವಸ್ಥಾನದ ಹತ್ತಿರ ಹಾಸನಾಂಬ ವೇದಿಕೆ (ಲೈವ್ ಕನ್ಸರ್ಟ್)ಬೆಳಗ್ಗೆ 5.30 ರಿಂದ 7.30 ರವರೆಗೆ, ಬೆಳಗ್ಗೆ 10 ರಿಂದ 1 ರವರೆಗೆ, ಸಂಜೆ 7.30 ರಿಂದ 10 ರವರೆಗೆ, ದೇವಿಗೆರೆ ವೃತ್ತದ ಬಳಿಸುಭಾಷ್ ಚೌಕ (ಹೇಮಾವತಿ) ಬೆ.6.30 ರಿಂದ 9.30 ರವೆಗೆ, ಸಿಲ್ವರ್ ಜುಬ್ಲಿ ಪಾರ್ಕ್ ನಲ್ಲಿ ಸಂಜೆ 7ರಿಂದ ರಿಂದ 9ರವರೆಗೆ.

ಸದರಿ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

# ಪಡಿತರ ಚೀಟಿದಾರರಿಗೆ ಅಕ್ಕಿ ವಿತರಣೆ

**ಚಿಕ್ಕಮಗಳೂರು:** ಸಾರ್ವಜನಿಕ ವಿತರಣಾ ಪದ್ಧತಿಯಡಿ ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ಅಂತ್ಯೋದಯ ಮತ್ತು ಆದ್ಯತಾ ಪಡಿತರ ಚೀಟಿದಾರರಿಗೆ 2025ರ ಅಕ್ಟೋಬರ್ ಮಾಹೆಗೆ ಈ ಕೆಳಗಿನಂತೆ ಅಕ್ಕಿ ವಿತರಿಸಲಾಗುತ್ತಿದೆ.

ಅಂತ್ಯೋದಯ (ಎಎವೈ) ಪ್ರತೀ ಪಡಿತರ ಚೀಟಿಗೆ ಚಿಕ್ಕಮಗಳೂರು, ಕಡೂರು, ತರೀಕೆರೆ ಹಾಗೂ ಅಜ್ಜಂಪುರ ತಾಲ್ಲೂಕಿನವರಿಗೆ ಎನ್‌ಎಫ್‌ಎಸ್‌ಎ ಯೋಜನೆಯಲ್ಲಿ ಕೇಂದ್ರದ 14 ಕೆ.ಜಿ. ಅಕ್ಕಿ, 21 ಕೆ.ಜಿ. ರಾಗಿ,

ಮೂಡಿಗೆರೆ, ಕೊಪ್ಪ, ಶೃಂಗೇರಿ, ಎನ್.ಆರ್.ಪುರ ತಾಲ್ಲೂಕಿನವರಿಗೆ ಕೇಂದ್ರದ 35 ಕೆ.ಜಿ. ಅಕ್ಕಿ, ಈ ಎಲ್ಲಾ ತಾಲ್ಲೂಕುಗಳಿಗೆ ಅನ್ನಭಾಗ್ಯ ಯೋಜನೆಯಡಿ 4 ಮತ್ತು 4ಕ್ಕಿಂತ ಹೆಚ್ಚು ಸದಸ್ಯರಿರುವ ಪಡಿತರ ಚೀಟಿಯ ಪ್ರತೀ ಸದಸ್ಯರಿಗೆ 5 ಕೆ.ಜಿ. ಅಕ್ಕಿ ವಿತರಿಸಲಾಗುವುದು.

ಆದ್ಯತಾ (ಬಿಪಿಎಲ್) ಪಡಿತರ ಚೀಟಿ ಹೊಂದಿರುವ ಪ್ರತೀ ಸದಸ್ಯರಿಗೆ ಚಿಕ್ಕಮಗಳೂರು, ಕಡೂರು, ತರೀಕೆರೆ ಹಾಗೂ ಅಜ್ಜಂಪುರ ತಾಲ್ಲೂಕಿನಲ್ಲಿ ಎನ್‌ಎಫ್‌ಸಿ ಯೋಜನೆಯಡಿ ಕೇಂದ್ರದಿಂದ 2 ಕೆ.ಜಿ. ಅಕ್ಕಿ, 3 ಕೆ.ಜಿ. ರಾಗಿ, ರಾಜ್ಯದಿಂದ 5 ಕೆ.ಜಿ. ಅಕ್ಕಿ, ಅನ್ನಭಾಗ್ಯ ಯೋಜನೆಯಡಿ ಕೇಂದ್ರ ಹಾಗೂ ರಾಜ್ಯದ ತಲಾ 5 ಕೆ.ಜಿ. ಅಕ್ಕಿ, ಮೂಡಿಗೆರೆ, ಕೊಪ್ಪ, ಶೃಂಗೇರಿ, ಎನ್.ಆರ್.ಪುರ ತಾಲ್ಲೂಕಿನವರಿಗೆ ಕೇಂದ್ರ ಹಾಗೂ ರಾಜ್ಯದಿಂದ 5 ಕೆ.ಜಿ. ಅಕ್ಕಿ, ಅನ್ನಭಾಗ್ಯ ಯೋಜನೆಯಡಿ 5 ಕೆ.ಜಿ. ಅಕ್ಕಿ ವಿತರಿಸಲಾಗುವುದು ಎಂದು ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರಿವು ಕಾರ್ಯಕ್ರಮ

**ದಾವಣಗೆರೆ :** ಅಕ್ಟೋಬರ್ 13 ರಂದು ಬೆಳಿಗ್ಗೆ 10.30ಕ್ಕೆ ನಗರದ ಹರಿಹರ ರಸ್ತೆಯಲ್ಲಿರುವ ಜಿಎಂಐಟಿ ಕಾಲೇಜು ಎದುರಿನ ಓಷಿಯನ್ ಪಾಸ್ ನಲ್ಲಿ ಎಂ.ಎಸ್.ಎಂ.ಇ.ಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವುದು ಮತ್ತು ವೇಗಗೊಳಿಸವ ಯೋಜನೆಯಡಿ ಝಡ್

.ಇಡಿ, ಲೀನ್ ಯೋಜನೆ ಹಾಗೂ ರಫ್ತು ಕುರಿತು ಒಂದು ದಿನದ ಅರಿವು ಮೂಡಿಸುವ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಉದ್ಘಾಟಿಸುವರು. ಕಾಸಿಯಾ ಅಧ್ಯಕ್ಷರಾದ ಗಣೇಶ್ ರಾವ್.ಬಿ.ಆರ್ ಅಧ್ಯಕ್ಷತೆ ವಹಿಸುವರು.

ಮುಖ್ಯಅತಿಥಿಗಳಾಗಿ ಜಿಲ್ಲಾ ಸಣ್ಣ ಕೈಗಾರಿಕೋದ್ಯಮಿಗಳ ಸಂಘದ ಅಧ್ಯಕ್ಷರಾದ ಶಂಭುಲಿಂಗಪ್ಪ ಬಸವನಾಳ, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಗಣೇಶ್.ಆರ್, ವಿಟಿಪಿಸಿ ಧಾರವಾಡ ಶಾಖಾ ಕಚೇರಿಯ ಉಪನಿರ್ದೇಶಕರಾದ ಟಿ.ಎಸ್ .ಮಲ್ಲಿಕಾರ್ಜುನ್ ಭಾಗವಹಿಸುವರು.

# ಕೇಂದ್ರೀಕರಣ ವ್ಯವಸ್ಥೆಯಿಂದ ಸರ್ವಾಧಿಕಾರತ್ವ ಅಧಿಕಗೊಳ್ಳುತ್ತದೆ

**ಗದಗ:** ರಾಜ್ಯ ಸರ್ಕಾರದ ಮಹತ್ವದ ವಿಕೇಂದ್ರೀಕರಣ ಯೋಜನೆ ಅನುಷ್ಠಾನದ ಭಾಗವಾಗಿ ಕಿತ್ತೂರು ಕರ್ನಾಟಕದ ಎಲ್ಲ ಜಿಲ್ಲೆಗಳ 2026-27 ನೇ ಸಾಲಿನ ಅಭಿವೃದ್ಧಿ ಯೋಜನೆಗಳ ಕರಡು ಪ್ರತಿ ತಯಾರಿಕೆ ಪ್ರಗತಿ ಪರಿಶೀಲನೆ ಸಭೆ ಬುಧವಾರ ಗದಗ ನಗರದ ಮಹಾತ್ಮಾ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿವಿಯಲ್ಲಿ ಜರುಗಿತು.

ರಾಜ್ಯದಲ್ಲಿ ಇದೇ ಮೊದಲ ಬಾರಿಗೆ ಮುಂಬರುವ ಸಾಲಿನ ಅಭಿವೃದ್ಧಿ ಯೋಜನೆಗಳನ್ನು ವಾರ್ಡ ವಾರು, ಗ್ರಾಮ ವಾರು, ಗ್ರಾಪಂ, ತಾಲ್ಲೂಕು, ಜಿಪಂ ಹಂತದಲ್ಲಿ ಸಭೆ ನಡೆಸಿ ಕರಡು ಪ್ರತಿಗಳನ್ನು ತಯಾರಿಸಿ ಜಿಲ್ಲಾಡಳಿತ ಪಡೆದಿದೆ. ಇದೇ ವರದಿಗಳ ಪ್ರಗತಿ ಪರಿಶೀಲನೆ ಸಭೆ ನಡೆದು ಸಾದಕ ಬಾಧಕ ಕುರಿತು ಚರ್ಚೆ ಜರುಗಿತು.

ರಾಜ್ಯ ನೀತಿ ಮತ್ತು ಯೋಜನೆ ಆಯೋಗದ ಉಪಾಧ್ಯಕ್ಷ ಬಿ.ಆರ್. ಪಾಟೀಲ ಅಧ್ಯಕ್ಷತೆ ವಹಿಸಿ ಮಾತನಾಡಿ, ಮಾರ್ಚ ತಿಂಗಳಲ್ಲಿ ಬಜೆಟ್ ಮಂಡನೆ ಆಗುತ್ತದೆ. ಅದಕ್ಕೆ ಪೂರ್ವದಲ್ಲಿ ನವೆಂಬರ್ ಒಳಗಾಗಿ ಗ್ರಾಪಂ, ವಾರ್ಡ ಯೋಜನೆಗಳ ಕರಡು ಪ್ರತಿಗಳಿಗೆ ಅನುಮೋದನೆ ಪಡೆಯಬೇಕು ಎಂದು ಮುಖ್ಯಮಂತ್ರಿಗಳು ನಿರ್ದೇಶನ ನೀಡಿದ್ದರು. ಆದರೆ, ಇನ್ನೂ ವರೆಗೂ ಸಮರ್ಪಕವಾಗಿ ಅನುಷ್ಠಾನಗೊಂಡಿಲ್ಲ. ಇದಕ್ಕೆ ಸರ್ಕಾರಿ, ರಾಜಕಾರಣ, ಆಡಳಿತ ವ್ಯವಸ್ಥೆಯೇ ಕಾರಣವೆಂದರು.

ವಿಕೇಂದ್ರೀಕರಣ ವ್ಯವಸ್ಥೆಯೂ ಸಮರ್ಪಕವಾಗಿ ರಾಜ್ಯದಲ್ಲಿ ಅನುಷ್ಠಾನಗೊಂಡಿಲ್ಲ. ಕೇಂದ್ರೀಕರಣ ವ್ಯವಸ್ಥೆಯಿಂದ ಸರ್ವಾಧಿಕಾರತ್ವ ಅಧಿಕಗೊಳ್ಳುತ್ತದೆ. ಕೇಂದ್ರೀಕರಣ ವ್ಯವಸ್ಥೆಯಿಂದ ಗ್ರಾಮೀಣ ಮತ್ತು ನಗರದ ನಡುವೆ ಕಂದಕ ಸೃಷ್ಟಿ ಆಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಜಿಲ್ಲಾ ಯೋಜನಾ ಸಮಿತಿಯು ಅ.10 ರ ಒಳಗಾಗಿ ವಾರ್ಡವಾರು, ತಾಪಂ, ಜಿಪಂನಲ್ಲಿ ಸಭೆ ನಡೆಸಿ ಯೋಜನೆಗಳ ಕುರುಡು ಪ್ರತಿಗಳನ್ನು ವಿಕೇಂದ್ರೀಕರಣ ಸಮಿತಿಗೆ ಸಲ್ಲಿಕೆ ಮಾಡಬೇಕು ಎಂದು ಸಿಎಂ ಸಿದ್ದರಾಮಯ್ಯ ನಿರ್ದೇಶನ ನೀಡಿದ್ದರು. ಕೇವಲ ಇನ್ನೂ ಎರಡು ದಿನ ಬಾಕಿ ಇರುವುದರಿಂದ ಚಮತ್ಕಾರ ಮಾಡಲು ಸಾಧ್ಯವಿಲ್ಲ. ಇನ್ನೂ 15 ದಿನಗಳ ಒಳಗಾಗಿ ವಾರ್ಡವಾರು, ತಾಪಂ,



ಜಿಪಂಗಳಿಂದ ಅಭಿವೃದ್ಧಿ ಯೋಜನೆ ಗಳ ಕುರಿತು ಕರಡು ಪ್ರತಿ ಪಡೆದು ಸಭೆ ನಡೆಸಿ ಜಿಲ್ಲಾಡಳಿತ ಮತ್ತು ಸರ್ಕಾರಕ್ಕೆ ಸಲ್ಲಿಡಬೇಕು. ಮುಂಬರುವ ಬಜೆಟ್ ನಲ್ಲಿ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಅನುದಾನ ಮೀಸಲೀಡಲು ಸಾಧ್ಯವಾಗುತ್ತದೆ ಎಂದು ಉಪಾಧ್ಯಕ್ಷ ಬಿ.ಆರ್. ಪಾಟೀಲ ಹೇಳಿದರು.

ಪ್ರದೇಶವಾರು ಗ್ರಾಮೀಣ ಭಾಗದ ಸಮಸ್ಯೆಗಳು ಬೇರೆ ಬೇರೆ ಆಗಿರುತ್ತವೆ. ಜಿಪಂ ಸಿಇಓಗಳು ಗ್ರಾಮೀಣ ಭಾಗದ ಅಭಿವೃದ್ಧಿ, ನೀರು ಸಂರಕ್ಷಣೆ, ಸಮುದಾಯದ ಅಭಿವೃದ್ಧಿಗೆ ಕನ್ನಡಿ ಆಗಿರುತ್ತಾರೆ.

ಹಾಗಾಗಿ ಮುಂಬರುವ 15 ದಿನಗಳ ಒಳಗಾಗಿ ತಮ್ಮ ವ್ಯಾಪ್ತಿಯ ಶಾಸಕರು, ಸಚಿವರನ್ನು ಸಂಪರ್ಕಿಸಿ ಯೋಜನೆ ಕರಡು ಪ್ರತಿಗಳನ್ನು ಸಿದ್ಧಪಡಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಯುಪಿಎಸ್ಸಿ ಅಧಿಕಾರಿಗಳು ಭಾಗಶಃ ಗ್ರಾಮೀಣ ಭಾಗದಿಂದ ಬಂದವರಲ್ಲ. ಬೆರಳೆಣಿಕೆಯಷ್ಟು ಅಧಿಕಾರಿಗಳು ಗ್ರಾಮೀಣ ಭಾಗದಿಂದ ಬಂದವರು. ಆದರೆ ಗ್ರಾಮೀಣ ಭಾಗದ ಅಭಿವೃದ್ಧಿ ಯೋಜನೆ ರೂಪಿಸುವಲ್ಲಿ ಕಾರಣೀಕರ್ತರು ನೀವುಗಳೇ ಆಗಿರುತ್ತೀರಿ. ಅಭಿವೃದ್ಧಿ ವಿಚಾರದಲ್ಲಿ ನಿಮ್ಮ ಬುದ್ದಿವಂತಿಕೆ ಕೆಲಸ ಮಾಡಲಿ ಎಂದು ಡಿ.ಆರ್. ಪಾಟೀಲ ಹೇಳಿದರು.

ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ ಚೌದರಿ ಪ್ರಾಸ್ತಾವಿಕ ಮಾತನಾಡಿ, ಪಂಚಾಯತ್ ರಾಜ್ ಇಲಾಖೆ ಕಾನೂನಿನ ಪ್ರಕಾರ ವಿಕೇಂದ್ರೀಕರಣ ಅನುಷ್ಠಾನ ಪರಿಣಾಮಕಾರಿ ಆಗಬೇಕಿದೆ ಎಂದರು.

ಮೊದಲು ಮೇಲಿನ ಹಂತದಿಂದ (ಜಿಲ್ಲಾಡಳಿತ) ಕರಡು ಯೋಜನೆ ಸಿದ್ದಗೊಂಡು ಕೆಳಗಿನ ಹಂತದಲ್ಲಿ(ಗ್ರಾಪಂ, ವಾರ್ಡ) ಯೋಜನೆ ಜಾರಿ ಆಗುತ್ತಿತ್ತು. ಆದರೆ ಈಗ, ಕೆಳಗಿನ ಹಂತದಿಂದ ಕರಡು ಯೋಜನೆ ಸಿದ್ದಗೊಂಡು ಮೇಲಿನ ಹಂತಕ್ಕೆ ಅನುಮೋದನೆಗಾಗಿ ಕಳುಹಿಸಲಾಗಿತ್ತಿದೆ. ಮುಂದಿನ ಆರ್ಥಿಕ ವರ್ಷದ ಅಭಿವೃದ್ಧಿ ಯೋಜನೆಗಳಿಗಾಗಿ ನಿಗಧಿತ ಅವಧಿ ಒಳಗಾಗಿ ಯೋಜನೆಗಳಿಗೆ ಅನುಮೋದನೆ ಸಿಗಬೇಕಿದೆ.

ಇದರಂತೆ ಐದು ವರ್ಷದ ಯೋಜನೆಗಳು ತಯಾರಿ ಅನುಮೋದನೆ ಪಡೆಯಬೇಕು. ರಾಜ್ಯ ಮತ್ತು ಜಿಲ್ಲಾ ಹಣಕಾಸು ಖಾತೆಗಳಲ್ಲಿ ಇರುವ ಆರ್ಥಿಕ ಸಂಪನ್ಮೂಲಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಬೇಕಿದೆ. ಜತೆಗೆ ಕೋವಿಡ್ ನಂತರ ಸ್ಥಗಿತಗೊಂಡಿದ್ದ ಮಾನವ ಅಭಿವೃದ್ಧಿ ಸೂಚ್ಯಂಕ ಯೋಜನೆಯನ್ನು ಈಗ ಕೈಗೆತ್ತಿಕೊಳ್ಳಲಾಗಿದೆ ಎಂದರು.

ಹಿರಿಯ ನಿರ್ದೇಶಕ ಹಾಗೂ ಪದನಿಮಿತ್ಯ ಸರದಕಾರದ ಕಾರ್ಯದರ್ಶಿ ಬಸವರಾಜ ಎಸ್ ಅವರು ಯೋಜನೆ ರೂಪಿಸುವಲ್ಲಿ ವಹಿಸಬೇಕಾದ ಅಂಶಗಳ ಬಗ್ಗೆ ತಿಳಿಸಿದರು. ಕಾರ್ಯಕ್ರಮದಲ್ಲಿ ಗ್ರಾಪಂ, ತಾಪಂ, ವಾರ್ಡ ಕುರಿತು ಸಭೆ ನಡೆಸದ ಕುರಿತು ಚರ್ಚೆ ಜರುಗಿತು.

ಈ ವೇಳೆ ಜಿಪಂ ಬೆಳಗಾವಿ ಸಿಇಓ ರಾಹುಲ್ ಶಿಂದೆ, ವಿವಿ ಕುಲಪತಿ ಸುರೇಶ ನಾಡಗೌಡರ, ಬಾಗಲಕೋಟೆ ಸಿಇಓ ಶಶೀಧರ ಕುರೇರ, ಹಾವೇರಿ ಸಿಇಓ ರುಚಿ ಬಿಂದಾಲ, ಧಾರವಾಡ ಸಿಇಓ ಭುವನೇಶ ಪಾಟೀಲ, ವಿಜಯಪುರ ಸಿಇಓ ರಿಷಿ ಆನಂದ, ಉತ್ತರ ಕನ್ನಡ ಸಿಇಓ ದಿಲೀಪ್ ಶಶೀ, ಯೋಜನಾ ಇಲಾಖೆ ಜಂಟಿ ಕಾರ್ಯದರ್ಶಿ ಬಿ. ಜಾನಕಿರಾಂ, ಮಾಜಿ ಜಿಪಂ ಅಧ್ಯಕ್ಷ ವಾಸಣ್ಣ ಕುರಡಗಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಇತರರು ಇದ್ದರು.

# ತರಬೇತಿಗೆ ಅರ್ಜಿ ಆಹ್ವಾನ

**ಗದಗ :** 2025-26 ನೇ ಸಾಲಿನಲ್ಲಿ ಗದಗ ಜಿಲ್ಲೆಯ ಅಲ್ಪಸಂಖ್ಯಾತರ ವಸತಿಶಾಲೆ ಹಾಗೂ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ 6, 7, 8, 9 ಮತ್ತು 11ನೇ ತರಗತಿಯ ವಿದ್ಯಾರ್ಥಿನಿಯರಿಗೆ ಕರಾಟೆ-ಸ್ವಯಂ ರಕ್ಷಣಾ ಕೌಶಲ್ಯ ತರಬೇತಿಯನ್ನು ನೀಡಲು ಜಿಲ್ಲೆಯಲ್ಲಿರುವ ಸ್ವಯಂ ರಕ್ಷಣಾ ಕೌಶಲ್ಯಗಳ ಸಂಸ್ಥೆಗಳು ಅಥವಾ ನುರಿತ ಮತ್ತು ಅರ್ಹ ಮಹಿಳಾ ತರಬೇತಿದಾರರಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಹಾಗೂ ಅರ್ಹ ಸ್ವಯಂ ರಕ್ಷಣಾ ಕೌಶಲ್ಯಗಳ ಸಂಸ್ಥೆಗಳು ಅಥವಾ ನುರಿತ ಮತ್ತು ಅರ್ಹ ಮಹಿಳಾ ತರಬೇತಿದಾರರು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಕಛೇರಿಗೆ ದಿನಾಂಕ: 09.10.2025ರ ಒಳಗಾಗಿ ಸೂಕ್ತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮೌಲಾನಾ ಆಜಾದ ಭವನ, ಜಿಲ್ಲಾ ನ್ಯಾಯಾಲಯದ ಎದುರುಗಡೆ ಗದಗ ದೂ.ಸಂ: 08372-297494 ಸಂಪರ್ಕಿಸಲು ಕೋರಿದ್ದಾರೆ.

# ಶಿವಮೊಗ್ಗ ಜಿಲ್ಲಾ ಮಟ್ಟದ ಯುವಜನೋತ್ಸವ

**ಶಿವಮೊಗ್ಗ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಅ. 15 ರಂದು ಬೆಳಗ್ಗೆ 9.00 ರಿಂದ ಕುವೆಂಪು ರಂಗಮಂದಿರದಲ್ಲಿ 2025-26ನೇ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.ಈ ಕಾರ್ಯಕ್ರಮದಲ್ಲಿ ಜಾನಪದ ನೃತ್ಯ, ಜಾನಪದ ಗೀತೆ, ಕಥೆ ಬರೆಯುವುದು, ಚಿತ್ರಕಲೆ, ಘೋಷಣೆ ಹಾಗೂ ಕವಿತೆ ಬರೆಯುವ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.ಸ್ಪರ್ಧೆಯಲ್ಲಿ ಭಾಗವಹಿಸುವ ಯುವಕ/ಯುವತಿಯರು 15 ರಿಂದ 29 ವರ್ಷ ವಯೋಮಿತಿಯೊಳಗಿದ್ದು, ನೋಂದಣಿ ಸಮಯದಲ್ಲಿ ಆಧಾರ್ ಕಾರ್ಡ್/ಎಸ್.ಎಸ್.ಎಲ್.ಸಿ. ಅಂಕಪಟ್ಟಿ/ ಜನನ ಪ್ರಮಾಣ ಪತ್ರ ಇವುಗಳಲ್ಲಿ ಯಾವುದಾದೊಂದು ದಾಖಲೆಯನ್ನು ಕಡ್ಡಾಯವಾಗಿ ಸಲ್ಲಿಸಬೇಕು. ಶಿವಮೊಗ್ಗ ಜಿಲ್ಲೆಯಲ್ಲಿ ವಾಸವಾಗಿರುವ ದೃಢೀಕರಣ ಪತ್ರವನ್ನು ತರಬೇಕು. ರಾಷ್ಟ್ರಮಟ್ಟದ ಯುವಜನೋತ್ಸವದಲ್ಲಿ ಸತತವಾಗಿ 3 ವರ್ಷಗಳು ಭಾಗವಹಿಸಿದ್ದು ಅಥವಾ ಒಂದು ಬಾರಿ ಪದಕ ಪಡೆದಿದ್ದರೆ ಅಂತಹ ಯುವಜನರು ಭಾಗವಹಿಸುವಂತಿಲ್ಲ.ಆಸಕ್ತರು ಅ. 14 ರೊಳಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಶಿವಮೊಗ್ಗ ಇವರ ಕಚೇರಿಯಲ್ಲಿ ಹೆಸರನ್ನು ನೊಂದಾಯಿಸಿಕೊಳ್ಳುವಂತೆ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತಾರೆ.ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಶಿವಮೊಗ್ಗ ಕಚೇರಿಯನ್ನು ಸಂಪರ್ಕಿಸುವುದು.

# ದಾವಣಗೆರೆ ವಿಶ್ವವಿದ್ಯಾನಿಲಯದ ಪುರುಷ ಮತ್ತು ಮಹಿಳೆಯರ ಈಜು ಸ್ಪರ್ಧೆ



**ದಾವಣಗೆರೆ:** ದಾವಣಗೆರೆಯ ದೇವರಾಜ್ ಅರಸ್ ಬಡಾವಣೆಯ ಈಜುಕೊಳದಲ್ಲಿ ನಡೆದ ದಾವಣಗೆರೆ ವಿಶ್ವವಿದ್ಯಾನಿಲಯ ಪುರುಷರ ಮತ್ತು ಮಹಿಳೆಯರ ಈಜು ಸ್ಪರ್ಧೆ ಮತ್ತು ಆಯ್ಕೆಯನ್ನು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹರಿಹರ ಇವರು ಆಯೋಜಿಸಿದ್ದರು. ಕರ್ನಾಟಕ ರಾಜ್ಯ ಖೋ –ಖೋ ಸಂಸ್ಥೆಯ ಕಾರ್ಯದರ್ಶಿಗಳಾದ ಜೆ..ರಾಮಲಿಂಗಪ್ಪ ಈಜು ಸ್ಪರ್ಧೆಯನ್ನು ಉದ್ಘಾಟಿಸಿ, ಮಾತನಾಡಿದ ಅವರು ಕರ್ನಾಟಕದಲ್ಲಿರುವ ಅತ್ಯುತ್ತಮ ಈಜು ಕೊಳಗಳಲ್ಲಿ ಈ ಈಜುಕೊಳವು ಪ್ರಮುಖವಾಗಿದ್ದು ಇದರ ಸದುಪಯೋಗವನ್ನು ಎಲ್ಲರೂ ಪಡೆದುಕೊಳ್ಳಬೇಕು ಹಾಗೂ ಅಂತರ ವಿಶ್ವವಿದ್ಯಾಲಯ ಮಟ್ಟದಲ್ಲಿ ಅತ್ಯುತ್ತಮ ಪ್ರದರ್ಶನವನ್ನು ನೀಡಿ ವಿಜಯ ಶಾಲಿಗಳಾಗಿ ಎಂದು ಹೇಳಿದರು,

ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹರಿಹರದ ಐಕಿಂಅ ಸಂಚಾಲಕರಾದ ಡಾಕ್ಟರ್ ಅನಂತ್ ನಾಗ್ ರವರು ಮಾತನಾಡಿ ಈಜು ಒಂದು ಸ್ವಾಭಾವಿಕ ಕ್ರೀಡೆಯಾಗಿದ್ದು ಇದರಿಂದ ದೇಹದ ಎಲ್ಲಾ ಭಾಗಗಳಿಗೆ ಅತ್ಯುತ್ತಮ ವ್ಯಾಯಾಮವಾಗುತ್ತದೆ ಇದರಿಂದ ಆರೋಗ್ಯ ವೃದ್ಧಿಸುತ್ತದೆ ಎಂದು ತಿಳಿಸಿದರು.

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿಕೊಂಡಿದ್ದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ. ರಮೇಶ್ ಎಂ. ಎನ್. ರವರು ಮಾತನಾಡಿ ಈಜು ದೇಹ ಮತ್ತು ಮನಸ್ಸನ್ನು ಆರೋಗ್ಯವಾಗಿಡುತ್ತದೆ ಮತ್ತು ವಿದ್ಯಾರ್ಥಿಗಳು ಪಾಠದ ಜೊತೆಗೆ ಕ್ರೀಡೆಗಳನ್ನು ಅಳವಡಿಸಿ ಕೊಳ್ಳಿ ಕ್ರೀಡೆಗಳಲ್ಲಿ ಭಾಗವಹಿಸುವುದರಿಂದ ಪರ್ವತೋಮುಖ ಅಭಿವೃದ್ಧಿ ಸಾಧ್ಯವಾಗುತ್ತದೆ ಎಂದು ಮಾತನಾಡಿದರು ಈ ಕಾರ್ಯಕ್ರಮವನ್ನು ಹರಿಹರ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ದೈಹಿಕ ಶಿಕ್ಷಣ ನಿರ್ದೇಶಕರಾದ ಡಾ, ಚಂದ್ರಶೇಖರ್ ಸಿ, ಸ್ವಾಗತಿಸಿದರು. ಈ ಸಂದರ್ಭದಲ್ಲಿ ದಾವಣಗೆರೆ ವಿಶ್ವವಿದ್ಯಾನಿಲಯದ ಆಯ್ಕೆ ಸಮಿತಿಯ ಸದಸ್ಯರಾದ ಡಾ, ಹರೀಶ್ ಕೆ ಎಸ್, ಕಲ್ಲೇಶಪ್ಪ ಎಸ್ ಜಿ. ಮತ್ತು ಮಂಜುನಾಥ್ ಸಜ್ಜನ್ ರವರು ಭಾಗವಹಿಸಿದ್ದರು ಮತ್ತು ದೇವರಾಜ್ ಅರಸ್ ಬಡಾವಣೆಯ ಈಜು ಕೊಳದ ಮುಖ್ಯಸ್ಥರಾದ ವಾಗಲೇ ಉಪಸ್ಥಿತರಿದ್ದರು. ಹರಿಹರದ ಪ್ರಥಮ ದರ್ಜೆ ಕಾಲೇಜು ಗ್ರಂಥ ಪಾಲಕರಾದ ಚಿದಾನಂದ್ ವಂದಿಸಿದರು ಈ ಸ್ಪರ್ಧೆಯಲ್ಲಿ ವಿವಿಧ ಕಾಲೇಜುಗಳಿಂದ ಸುಮಾರು 38ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು.

# 10 ದಿನ ಉದ್ಯಮಶೀಲತಾ ಅಭಿವೃದ್ಧಿ ತರಬೇತಿ

**ಚಿಕ್ಕಮಗಳೂರು:** ರಾಜ್ಯ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ (ಸಿಡಾಕ್) ಹಾಗೂ ಜಿಲ್ಲಾ ಕೈಗಾರಿಕಾ ಕೇಂದ್ರದ ಆಶ್ರಯದಲ್ಲಿ ಜಿಲ್ಲಾ ಕೈಗಾರಿಕಾ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗುವುದು. ತರಬೇತಿಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಸರ್ಕಾರದ ಸ್ವಂತ ಉದ್ಯೋಗ ಯೋಜನೆಗಳು, ಬ್ಯಾಂಕಿನ ವ್ಯವಹಾರ, ಮಾರುಕಟ್ಟೆ ಸಮೀಕ್ಷೆ, ಯೋಜನಾ ವರದಿ ತಯಾರಿಕೆ ಹಾಗೂ ಉದ್ಯಮ ನಿರ್ವಹಣೆ ಇತ್ಯಾದಿ ವಿಷಯಗಳ ಕುರಿತು ತರಬೇತಿಯನ್ನು ನೀಡಲಾಗುವುದು. ಈ ಸಂಬಂಧ ಜಿಲ್ಲೆಯ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.ಅಭ್ಯರ್ಥಿಗಳು 18 ವರ್ಷ ಮೇಲ್ಪಟ್ಟ ವಯಸ್ಸಿನವರಾಗಿದ್ದು, ಎಸ್.ಎಸ್.ಎಲ್.ಸಿ. ಉತ್ತೀರ್ಣರಾಗಿರಬೇಕು.ನಗರದ ಕೆ.ಎಂ.ರಸ್ತೆಯ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರ ಕಚೇರಿಯಿಂದ ಕಚೇರಿ ವೇಳೆಯಲ್ಲಿ ಪಡೆದ ಅರ್ಜಿಯನ್ನು ಭರ್ತಿ ಮಾಡಿ ಅಕ್ಟೋಬರ್ 8 ರೊಳಗೆ ನೋಂದಾಯಿಸಿಕೊಳ್ಳಬಹುದು.

# 20 ಕೋಟಿರೂ ವೆಚ್ಚದಲ್ಲಿ ಸುಸಜ್ಜಿತ ಸಾರಿಗೆ ಬಸ್ ನಿಲ್ದಾಣ ನಿರ್ಮಾಣ : ಶಾಸಕ ತಮ್ಮಯ್ಯ

**ಚಿಕ್ಕಮಗಳೂರು:** ನಗರಕ್ಕೆ ಸುಮಾರು 20 ಕೋಟಿರೂ ವೆಚ್ಚದಲ್ಲಿ ಸುಸಜ್ಜಿತ ಸಾರಿಗೆ ಬಸ್ ನಿಲ್ದಾಣ ನಿರ್ಮಾಣ ಮಾಡಲು ಉದ್ದೇಶಿಸಲಾಗಿದ್ದು, ಇದರಕಾಮಗಾರಿ ಶಂಕುಸ್ಥಾಪನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ಆಹ್ವಾನಿಸಿ ನೆರವೇರಿಸುವುದಾಗಿ ಶಾಸಕ ಹೆಚ್.ಡಿ. ತಮ್ಮಯ್ಯ ಭರವಸೆ ನೀಡಿದರು.

ಅವರುಇಂದುದಂಟರಮಕ್ಕಿ ಸಮೀಪ ಹಾಗೂ ಪಾಲಿಟೆಕ್ನಿಕ್ ಮುಂಭಾಗದಲ್ಲಿತಲಾ 12 ಲಕ್ಷರೂ ವೆಚ್ಚದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಬಸ್ ತಂಗುದಾಣಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು.

ರಸ್ತೆಅಗಲೀಕರಣವಾದ ನಂತರ ಕೆ.ಎಂ ರಸ್ತೆಯಲ್ಲಿದಂಟರಮಕ್ಕಿ ಬಡಾವಣೆ ಸಮೀಪ ಚಿಕ್ಕಮಗಳೂರು, ಕಡೂರು ಮುಂತಾದಕಡೆ ಪ್ರಯಾಣ ಮಾಡುವ ಪ್ರಯಾಣಿಕರ ಅನುಕೂಲಕ್ಕಾಗಿ ಶಾಸಕರಅನುದಾನದಿಂದ ಹಣ ಮಂಜೂರು ಮಾಡಲಾಗಿದೆಎಂದು ಹೇಳಿದರು.

ನಗರಾಭಿವೃದ್ಧಿ ಪ್ರಾಧಿಕಾರ ಮತ್ತುಕಣಿವ 'ರುದ್ರೇಶ್ವರದೇವಸ್ಥಾನದ ಬಳಿ ತಂಗುದಾಣ ನಿರ್ಮಾಣದಕಾಮಗಾರಿ ಮುಕ್ತಾಯ ಹಂತದಲ್ಲಿದ್ದು, ಶೀಘ್ರದಲ್ಲೇ ಸಾರ್ವಜನಿಕ ಸಮರ್ಪಣೆ ಮಾಡುವುದಾಗಿ ತಿಳಿಸಿದ ಅವರು, ಅತ್ಯಾಧುನಿಕ ಬಸ್ ತಂಗುದಾಣವನ್ನು ಜರ್ಮನಿ ಪ್ರವಾಸಕ್ಕೆಗೊಂಡಿದ್ದ ಸಂದರ್ಭದಲ್ಲಿಅಲ್ಲಿಂದಲೇಅದರ ಭಾವಚಿತ್ರತೆಗೆದುಕೆಆರ್‌ಡಿಎಲ್ ಅಧಿಕಾರಿಗಳಿಗೆ ರವಾನಿಸಿರುವುದಾಗಿ ತಿಳಿಸಿದರು.

ಪ್ರವಾಸದ ಸಂದರ್ಭದಲ್ಲಿ ವಿಶೇಷವಾದವು ನಮ್ಮಕ್ಷೇತ್ರದಲ್ಲಿಇರಬೇಕೆಂಬುದು ಆಸೆ ಮತ್ತುಕನಸಾಗಿತ್ತು.ಜನರ ಬೇಡಿಕೆಗನುಗುಣವಾಗಿಅವರ ಆಶೋತ್ತರಗಳಿಗೆ ಸ್ಪಂದಿಸಿ ಕೆಲಸ ಮಾಡುವುದುಜನಪ್ರತಿನಿಧಿಗಳ ಆದ್ಯಕರ್ತವ್ಯವಾಗಿದೆ. ಈ ಬಸ್ ತಂಗುದಾಣಗಳನ್ನು ಈ ಭಾಗದಜನ ಸದುಪಯೋಗಪಡಿಸಿಕೊಳ್ಳಬೇಕೆಂದು ವಿನಂತಿಸಿದರು.

ಗ್ಯಾರಂಟಿ ಯೋಜನೆಗಳ ಜೊತೆಗೆ ವಿವಿಧಅಭಿವೃದ್ಧಿ ಕಾಮಗಾರಿಗಳಿಗೆ ಸರ್ಕಾರಅನುದಾನ ನೀಡಲು ಬದ್ಧವಾಗಿದೆ. ಈಗಾಗಲೇ ರಸ್ತೆಅಭಿವೃದ್ಧಿಗೆ 10 ಕೋಟಿರೂ ಮಂಜೂರಾಗಿದೆ.ಅಲ್ಪಸಂಖ್ಯಾತರು ವಾಸಿಸುವ ಬಡಾವಣೆಯಕಾಂಕ್ರೀಟ್‌ರಸ್ತೆ ನಿರ್ಮಾಣಕ್ಕೆ 5 ಕೋಟಿರೂ ಬಿಡುಗಡೆಯಾಗಿದ್ದು, ಸದ್ಯದಲ್ಲೇ 25 ಕೋಟಿರೂ ವೆಚ್ಚದಲ್ಲಿ ನಗರವನ್ನು ಅಭಿವೃದ್ಧಿಪಡಿಸಿ ವಿರೋಧಿ ಹೇಳಿಕೆ ನೀಡುವವರಿಗೆ ಕೆಲಸದ ಮೂಲಕ ಉತ್ತರ ನೀಡುತ್ತೇವೆಎಂದರು.

ನಗರಸಭಾಧ್ಯಕ್ಷೆ ಶೀಲಾದಿನೇಶ್ ಮಾತನಾಡಿ, ಸಾರ್ವಜನಿಕರ ಬೇಡಿಕೆಯಂತೆ ಸುಸಜ್ಜಿತವಾದಅತ್ಯಾಧುನಿಕ ಬಸ್ ತಂಗುದಾಣ ನಿರ್ಮಾಣಕ್ಕೆ ಮುಂದಾಗಿರುವ ಶಾಸಕರನ್ನು ನಗರಸಭೆ ಪರವಾಗಿ ಅಭಿನಂದಿಸಿದರು.

ಅ.15 ರಂದು ರಸ್ತೆಗಳ ಅಭಿವೃದ್ಧಿಕಾಮಗಾರಿಗೆಗುದ್ದಲಿಪೂಜೆ ನೆರವೇರಿಸಿ ಸುಮಾರು 1.25 ಕೋಟಿರೂ ವೆಚ್ಚದಲ್ಲಿ ನಗರದ ರಸ್ತೆಗಳನ್ನು ಡಾಂಬರೀಕರಣ ಮಾಡಲುಟೆಂಡರ್‌ಕರೆಯಲಾಗಿದ್ದು, ಶೀಘ್ರದಲ್ಲೇ ಕಾಮಗಾರಿಆರಂಭವಾಗಲಿದೆಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ನಗರಸಭೆಉಪಾಧ್ಯಕ್ಷೆ ಲಲಿತಾನಾಯ್ಕ್,ಸದಸ್ಯಗುರುಮಲ್ಲಪ್ಪ,ಮಂಜುಳ ಲಕ್ಷ್ಮಣ. ರಾಜು.ಲಕ್ಷ್ಮಣ.ತಾಲ್ಲೂಕುಗ್ಯಾರಂಟಿ ಪ್ರಾಧಿಕಾರದಅಧ್ಯಕ್ಷ ಮಲ್ಲೇಶ್‌ಸ್ವಾಮಿ, ಪೌರಾಯುಕ್ತ ಬಿ.ಸಿ ಬಸವರಾಜ್, ಕೆಆರ್‌ಡಿಎಲ್ ಎಇಇ ಸಂತೋಷ್, ಗ್ರಾಮಸ್ಥರುಗಳಾದ ಸ್ವಾಮಿ, ಭದ್ರೇಗೌಡ, ಬೀರೇಗೌಡ, ನಿಂಗೇಗೌಡ, ಜಗದೀಶ್, ಸಂದೀಪ್ ಉಪಸ್ಥಿತರಿದ್ದರು.



# ಮಹರ್ಷಿ ವಾಲ್ಮೀಕಿಯ ಚಿಂತನೆಗಳು ಅಜರಾಮರ: ಪ್ರೊ.ವೆಂಕಟಗಿರಿ ದಳವಾಯಿ



**ಬಳ್ಳಾರಿ:** ಮಹರ್ಷಿ ವಾಲ್ಮೀಕಿಯ ಚಿಂತನೆಗಳು ಮತ್ತು ಮೌಲ್ಯಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ನಮ್ಮ ಜೀವನ ಅರ್ಥಪೂರ್ಣವಾಗುತ್ತದೆ ಎಂದು ಹಂಪಿ ಕನ್ನಡ ವಿಶ್ವವಿದ್ಯಾಲಯದ ಕನ್ನಡ ಸಾಹಿತ್ಯ ಅಧ್ಯಯನ ವಿಭಾಗದ ಪ್ರೊ.ವೆಂಕಟಗಿರಿ ದಳವಾಯಿ ಅವರು ಹೇಳಿದರು.

ಮಂಗಳವಾರ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ.ಬಿ.ಆರ್.ಅಂಬೇಡ್ಕರ್ ಸಭಾಂಗಣದಲ್ಲಿ ಆಯೋಜಿಸಿದ್ದ ಮಹರ್ಷಿ ವಾಲ್ಮೀಕಿ ಜಯಂತ್ಯೋತ್ಸವ ಕಾರ್ಯಕ್ರಮವನ್ನು ವಾಲ್ಮೀಕಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ದೇಶದ ಪರಂಪರೆ ಕಾಪಾಡುವುದರಲ್ಲಿ ಯುವಕರ ಪಾತ್ರ ಬಹುಮುಖ್ಯವಾಗಿದೆ. ವ್ಯಕ್ತಿಯ ನಡತೆ ಮತ್ತು ಅವನ ಜೀವನವನ್ನು ನಡೆಸಲು ವಾಲ್ಮೀಕಿ ಅವರ ಚಿಂತನೆಗಳು ಮಾರ್ಗದರ್ಶಕವಾಗಿವೆ. ಆಧುನಿಕ ದಿನಗಳಲ್ಲಿ ಜಯಂತಿಗಳು ವರ್ತಮಾನಗಳ ಬಗ್ಗೆ ತಿಳಿಸುತ್ತದೆ ಎಂದರು.

ವಿಶ್ವವಿದ್ಯಾಲಯದ ಕುಲಸಚಿವ ಸಿ.ನಾಗರಾಜು ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಮಹನೀಯರ ಜಯಂತಿಗಳು ಜೀವನದ ಯಶೋಗಾಥೆಗಳನ್ನು ಪಸರಿಸುವುದು ಉದ್ದೇಶವಾಗಿದೆ. ರಾಮಾಯಣವನ್ನು ಮುಂದಿನ ಪೀಳಿಗೆಗೆ ಕೊಂಡಯ್ಯುವುದು ನಮ್ಮ ಕರ್ತವ್ಯವಾಗಿದೆ. ವಾಲ್ಮೀಕಿ ರಾಮಾಯಣವನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಯಶಸ್ವಿ ವ್ಯಕ್ತಿಯಾಗಬಹುದು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ವಿಶ್ವವಿದ್ಯಾಲಯದ ಕುಲಸಚಿವ (ಮೌಲ್ಯಮಾಪನ) ಪ್ರೊ.ಎನ್.ಎಂ ಸಾಲಿ ಮಾತನಾಡಿ, ರಾಮಾಯಾಣದಲ್ಲಿ ಒಂದು ಪ್ರಮುಖವಾದ ಅಂಶವೆಂದರೆ ಜೀವನದ ಮೌಲ್ಯ. ಒಬ್ಬ ವ್ಯಕ್ತಿಯ ನಡತೆ, ಪ್ರಾಮಾಣಿಕತೆ, ಸತ್ಯ ಸೇರಿದ ಚಿತ್ರಣವೇ ರಾಮಾಯಾಣವಾಗಿದೆ ಎಂದು ಅಭಿಪ್ರಾಯ ಪಟ್ಟರು.

ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾದ ಜಯಲಕ್ಷಿ ಅವರು ಮಾತನಾಡಿ, ಆಧುನಿಕ ಕಾಲದ ವಿದ್ಯಾರ್ಥಿಗಳು ಮಹನೀಯರ ಜೀವನದ ಬಗ್ಗೆ ತಿಳಿದುಕೊಳ್ಳಬೇಕು.

ಆಗ ಮಾತ್ರ ಯಶಸ್ವಿಯಾಗಲು ಸಾಧ್ಯ. ಅಂದಿನ ಕಾಲದ ಗುರು–ಶಿಷ್ಯರ ಸಂಬಂಧ ಹಾಗೂ ಗುರುಕುಲ ಶಿಕ್ಷಣದ ಕುರಿತು ವಿದ್ಯಾರ್ಥಿಗಳಿಗೆ ತಿಳಿಸಿದರು.

ಈ ವೇಳೆ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ಶಿವಕುಮಾರ, ಪ.ಜಾತಿ ಮತ್ತು ಪ.ಪಂಗಡಗಳ ವಿಶೇಷ ಘಟಕದ ಸಂಯೋಜಕ ಡಾ.ಕುಮಾರ, ವಿದ್ಯಾರ್ಥಿ ಕ್ಷೇಮಪಾಲನ ಘಟಕದ ನಿರ್ದೇಶಕರಾದ ಡಾ.ಗೌರಿ ಮಾಣಿಕ್ ಮಾನಸ ಸೇರಿದಂತೆ ವಿವಿಧ ನಿಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ಬೋಧಕರು, ಸಂಶೋಧನಾ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಪರಿಸರವನ್ನು ಉಳಿಸಿ–ಬೆಳಸಿ ಕಾಪಾಡುವುದು ಎಲ್ಲರ ಕರ್ತವ್ಯ

**ಚಿಕ್ಕಮಗಳೂರು:** ಜಿಲ್ಲೆಯ ಪಶ್ಚಿಮಘಟ್ಟ ಪ್ರದೇಶದಲ್ಲಿ ಪೂರ್ವಿಕರು ಉಳಿಸಿ ಹೋಗಿರುವ ಪ್ರಕೃತಿದತ್ತ ಪರಿಸರವನ್ನು ಉಳಿಸಿ–ಬೆಳಸಿ ಕಾಪಾಡುವುದುಎಲ್ಲರಆದ್ಯಕರ್ತವ್ಯ ಮತ್ತುಜವಾಬ್ದಾರಿಎಂದು ಶಾಸಕ ಹೆಚ್.ಡಿ. ತಮ್ಮಯ್ಯ ಹೇಳಿದರು.

ಅವರುಇಂದುಇಲ್ಲಿನತಾಲ್ಲೂಕುಕಚೇರಿಆವರಣದಲ್ಲಿಅರಣ್ಯ ಇಲಾಖೆ ಭದ್ರಾ ಹುಲಿ ಸಂರಕ್ಷಿತ ಪ್ರದೇಶ ಇವರುಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ "ವನ್ಯಜೀವಿ ಸಪ್ತಾಹ 2025 ವನ್ಯಜೀವಿ ಸಂರಕ್ಷಣೆಗಾಗಿ ನಡಿಗೆಗೆ" ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ಪರಿಸರ ಹಾನಿಯಾದರೆ ಮುಂದಿನ ದಿನಗಳಲ್ಲಿ ಅನಾರೋಗ್ಯಕ್ಕೆಕಾರಣವಾಗುತ್ತದೆ.ಈ ನಿಟ್ಟಿನಲ್ಲಿಗಿಡಮರಚೆನ್ನಾಗಿದ್ದರೆ ಪ್ರಾಣಿ–ಪಕ್ಷಿಗಳು ಮತ್ತು ನಾಗರಿಕರಆರೋಗ್ಯಕ್ಕೆ ಅನುಕೂಲವಾಗಲಿದೆಎಂದು ತಿಳಿಸಿದರು.

ಅರಣ್ಯ ಮತ್ತು ಪರಿಸರ ಉಳಿದರೆ ಅತೀ ಹೆಚ್ಚು ಮಳೆ ಬೀಳುತ್ತದೆ.ದಟ್ಟಅರಣ್ಯ ಉಳಿಸಿ ಬೆಳೆಸಲು ಜಿಲ್ಲಾಡಳಿತ, ಅರಣ್ಯ ಇಲಾಖೆ, ಸರ್ಕಾರಎಲ್ಲಾ ಸಂಘ–ಸಂಸ್ಥೆಗಳು ಮುಂದಾಗಬೇಕೆಂದು ಸಲಹೆ ನೀಡಿದರು.

ಕ ಂ ದ ಾ ಂ ು ು ಭೂಮಿಯುನ್ನುಡೀಮ್ಡ್‌ಅರಣ್ಯಎಂದು ಮಾಡಿರುವ ಬಗ್ಗೆ ವಿರೋಧಿಸಿದ ಅವರು, ಆಶ್ರಯ ಮನೆ, ಆಸ್ಪತ್ರೆ, ಸಮುದಾಯ ಭವನ ಇವುಗಳಿಗೆ ಆದ್ಯತೆ ಮೇಲೆ ಭೂಮಿ ಮೀಸಲಿಡಬೇಕು ಹಾಗೂ 1–3 ಎಕರೆ ವರೆಗಿನ ಶೋಷಿತರು ಮಾಡಿರುವ ಸಾಗುವಳಿ ಭೂಮಿಗೆತೊಂದರೆಯಾಗದಂತ 'ಕ್ರಮವಹಿಸಬೇಕೆಂದು ಅರಣ್ಯಾಧಿಕಾರಿಗಳಿಗೆ ಸೂಚಿಸಿದರು.

ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ ಮಾತನಾಡಿ, ಕಾಡುಇದ್ದರೆ ನಾಡುಎಂಬಂತೆಜಗತ್ತು ಮತ್ತು ಭೂಮಿಇರುವುದು ಕೇವಲ ಮನುಷ್ಯರಿಗಾಗಿಅಲ್ಲ, ಎಲ್ಲಾ ಸಕಲ ಪ್ರಾಣಿ–ಪಕ್ಷಿಗಳು, ಸೂಕ್ಷ್ಮಾಣು ಜೀವಿಗಳು ಜೀವಿಸಲು ಅದರದೇಆದ ಸ್ಥಾನವನ್ನುದೇವರು ಕಲ್ಪಿಸಿದ್ದಾನೆ ಎಂದು ಹೇಳಿದರು.

ಒಂದಕ್ಕೊಂದು ಪೂರಕವಾಗಿದ್ದು, ಒಂದು ನಾಶಮಾಡಿಇನ್ನೊಂದು ಬದುಕಲಾಗದುಎಂಬುದುತಾತ್ಕಾಲಿಕ ಮಾತ್ರ.ಎಲ್ಲಾಜೀವಸಂಕುಲ ಪರಿಸರದ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತವೆ. ಈ ಎಲ್ಲವನ್ನು ಸಮತೋಲನವಾಗಿಡುವ ಪ್ರಾಕೃತಿಕ ವ್ಯವಸ್ಥೆಯನ್ನು ಉಳಿಸಿ ಗೌರವಿಸಬೇಕು ಎಂದರು.

ದುರಾಸೆಯಿಂದಇಂದು ಪರಿಸರ ನಾಶವಾಗುತ್ತಿದೆ. ಮುಂದೊಂದು ದಿನ ನಮ್ಮ ನಾಶಕ್ಕೆ ನಾವೇ ಕಾರಣವಾಗುತ್ತೇವೆಎಂದು ಎಚ್ಚರಿಸಿದ ಅವರು, ಈ ವನ್ಯಜೀವಿ ಸಪ್ತಾಹ ಎಲ್ಲಾ ಜೀವಿಗಳಿಗೆ ಬದುಕುವ ಹಕ್ಕಿದೆಎಂದು ಭಾವಿಸುವ ಅಗತ್ಯವಿದೆಎಂದು ಹೇಳಿದರು.

ವಿಧಾನ ಪರಿಷತ್ ಸದಸ್ಯಎಸ್.ಎಲ್ ಭೋಜೇಗೌಡ ಮಾತನಾಡಿ, ಪರಿಸರರಕ್ಷಣೆ ನಮ್ಮೆಲ್ಲರ ಹೊಣೆ ಎಂಬ ಕರ್ತವ್ಯವನ್ನುಅರಿತು ಮುಂದಿನ ಪೀಳಿಗೆಗೆ ಪರಿಸರದ ಮಹತ್ವ ತಿಳಿಸಬೇಕಾಗಿದೆ. ಹಿಂದೆ ವಾಹನಗಳು ಇರಲಿಲ್ಲ, ಅದಕ್ಕಾಗಿರಸ್ತೆಬದಿ ನೆರಳಿಗಾಗಿ ಸಾಲುಮರ ನೆಡುತ್ತಿದ್ದರು. ಹಕ್ಕಿಪಕ್ಷಿಗಳಿಗಾಗಿ ಹಣ್ಣಿನ ಮರಗಳಿದ್ದವು. ಇಂದುಒಂದೇಒಂದು ಆ ರೀತಿಯ ಹಣ್ಣಿನ ಮರಗಳಿಲ್ಲ ಎಂದು ವಿಷಾಧಿಸಿದರು.

ರಾಜ್ಯಸರ್ಕಾರ ಅಕೇಶಿಯಾ ಮತ್ತು ನೀಲಿಗಿರಿಯನ್ನು ಬೇರು ಸಹಿತತೆಗೆಯಬೇಕೆಂದುಆದೇಶ ಮಾಡಿದ್ದರೂಇದುವರೆಗೆ ಈ ಕಾರ್ಯ ಸಾಧ್ಯವಾಗಿಲ್ಲ. ಆಗುಂಬೆಯನ್ನು ಮಲೆನಾಡಿನಚಿರಾಪುಂಜಿಎಂದುಕರೆಯುತ್ತೇವೆ. ಅತೀ ಹೆಚ್ಚು ಮಳೆ ಬೀಳುವ ಪ್ರದೇಶಗಳಾದ ಕುದುರೆಮುಖರಾಷ್ಟ್ರೀಯುಉದ್ಯಾನ, ಶಿರಾಡಿಘಾಟ್, ಕೊಪ್ಪ–ಶೃಂಗೇರಿ ಹೋಗುವ ರಸ್ತೆ ಇಕ್ಕೆಲಗಳಲ್ಲಿ ಈ ಮರಗಳನ್ನು ಕಾಣಬಹುದಾಗಿದ್ದು, ತಿನ್ನಲು ಏನೂ ಸಿಗದ ಕಾರಣ ಮಂಗಗಳು ಪ್ರವಾಸಿಗರು ನೀಡುವ ಕಾಯಿ–ಬಾಳೇಹಣ್ಣಿಗಾಗಿ ಪರಿತಪಿಸುತ್ತಿರುವುದುಕರುಣಾಜನಕವಾಗಿದೆಎಂದು ಹೇಳಿದರು.

ಮಾನವ–ವನ್ಯ ಪ್ರಾಣಿಗಳ ಸಂಘರ್ಷ ದಿನನಿತ್ಯಕಾಣುತ್ತಿದ್ದೇವೆ. ಚಿರತೆ, ಕಾಡಾನೆ, ಹುಲಿ ಮುಂತಾದವುಗಳು ಆಹಾರವನ್ನು ಅರಸಿ ನಾಡಿಗೆ ಬರುತ್ತಿರುವುದು ಪ್ರಮುಖಕಾರಣವಾಗಿದ್ದು, ಅವುಗಳ ನೆಮ್ಮದಿ ಜೀವನಕ್ಕೆ ಅವಕಾಶ ಇಲ್ಲದಂತಾಗಿದೆಎಂದರು.



# ಮಲೆನಾಡು ಶಿಕ್ಷಣ ಸಂಸ್ಥೆ ಜಟಾಪಟಿಗೆ ತೆರೆ

**ಹಾಸನ:** ಹಾಸನ ಜಿಲ್ಲೆಯ ಪ್ರತಿಷ್ಠಿತ ಮಲೆನಾಡು ತಾಂತ್ರಿಕ ಶಿಕ್ಷಣ ಸಂಸ್ಥೆ ಜಟಾಪಟಿಗೆ ಕೊನೆಗೂ ತೆರೆಬಿದಿದ್ದು, ಡಿಆರ್ ಆದೇಶ ಹಿನ್ನಲೆ ಅಧಿಕೃತವಾಗಿ 5 ವರ್ಷಗಳ ಅವಧಿಗೆ ಚುನಾಯಿತರಾಗಿ ಆಯ್ಕೆಯಾಗಿದ್ದ ಪದಾಧಿಕಾರಿಗಳು ಇಂದು ಆಡಳಿತ ಮಂಡಳಿ ಕಚೇರಿ ಪ್ರವೇಶಿಸಿ ಮತ್ತೆ ಕಾರ್ಯಾಭಾರ ಪ್ರಾರಂಭಿಸಿದ್ದಾರೆ.

ಕಳೆದ ಕೆಲ ದಿನಗಳ ಹಿಂದೆ ಆಡಳಿತ ಮಂಡಳಿಯಲ್ಲಿ ಒಂದಿಷ್ಟು ಗೊಂದಲಗಳು ಏರ್ಪಟ್ಟಿದ್ದ ಪರಿಣಾಮ ಆಡಳಿತ ಮಂಡಳಿ ಕಚೇರಿಗೆ ಬೀಗ ಹಾಕಿ ಎರಡೂ ಬಣದವರೂ ಪ್ರವೇಶಿಸದಂತೆ ಪೊಲೀಸರು ನಿರ್ಭಂಧ ವಿಧಿಸಿದ್ದರು. ಇಂದು ನಿರ್ಬಂಧ ತೆರವುಗೊಂಡ ಹಿನ್ನಲೆ ಪದಾಧಿಕಾರಿಗಳು ಬೀಗ ತೆರೆದು ಕಚೇರಿ ಪ್ರವೇಶಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಂಸ್ಥೆಯ ಅಧ್ಯಕ್ಷ ಆರ್.ಟಿ.ದೇವೇಗೌಡ ಹಾಗೂ ಕಾರ್ಯದರ್ಶಿ ಜಗದೀಶ್ ಚೌಡುವಳ್ಳಿ ಅವರು, ದಿನಾಂಕ 11–01–2025ರಂದು 20ಜನ ನಿರ್ದೇಶಕರ ಬೆಂಬಲದೊಂದಿಗೆ ಸರ್ವಾನುಮತದಿಂದ 5 ವರ್ಷಗಳ ಅವಧಿಗೆ ನಾವು ಅಧ್ಯಕ್ಷರು–ಕಾರ್ಯದರ್ಶಿಗಳಾಗಿ ಆಯ್ಕೆಯಾಗಿದ್ದು, ಇದುವರೆಗೂ ಸಹಕಾರ ಸಂಘದ ರಿಜಿಸ್ಟರ್ ಅವರಿಂದ ಆಗಲೀ, ನ್ಯಾಯಾಲಯದಿಂದಾಗಲೀ ಅಥವಾ ಸರ್ಕಾರದಿಂದಾಗಲೀ ನಮ್ಮ ಆಡಳಿತ ಮಂಡಳಿಯನ್ನು ಪದಚ್ಯುತಿಗೊಳಿಸಿರುವುದಾಗಿ ತೀರ್ಪು ಅಥವಾ ಆದೇಶ ಅಧಿಕೃತವಾಗಿ ಪ್ರಕಟವಾಗಿರುವುದಿಲ್ಲ.

ಮುಂದುವರೆದು ಈ ಹಿಂದೆ ಸ್ವಯಂ ಘೋಷಿತ ಅಧ್ಯಕ್ಷ ಎಂದು ಬಿಂಬಿಸಿಕೊಂಡಿದ್ದ ಬಿ.ಆರ್. ಗುರುದೇವ್ ಅವರಿಗೆ ಹಾಸನ ಸಹಕಾರ ಸಂಘಗಳ ಉಪ ನಿಬಂಧಕರು 13ಜನ ನಿರ್ದೇಶಕರು ಇರುವ ತಂಡ ಅಧಿಕಾರ ನಡೆಸಬಹುದೆಂದು ಅಭಿಪ್ರಾಯಿಸಿ ಹಿಂಬರಹ ನೀಡಿತ್ತು. ಅಭಿಪ್ರಾಯವನ್ನೇ ಆದೇಶವೆಂದು ತಪ್ಪಾಗಿ ಅರ್ಥೈಸಿಕೊಂಡಿದ್ದ ಗುರೇವ್ ಅವರು ನಾವು ಅಧಿಕಾರ ಸ್ವೀಕಾರ ಮಾಡುತ್ತಿದ್ದೇವೆಂದು ಸಂಘದ ಕಚೇರಿ ಬಳಿ ಬಂದು ಮಾಧ್ಯಮಗಳಿಗೆ ಹೇಳಿಕೆ ನೀಡಿರುವುದನ್ನು ಗಮನಿಸಿದ್ದೇವೆ. ಆದ್ರೆ ನಂತರ ಈ ಬಗ್ಗೆ ಅವರಿಗೆ ಮನವರಿಕೆಯಾಗಿದ್ದು ಸಹಕಾರ ಇಲಾಖೆ ಉಪನಿಬಂಧಕರಿಗೆ ಅಭಿಪ್ರಾಯವನ್ನು ಆದೇಶ ಎಂದು ಮಾಆಡು ಮಾಡಿ ನೀಡುವಂತೆ ಮನವಿ ಸಲ್ಲಿಸಿದ ವೇಳೆ ಹಾಸನ ಸಹಕಾರ ಸಂಘಗಳ ಉಪ ನಿಬಂಧಕರು ಸದರಿ ವಿಷಯದ ಸಂಬಂಧ ನಿರ್ದೇಶಕರಿಗೆ ನಿರ್ದೇಶನ ನೀಡುವ ಅಥಾವ ಆದೇಶ ಮಾಡುವ ಯಾವುದೇ ಶಾಸನ ಬದ್ದ ಅವಕಾಶ ಹಾಗೂ ಕಾನೂನು ರೀತ್ಯಾ ಮುಂದಿನ ಕ್ರಮ ಕೈಗೊಳ್ಳುವ ಅಧಿಕಾರ ನಮಗೆ ಇಲ್ಲ ಎಂದು ಬಹಳ ಸ್ಪಷ್ಟವಾಗಿ ತಿಳಿಸಿದ್ದು, ಈ ಹಿನ್ನಲೆಯಲ್ಲಿ ಕಾಲೇಜಿನ ಶೈಕ್ಷಣಿಕ ಹಿತ ದೃಷ್ಠಿಯಿಂದ ಚುನಾಯಿತ ಆಡಳಿತ ಮಂಡಳಿ ಇಂದಿನಿಂದ ಆಡಳಿತ ಮಂಡಳಿ ಕಚೇರಿ ಪ್ರವೇಶಿಸಿ ಕಾರ್ಯಭಾರ ಪ್ರಾರಂಭಿಸಿದ್ದೇವೆ ಎಂದರು.




ನ್ಯಾಯಾಲಯದಲ್ಲಿ ಪ್ರಕರಣ ಇರುವ ಬಗ್ಗೆ ಮಾದ್ಯಮದವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಕಾನೂನಿನ ಮುಂದೆ ಯಾರೂ ದೊಡ್ಡವರಲ್ಲ ನಮ್ಮ ಆಡಳಿತ ಮಂಡಳಿಯನ್ನು ಅಧಿಕಾರದಲ್ಲಿ ಮುಂದುವರೆಸುವಂತೆ ಈಗಾಗಲೇ ಹಾಸನದ ಸಿವಿಲ್ ಜಡ್ಜ್ & ಜೆಎಂಎಫ್‌ಸಿ ನ್ಯಾಯಾಲಯ ಇಲ್ಲಿ ನಾವೇ ದಾವೆ ಹೂಡಿದ್ದು, ಅದು ವಿಚಾರಣೆ ಹಂತದಲ್ಲಿದೆ ಒಂದು ವೇಳೆ ನ್ಯಾಯಾಲಯ ಅಥವಾ ರಿಜಿಸ್ಟರ್ ಅಥವಾ ಸರ್ಕಾರದಿಂದ ಆದೇಶ ಬಂದಲ್ಲಿ ಅದಕ್ಕೆ ತಲೆಬಾಗುತ್ತೇವೆ ಎಂದರು.

ವಿಶ್ವಾಸದೊಂದಿಗೆ ಜೊತೆಗೆ ಹೋಗುತ್ತೇವೆ: ಸಂಘ ಸಂಸ್ಥೆಗಳು ಎಂದ ಮೇಲೆ ಈ ರೀತಿ ಸಣ್ಣ ಪುಟ್ಟ ಗೊಂದಲಗಳು ಸಹಜ, ಅಶೋಕ್ ಹಾರನಹಳ್ಳಿ ಅವರು, ಬಿ.ರ್.ಗುರುದೇವ್ ಎಲ್ಲರೂ ಜೊತೆಗೆ ಮುನ್ನೆಡೆಯುತ್ತೇವೆ. ಇಲ್ಲಿ ಅಧಿಕಾರ ಕಿತ್ತಾಟಕ್ಕಿಂತ ಶಿಕ್ಷಣ ಸಂಸ್ಥೆಗಳಿಗೆ ಯಾವುದೇ ತೊಂದರೆಯಾಗದಂತೆ ಸಂಸ್ಥೆ ಮುನ್ನೆಡೆಸಿಕೊಂಡು ಹೋಗಬೇಕೆಂಬುದೆ ನಮ್ಮ ಆಶಯ, ಈ ನಿಟ್ಟಿನಲ್ಲಿ ಎಲ್ಲಾ ನಿರ್ದೇಶಕರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಮುನ್ನೆಡೆಯುತ್ತೇವೆ ಎಂದರು.

ಮಾಜಿ ಖಜಾಂಚಿ ವಿರುದ್ಧ ಅಸಮಧಾನ: ಇದೆ ವೇಳೆ ಸಂಸ್ಥೆಯ ನಿರ್ದೇಶಕ ಸ್ಥಾನದಿಂದ ಅಮಾನತ್ತು ಗೊಂಡಿರುವ ಮಾಜಿ ಖಜಾಂಚಿ ಶ್ರೀಧರ್ ವಿರುದ್ಧ ಇದೆ ವೇಳೆ ಅಸಮಾಧನ ಹೊರ ಹಾಕಿದ ಅವರು, ಈ ಗೊಂದಲಗಳ ನಡುವೆ ಸಂಸ್ಥೆಯ ವ್ಯಾಪ್ತಿಗೆ ಒಳಪಡುವ 7 ಶಿಕ್ಷಣ ಸಂಸ್ಥೆಗಳ ಸಾವಿರಾರು ಉಪನ್ಯಾಸಕರುಗಳು, ಸಿಬ್ಬಂದಿಗಳು ವೇತನ ಸಿಕ್ಕದೆ ವಂಚಿತರಾಗಿದ್ದರು, ಈ ನಡುವೆ ಉಪ ನಿಬಂಧಕರು ಈ ಪ್ರಕರಣದಲ್ಲಿ ಯಾವುದೇ ಆದೇಶ ಮಾಡಲು ತನಗೆ ಅಧಿಕಾರ ಇಲ್ಲ ಎಂದು ಸ್ಪಷ್ಟಪಡಿಸಿದ ಹಿನ್ನಲೆ ಮತ್ತೆ ಕಾರ್ಯಾರಂಭ ಪ್ರಾರಂಭಿಸಿರುವ ಆಡಳಿತ ಮಂಡಳಿ ಸಾಲು ಸಾಲು ಹಬ್ಬಗಳು ಇರುವ ಹಿನ್ನಲೆಯಲ್ಲಿ ನೌಕರರಿಗೆ ತೊಂದರೆಯಾಗಬಾರದೆಂಬ ಉದ್ದೇಶದಿಂದ ಎಲ್ಲಾ 7 ಸಂಸ್ಥೆಗಳ ನೌಕರರ ವೇತವನ್ನು ಪಾವತಿಸಿದ್ದು, ಇದಕ್ಕೆ ಅಡ್ಡಗಾಲು ಹಾಕಿದ್ದ ಮಾಜಿ ಖಜಾಂಚಿ ಶ್ರೀಧರ್ ಬ್ಯಾಂಕ್‌ಗಳ ವ್ಯವಸ್ಥಾಪಕರಿಗೆ ತಪ್ಪ ತಪ್ಪು ಮಾಹಿತಿಗಳುಳ್ಳ ಮೂಗರ್ಜಿಗಳನ್ನು ಬರೆಯುವ ಮೂಲಕ ಆಡಳಿತಕ್ಕೆ ಅಡ್ಡಿ ಪಡಿಸುತ್ತಿದ್ದು, ಅವರ ವಿರುದ್ಧವೂ ಕಾನೂನು ಕ್ರಮಕ್ಕೆ ಮುಂದಾಗಲಾಗುವುದು ಎಂದರು.

ಈ ಸಂದರ್ಭದಲ್ಲಿ ಸಂಸ್ಥೆಯ ಖಜಾಂಚಿ ಪಾರ್ಶ್ವನಾಥ್, ಹಿರಿಯ ಉಪಾಧ್ಯಕ್ಷರಾದ ಚೌಡುವಳ್ಳಿ ಪುಟ್ಟರಾಜು, ನಿರ್ದೇಶಕರಾದ ಮುದ್ದೇಗೌಡರು, ಶ್ರೀನಿವಾಸ್, ನಾಗರಾಜ್ ಜೈನ್, ಶಂಕರ್, ರಾಜಶೇಖರ್, ಸುರೇಶ್ ಸೇರಿದಂತೆ ಇನ್ನಿತರರು ಹಾಜರಿದ್ದರು.

## ಫೋಟೋಗ್ರಫಿ ಮತ್ತು ವಿಡಿಯೋಗ್ರಫಿ ತರಬೇತಿ

**ಚಿಕ್ಕಮಗಳೂರು:** ಗ್ರಾಮೀಣಾಭಿವೃದ್ಧಿ ಸಚಿವಾಲಯದ ಅಡಿಯಲ್ಲಿ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಫೋಟೋಗ್ರಫಿ ಮತ್ತು ವಿಡಿಯೋಗ್ರಫಿ ಕುರಿತ 30 ದಿನಗಳ ಉಚಿತ ತರಬೇತಿಯು ಅಕ್ಟೋಬರ್ 29 ರಿಂದ ಆರಂಭವಾಗಲಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕ–ಯುವತಿಯರು ತರಬೇತಿಯಲ್ಲಿ ಭಾಗವಹಿಸಬಹುದು.

ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಬಿಪಿಎಲ್ ಕಾರ್ಡ್ ಅಥವಾ ಜಾಬ್ ಕಾರ್ಡ್ ಹಾಗೂ ಆಧಾರ್ ಕಾರ್ಡ್ ಅನ್ನು ಕಡ್ಡಾಯವಾಗಿ ಹೊಂದಿರುವ ಹಾಗೂ ಡಿಎಸ್‌ಎಲ್‌ಆರ್ ಕ್ಯಾಮೆರಾವನ್ನು ಹೊಂದಿರುವ ಗ್ರಾಮೀಣ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು. ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು.ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗೆ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9740982585, 924142581 ಅನ್ನು ಸಂಪರ್ಕಿಸಬಹುದು ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಾಹನ ವಿಲೇವಾರಿ

**ಶಿವಮೊಗ್ಗ:** ಶಿವಮೊಗ್ಗ ತುಂಗಾನಗರ ಪೊಲೀಸ್ ಠಾಣೆಯಲ್ಲಿ ವಾರಸ್ಸುದಾರರು ಪತ್ತೆಯಾಗದ 45 ವಿವಿಧ ವಾಹನಗಳನ್ನು ಯಥಾ ಸ್ಥಿತಿಯಲ್ಲಿ ನ್ಯಾಯಾಲಯದ ಆದೇಶದನ್ವಯ ಅ.13 ರಂದು ಬೆಳಿಗ್ಗೆ 09 ಗಂಟೆಗೆ ತುಂಗಾನಗರ ಪೊಲೀಸ್ ಠಾಣಾ ಆವರಣದಲ್ಲಿ ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲಾಗುವುದು.

# 2000 ಕೋಟಿ ವೆಚ್ಚದಲ್ಲಿ ಸೇತುವೆಗಳ ಮರು ನಿರ್ಮಾಣ, ಪುನಶ್ಚೇತನ ಕಾಮಗಾರಿಗಳಿಗೆ ಸಂಪುಟ ಅಸ್ತು

**ಬೆಂಗಳೂರು:** ಸಿಎಂ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಗುರುವಾರ ಸಚಿವ ಸಂಪುಟ ಸಭೆ ನಡೆದಿದ್ದು, ಹಲವು ಪ್ರಮುಖ ನಿರ್ಣಯಗಳನ್ನು ಕೈಗೊಳ್ಳಲಾಗಿದೆ. ಲೋಕೋಪಯೋಗಿ ಇಲಾಖೆಯಡಿ ಸೇತುವೆಗಳು ಪುನರ್ ನಿರ್ಮಾಣ ಹಾಗೂ ಪುನಶ್ಚೇತನ ಕಾಮಗಾರಿಗಳನ್ನು 2000 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ತಾತ್ವಿಕ ಅನುಮೋದನೆ ಹಾಗೂ ಕನಕಪುರದಲ್ಲಿ ಹೊಸ ವೈದ್ಯಕೀಯ ಕಾಲೇಜು ಕಟ್ಟಡ ಸೇರಿ ವಿವಿಧ ಕಾಮಗಾರಿಗಳನ್ನು 550.00 ಕೋಟಿಗಳ ಅಂದಾಜು ಮೊತ್ತದಲ್ಲಿ ಕೈಗೊಳ್ಳಲು ಸೇರಿ ಹಲವು ಪ್ರಸ್ತಾವನೆಗಳಿಗೆ ಸಚಿವ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ. ಆಯವ್ಯಯದಲ್ಲಿ ಘೋಷಿಸಿದಂತೆ 1,000 ಕೋಟಿ ವೆಚ್ಚದಲ್ಲಿ ಬೃಹತ್ ಸೇತುವೆಗಳ ನಿರ್ಮಾಣ ಮತ್ತು 1,000 ಕೋಟಿ ವೆಚ್ಚದಲ್ಲಿ ಪ್ರವಾಹದಿಂದ ಹಾನಿಗೀಡಾದ ಸೇತುವೆಗಳ ಪುನರ್ ನಿರ್ಮಾಣ ಹಾಗೂ ಮಲೆನಾಡು ಮತ್ತು ಕರಾವಳಿ ಭಾಗದಲ್ಲಿ ಕಾಲುಸಂಕಗಳ ನಿರ್ಮಾಣ ಮಾಡಲು ಸಚಿವ ಸಂಪುಟ ನಿರ್ಧಾರ ಮಾಡಿದೆ. ಸಚಿವ ಸಂಪುಟದ ಪ್ರಮುಖ ನಿರ್ಣಯಗಳು ಅನ್ನಭಾಗ್ಯ ಯೋಜನೆಯಡಿ ರಾಜ್ಯದ ಎಎವೈ ಮತ್ತು ಪಿಎಚ್ಎಚ್ ಪಡಿತರ ಫಲಾನುಭವಿಗಳಿಗೆ ಪರ್ಯಾಯವಾಗಿ ಇಂದಿರಾ ಆಹಾರ ಕಿಟ್‌ಗಳನ್ನು (ಪೌಷ್ಟಿಕ ಆಹಾರ ಕಿಟ್- ತೊಗರಿ ಬೇಳೆ 2 ಕೆಜಿ, ಅಡುಗೆ ಎಣ್ಣೆ 1 ಕೆಜಿ, ಸಕ್ಕರೆ 1 ಕೆಜಿ, ಉಪ್ಪು 1 ಕೆಜಿ.) ರೂ.61.19 ಕೋಟಿಗಳ ಮೊತ್ತದಲ್ಲಿ ವಿತರಿಸಲು ಸಚಿವ ಸಂಪುಟ ನಿರ್ಣಯಿಸಿದೆ.

ರಾಜ್ಯ ಸಿವಿಲ್ ಸೇವೆ ಹುದ್ದೆಗಳ ನೇರ ನೇಮಕಾತಿಯಲ್ಲಿ ಎಲ್ಲಾ ಪ್ರವರ್ಗದ ಅಭ್ಯರ್ಥಿಗಳಿಗೆ ಗರಿಷ್ಠ ವಯೋಮಿತಿಯಲ್ಲಿ 3 ವರ್ಷಗಳನ್ನು ಸಡಿಲಿಸಿ ದಿನಾಂಕ: 29.09.2025 ರಂದು ಹೊರಡಿಸಿರುವ ಆದೇಶಕ್ಕೆ ಘಟನೋತ್ತರ ಅನುಮೋದನೆ ನೀಡಲಾಗಿದೆ. ರಾಜ್ಯದಾದ್ಯಂತ ಸರ್ಕಾರಿ ಕಚೇರಿಗಳು, ಗಾರ್ಮೆಂಟ್ಸ್ ಒಓಅ ಗಳು ಖಖ ಮತ್ತು ಇತರೆ ಖಾಸಗಿ ಕೈಗಾರಿಕೆಗಳು ಸೇರಿದಂತೆ ಎಲ್ಲಾ ವಲಯಗಳಲ್ಲಿ ಕೆಲಸ ಮಾಡುವ ಮಹಿಳೆಯರಿಗೆ ಪ್ರತಿ ತಿಂಗಳು ಒಂದು ದಿನದ ವೇತನ (ಒಜಟಿ-



ಣಡಿಣಚಿಟ ಏಜಜಿಚಿತಿ ಕಿಂಟುಟಿಭಿಥಿ, 2025)ನ್ನು ಜಾರಿಗೆ ತರಲು ಸಚಿವ ಸಂಪುಟ ನಿರ್ಣಯಿಸಿದೆ.

ಕೃಷಿ ಇಲಾಖೆಯಡಿ 2025-26ನೇ ಸಾಲಿನ ರಸಗೊಬ್ಬರ ಕಾಪು ದಾಸ್ತಾನು ಮಾಡಲು ಕರ್ನಾಟಕ ರಾಜ್ಯ ಬೀಜ ನಿಗಮ ನಿಯಮಿತ ಮತ್ತು ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳಿಯವರು ಪಡೆಯುವ ತಲಾ ರೂ. 200.00 ಕೋಟಿಗಳ ಬಂಡವಾಳ ಸಾಲಕ್ಕೆ ರಾಜ್ಯ ಸರ್ಕಾರದ ಖಾತ್ರಿ ನೀಡಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ. ಜಲಾನಯನ ಅಭಿವೃದ್ಧಿ ಘಟಕ-ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ 2.0 (ಕಒಎಖಙ-ಘಆಅ 2.0) ಯೋಜನೆಯಡಿ ಹೆಚ್ಚುವರಿ 15 ಯೋಜನೆಗಳನ್ನು ರಾಜ್ಯದ 15 ತಾಲ್ಲೂಕುಗಳಲ್ಲಿ 39413 ಹೆಕ್ಟೇರ್ ಪ್ರದೇಶದಲ್ಲಿ ಯೋಜನಾ ಮೊತ್ತ ರೂ.90.07 ಕೋಟಿಗಳಲ್ಲಿ (ಕೇಂದ್ರ ಮತ್ತು ರಾಜ್ಯ ಸರ್ಕಾರ - ಶೇ.60:40) ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಲು ನಿರ್ಣಯಿಸಲಾಯಿತು.

2025-26ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 452 ರಲ್ಲಿನ ಘೋಷಣೆಯನ್ವಯ, ಕರ್ನಾಟಕ ರಾಜ್ಯ ದತ್ತಾಂಶ ಕೇಂದ್ರದಲ್ಲಿನ ಭದ್ರತಾ ಕಾರ್ಯಾಚರಣೆ ಕೇಂದ್ರವನ್ನು ನವೀಕರಿಸಲು ಮತ್ತು ಸೈಬರ್ ಭದ್ರತೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶಕ್ಕಾಗಿ ವಾರ್ಷಿಕ ರೂ.38.33 ಕೋಟಿಗಳ ಅಂದಾಜು ವೆಚ್ಚದಲ್ಲಿ ಹೊಸ ತಂತ್ರಾಂಶಗಳನ್ನು ಅಳವಡಿಸಲು; ಸಚಿವ ಸಂಪುಟ ನಿರ್ಣಯಿಸಿದೆ. 5ನೇ ರಾಜ್ಯ ಹಣಕಾಸು ಆಯೋಗದ ಅವಧಿಯನ್ನು ನವೆಂಬರ್ 2025 ರವರೆಗೆ ವಿಸ್ತರಿಸಲು ಸಚಿವ ಸಂಪುಟ ನಿರ್ಣಯಿಸಿದೆ.

ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ನೋಂದಾಯಿತ ಕಾರ್ಮಿಕರ ಮಕ್ಕಳ ಶೈಕ್ಷಣಿಕ ಪ್ರಗತಿಗಾಗಿ ಎರಡನೇ ಹಂತದಲ್ಲಿ 11 ಶ್ರಮಿಕ ವಸತಿ ಶಾಲೆಗಳನ್ನು ರೂ.405.55 ಕೋಟಿಗಳ ಅಂದಾಜು ಮೊತ್ತದಲ್ಲಿ ಸ್ಥಾಪಿಸಲು ಆಡಳಿತಾತ್ಮಕ ಅನುಮೋದನೆ ನೀಡಿದೆ.

ಲೋಕೋಪಯೋಗಿ ಇಲಾಖೆಯಡಿ ಸೇತುವೆಗಳು ಪುನರ್ ನಿರ್ಮಾಣ ಹಾಗೂ ಪುನಶ್ಚೇತನ ಕಾಮಗಾರಿಗಳನ್ನು ರೂ.2000.00 ಕೋಟಿಗಳ ಅಂದಾಜು ವೆಚ್ಚದಲ್ಲಿ ಕೈಗೆತ್ತಿಕೊಳ್ಳಲು ತಾತ್ವಿಕ ಅನುಮೋದನೆ ನೀಡಿದೆ.

# ಮಕ್ಕಳ ಸಾವಿಗೆ ಕಾರಣವಾಗಿದ್ದ ಕೆಮ್ಮಿನ ಸಿರಪ್ ಕಂಪನಿ ಮಾಲೀಕನ ಬಂಧನ

**ಚೆನ್ನೈ:** ಮಕ್ಕಳ ಸಾವಿಗೆ ಕಾರಣವಾಗಿದ್ದ ಕೆಮ್ಮಿನ ಸಿರಪ್ ತಯಾರಿಕಾ ಕಂಪನಿಯ ಮಾಲೀಕನನ್ನು ಪೊಲೀಸರು ಕೊನೆಗೂ ಬಂಧಿಸಿದ್ದಾರೆ.

ಕೋಲ್ಡ್ರಿಫ್ ಕೆಮ್ಮಿನ ಸಿರಪ್ ಸೇವಿಸಿ ಕನಿಷ್ಠ 21 ಮಕ್ಕಳು ಮೃತಪಟ್ಟ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿರಪ್ ತಯಾರಿಸಿದ ಕಂಪನಿ ಸ್ರೆಸನ್ ಫಾರ್ಮಾಸ್ಯುಟಿಕಲ್ಸ್‌ನ ಮಾಲೀಕ ಎಸ್.ರಂಗನಾಥನ್ ಅವರನ್ನು ಮಧ್ಯಪ್ರದೇಶ ಪೊಲೀಸರು ಚೆನ್ನೈನಲ್ಲಿ ಸಂಬಂಧಿಸಿದ್ದಾರೆ.

ಮಧ್ಯಪ್ರದೇಶ ಮತ್ತು ತಮಿಳುನಾಡು ಪೊಲೀಸರು ನಡೆಸಿದ ಜಂಟಿ ಕಾರ್ಯಾಚರಣೆಯಲ್ಲಿ ರಂಗನಾಥನ್ ಅವರನ್ನು ಚೆನ್ನೈನಲ್ಲಿ ಬಂಧಿಸಲಾಗಿದೆ. ಈತನನ್ನು ವಶಕ್ಕೆ ಪಡೆದಿರುವ ಮಧ್ಯಪ್ರದೇಶದ ಪೊಲೀಸರು ವಿಚಾರಣೆ ನಡೆಸಿದ್ದಾರೆ.

ರಾಜ್ಯದಲ್ಲಿ ವಿಷಕಾರಿ ಸಿರಪ್ ಸೇವಿಸಿ ಸಾವನ್ನಪ್ಪಿದ ಕನಿಷ್ಠ 21 ಮಕ್ಕಳ ಸಾವಿನ ಪ್ರಕರಣಕ್ಕೆ ಸಂಬಂಧಿಸಿದಂತೆ ಮಧ್ಯಪ್ರದೇಶದ ಪೊಲೀಸರು ಕಂಪನಿ ಮಾಲೀಕ



ರಂಗನಾಥನ್ ಅವರಿಗಾಗಿ ಶೋಧ ನಡೆಸಿದ್ದರು ಅಲ್ಲದೆ ಅವರ ಸುಳಿವುಕೊಟ್ಟವರಿಗೆ 20,000 ರೂ. ಬಹುಮಾನವನ್ನು ಘೋಷಿಸಿದ್ದರು.

ಮಧ್ಯಪ್ರದೇಶದ ಹೊರತಾಗಿ, ರಾಜಸ್ಥಾನದಲ್ಲೂ ಈ ಸಿರಪ್ ಸೇವಿಸಿ ಕೆಲ ಮಕ್ಕಳು ಸಾವನ್ನಪ್ಪಿದರು. ಜೊತೆಗೆ ಮಕ್ಕಳಿಗೆ ಮೂತ್ರಪಿಂಡದ ಸೋಂಕು ಉಂಟಾಗಿ ಹಲವು ಮಕ್ಕಳು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಕೋಲ್ಡ್ರಿಫ್ ಎಂಬುದು ಮಕ್ಕಳಲ್ಲಿ ಶೀತ ಮತ್ತು ಕೆಮ್ಮಿನ ಲಕ್ಷಣಗಳನ್ನು ನಿವಾರಿಸಲು ಸೂಚಿಸಲಾದ ಔಷಧಿಯಾಗಿದೆ, ಉದಾಹರಣೆಗೆ ಮೂಗು ಸೋರುವುದು, ಸೀನುವುದು, ಗಂಟಲು ನೋವು ಮತ್ತು ಕಣ್ಣುಗಳಲ್ಲಿ ನೀರು ಬರುವುದು ಈ ರೀತಿಯ ಕಾಯಿಲೆಗಳಿಗೆ ಶಿಫಾರಸ್ಸು ಮಾಡಲಾಗುತ್ತಿದೆ. ಈ ತಿಂಗಳ ಆರಂಭದಲ್ಲಿ, ಸಿರಪ್ ಅನ್ನು ಪರೀಕ್ಷೆಗೆ ಒಳಪಡಿಸಿ ವಿಷಕಾರಿ ಮತ್ತು ಹಾನಿಕಾರಕ ರಾಸಾಯನಿಕ ಡೈಥಿಲೀನ್ ಗ್ಲೈಕಾಲ್ ಇರುವಿಕೆಯನ್ನು ತಮಿಳುನಾಡು ಅಧಿಕಾರಿಗಳು ಪತ್ತೆ ಮಾಡಿ ಸಿರಪ್ ಅನ್ನು ಕಲಬೆರಕೆ ಎಂದು ಘೋಷಿಸಿದ್ದರು,

ಭಾರತದ ಉನ್ನತ ಔಷಧ ನಿಯಂತ್ರಕ ಔಷಧೀಯ ಉತ್ಪಾದನಾ ಪದ್ಧತಿಗಳಲ್ಲಿ ಗಂಭೀರ ಲೋಪ ಒಪ್ಪಿಕೊಂಡಿದೆ. ಹಲವಾರು ಕಾರ್ಖಾನೆಗಳ ತಪಾಸಣೆಯಲ್ಲಿ ಕಂಪನಿಗಳು ಅಗತ್ಯಕ್ಕೆ ಅನುಸಾರವಾಗಿ ಪ್ರತಿಯೊಂದು ಬ್ಯಾಚ್ ಕಚ್ಚಾ ವಸ್ತುಗಳು ಮತ್ತು ಸಕ್ರಿಯ ಪದಾರ್ಥಗಳನ್ನು ಪರೀಕ್ಷಿಸುತ್ತಿಲ್ಲ ಎಂದು ಕಂಡುಬಂದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

**ಮೃತರ ಸಂಖ್ಯೆ 21ಕ್ಕೆ ಏರಿಕೆ**

ಕೋಲ್ಡ್ರಿಫ್ ಕೆಮ್ಮಿನ ಸಿರಪ್ ಸೇವಿಸಿ ಮಧ್ಯಪ್ರದೇಶದಲ್ಲಿ ಮೃತಪಟ್ಟ ಮಕ್ಕಳ ಸಂಖ್ಯೆ 21ಕ್ಕೆ ಏರಿಕೆಯಾಗಿದೆ, ಜೊತೆಗೆ ಸಿರಪ್ ಸೇವಿಸಿ ಹಲವು ಮಕ್ಕಳು ಅಸ್ವಸ್ಥರಾಗಿದ್ದು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ರಾಜಸ್ತಾನದಲ್ಲಿಯೂ ಸಿರಪ್ ಸೇವಿಸಿ ಹಲವು ಮಕ್ಕಳು ಸಾವನ್ನಪ್ಪಿದ್ದಾರೆ. ಈ ಎಲ್ಲಾ ಬೆಳವಣಿಗೆ ಹಿನ್ನೆಲೆಯಲ್ಲಿ ಸಿರಪ್ ನಿಷೇಧಿಸಲಾಗಿದೆ.

**ಔಷಧ ಕಂಪನಿ ಶಾಶ್ವತ ಬಂದ್**

ಮಧ್ಯಪ್ರದೇಶ ಮತ್ತು ರಾಜಸ್ತಾನದಲ್ಲಿ ಕೋಲ್ಡ್ರಿಫ್ ಕೆಮ್ಮಿನ ಸಿರಪ್ ಸೇವಿಸಿ 21ಕ್ಕೂ ಅಧಿಕ ಮಕ್ಕಳು ಸಾವನ್ನಪ್ಪಿಸಿದ ಹಿನ್ನೆಲೆಯಲ್ಲಿ ಔಷಧಿ ತಯಾರಕರಾದ ಸ್ರೇಸನ್ ಫಾರ್ಮಾಸ್ಯುಟಿಕಲ್ಸ್‌ನ ಮಾಲೀಕ ರಂಗನಾಥನ್ ಬಂಧಿಸಿದ ಬೆನ್ನಲ್ಲೇ ಔಷಧ ಕಂಪನಿಯನ್ನು ಶಾಶ್ವತವಾಗಿ ಮುಚ್ಚಿ ಆದೇಶಿಸಲಾಗಿದೆ.

# ಉದ್ಯಮಶೀಲತಾ ತರಬೇತಿಗೆ ಆಹ್ವಾನ

**ದಾವಣಗೆರೆ :** ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ, ಸಿಡಾಕ್ ಹಾಗೂ ಬಂಧುತ್ವ ಫೌಂಡೇಶನ್(ರಿ) ಇವರ ಸಂಯುಕ್ತಾಶ್ರಯದಲ್ಲಿ ಅಕ್ಟೋಬರ್ 28 ರಿಂದ ನವಂಬರ್ 7 ರವರೆಗೆ ಚನ್ನಗಿರಿಯ ಬಂಧುತ್ವ ಫೌಂಡೇಶನ್(ರಿ) ಸಭಾಂಗಣದಲ್ಲಿ ಸ್ವಯಂ ಉದ್ಯೋಗ ಕೈಗೊಳ್ಳಲು ಇಚ್ಚಿಸುವ ಜಿಲ್ಲೆಯ ಪರಿಶಿಷ್ಟ ಜಾತಿಯ ಮಹಿಳಾ ಉದ್ಯಮ ಆಕಾಂಕ್ಷಿಗಳಿಗೆ 10 ದಿನಗಳ ಉದ್ಯಮಶೀಲತಾಭಿವೃದ್ಧಿ ತರಬೇತಿ ಆಯೋಜಿಸಲಾಗಿದೆ. ಆಸಕ್ತರು ಅರ್ಜಿಯ ಜೊತೆಗೆ 2 ಪಾಸ್‌ಪೋರ್ಟ್ ಅಳತೆಯ ಫೋಟೋ, ಆಧಾರ್ ಕಾರ್ಡ್ ಹಾಗೂ ಜಾತಿ ಪ್ರಮಾಣ ಪತ್ರದ ಪ್ರತಿಯನ್ನು ಸಲ್ಲಿಸಬೇಕು. ಆಸಕ್ತ ಅಭ್ಯರ್ಥಿಗಳು ಉಪನಿರ್ದೇಶಕರ ಕಛೇರಿ, ಸಿಡಾಕ್, ಪ್ಲಾಟ್ ನಂ: 76ಎ-(ಪಿ1), ಕರೂರು ಕೈಗಾರಿಕಾ ಪ್ರದೇಶ,.

# ಉತ್ತಮ ಜೀವನಕ್ಕೆ ಮೂಢನಂಬಿಕೆಯಿಂದ ದೂರಾಗಿ: ಶಾಸಕಿ ನಯನ ಮೋಟಮ್ಮ

**ಚಿಕ್ಕಮಗಳೂರು:** ಜನರು ಜೀವನದಲ್ಲಿ ಮೂಢನಂಬಿಕೆಯಿಂದ ದೂರ ಉಳಿದು ವೈಜ್ಞಾನಿಕವಾಗಿ ಚಿಂತನೆ ನಡೆಸಿ ಪೌಷ್ಟಿಕ ಆಹಾರ ಸೇವನೆಯೊಂದಿಗೆ ಉತ್ತಮ ಜೀವನ ಪದ್ಧತಿ ಅಳವಡಿಸಿಕೊಳ್ಳಬೇಕೆಂದು ಶಾಸಕಿ ನಯನ ಮೋಟಮ್ಮ ಕಿವಿಮಾತು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಾರ್ತಾ ಮತ್ತು ಪ್ರಚಾರ ಇಲಾಖೆ ಹಾಗೂ ಶಿಶು ಅಭಿವೃದ್ಧಿ ಯೋಜನೆ ಇವುಗಳ ಸಂಯುಕ್ತ ಆಶ್ರಯದಲ್ಲಿ ಇಂದು ಅಂಬಳೆಯ ಎ.ಆರ್.ಕೃಷ್ಣಶಾಸ್ತ್ರಿ ಸಭಾ ಭವನದಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ಪೋಷಣ್ ಮಾಸಚರಣೆ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಬಾಣಂತಿಯರು ಮತ್ತು ಗರ್ಭಿಣಿಯರಿಗೆ ಮಕ್ಕಳಿಗೆ ನೀಡಬೇಕಾದ ಪೌಷ್ಟಿಕ ಆಹಾರ ಪದ್ಧತಿಯ ಬಗ್ಗೆ ಈಗಾಗಲೇ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ಆರೋಗ್ಯ ಇಲಾಖೆಗಳು ಸಾಕಷ್ಟು ಅರಿವು ಕಾರ್ಯಕ್ರಮವನ್ನು ಮೂಡಿಸುತ್ತಾ ಬಂದಿದ್ದರೂ ಜನರಲ್ಲಿ ಮಾತ್ರ ಬದಲಾವಣೆಗಳಾಗದಿರುವುದು ವಿಷಾದನೀಯ. ಇನ್ನೂ ಕೂಡ ಮಕ್ಕಳು, ಗರ್ಭಿಣಿಯರು ಮತ್ತು ಬಾಣಂತಿಯರಲ್ಲಿ ಅಪೌಷ್ಟಿಕತೆಯನ್ನು ಕಾಣುತ್ತಿದ್ದೇವೆ. ಜನರು ಮೂಢನಂಬಿಕೆಯನ್ನು ತೊಡೆದು ವೈಜ್ಞಾನಿಕವಾಗಿ ಚಿಂತನೆ ನಡೆಸಿ ವೈಜ್ಞಾನಿಕ ಪದ್ಧತಿಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ಕಿವಿಮಾತು ಹೇಳಿದರು. ಅಲ್ಲದೇ ಮಹಿಳೆಯರು ಸ್ವಚ್ಛತೆಯನ್ನು ಕಾಪಾಡಿಕೊಳ್ಳುವ ಬಗ್ಗೆ ಮತ್ತು ಮಕ್ಕಳಿಗೆ ಶಿಸ್ತನ್ನು ಮನೆಯಿಂದಲೇ ಕಲುಹಿಸುವಂತೆ ತಿಳಿಸಿದರು.

ಶಿಶು ಅಭಿವೃದ್ಧಿ ಯೋಜನಾಧಿಕಾರಿ ಸಿ. ರಂಗನಾಥ ಪ್ರಾಸ್ತಾವಿಕ ಮಾತನಾಡಿ ಪೌಷ್ಟಿಕ ಕರ್ನಾಟಕವನ್ನು ನಿರ್ಮಾಣ ಮಾಡುವ ಸಂಕಲ್ಪದೊಂದಿಗೆ ಪೋಷಣ್ ಅಭಿಯಾನ ಯೋಜನೆಯು ಮಹತ್ವಾಕಾಂಕ್ಷಿ ಯೋಜನೆಯಾಗಿದ್ದು, ತಲೆತಲಾಂತರದಿಂದ ಭಾರತವನ್ನು ಕಾಡುತ್ತಿದ್ದ ಅಪೌಷ್ಟಿಕತೆಯನ್ನು ತೊಡೆದು ಹಾಕುವ ನಿಟ್ಟಿನಲ್ಲಿ ಪ್ರಮುಖವಾಗಿ 5 ಗುರಿಗಳನ್ನು ಹೊಂದಿದ್ದು, ಇದರಲ್ಲಿ ಮಕ್ಕಳು, ಗರ್ಭಿಣಿಯರು ಮತ್ತು ಹಾಲುಣಿಸುವ ತಾಯಂದಿರು, ಕಿಶೋರಿಯರು ಅಪೌಷ್ಟಿಕತೆ ನಿವಾರಣೆ, ರಕ್ತಹೀನತೆ ತಡೆಗಟ್ಟುವಿಕೆ, ಕುಂಠಿತ ಬೆಳವಣಿಗೆ, ಜನನ ತೂಕ ಕಡಿಮೆಯಾಗುವಿಕೆ ಇವುಗಳನ್ನು ಸುಧಾರಿಸುವ ನಿಟ್ಟಿನಲ್ಲಿ 2018 ಮಾರ್ಚ್ 8 ರಂದು ಈ ಯೋಜನೆಗೆ ಚಾಲನೆ ನೀಡಲಾಗಿತ್ತು ಎಂದರು. ಪ್ರತಿ ವರ್ಷ ಸೆಪ್ಟಂಬರ್ ಮಾಹೆಯಲ್ಲಿ ಪೋಷಣ್ ಮಾಸಾಚರಣೆ ಎನ್ನುವ ಶೀರ್ಷಿಕೆಯಲ್ಲಿ ವಿವಿಧ ಉದ್ದೇಶಗಳೊಂದಿಗೆ ಕಾರ್ಯಕ್ರಮವನ್ನು ಆಯೋಜಿಸಿ ಅಪೌಷ್ಟಿಕತೆ ನಿವಾರಣೆ ಹಾಗೂ ಉತ್ತಮ ಪೋಷಕಾಂಶ ಆಹಾರ ಪ್ರಾತ್ಯಕ್ಷಿಕೆಗಳನ್ನು ಜನರಿಗೆ ತೋರಿಸುವ ಮುಖೇನ ಅರಿವು ಮೂಡಿಸುವ ಕಾರ್ಯಕ್ರಮ ಇದಾಗಿದೆ ಎಂದರು.

2025ನೇ ಸಾಲಿನಲ್ಲಿ ಹಲವು ನಿಯತಾಂಶಗಳನ್ನು



ಗುರಿಯಾಗಿಸಿಕೊಂಡು ಜಿಲ್ಲಾದ್ಯಂತ ಎಲ್ಲ ಅಂಗನವಾಡಿ ಕೇಂದ್ರಗಳು, ಶಾಲೆ, ಗ್ರಾಮ ಪಂಚಾಯಿತಿ, ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಅರಿವು ಕಾರ್ಯಕ್ರಮಗಳು ಹಾಗೂ ಪೌಷ್ಟಿಕ ಆಹಾರ ಪ್ರಾತ್ಯಕ್ಷಿಕೆ ಕೈಗೊಂಡು ಉತ್ತಮ ಆರೋಗ್ಯವಂತ ಸಮಾಜವನ್ನು ನಿರ್ಮಾಣ ಮಾಡುವ ಉದ್ದೇಶವನ್ನು ಬಿತ್ತರಿಸುತ್ತಿದ್ದು, ಎಲ್ಲರೀ ಈ ಕಾರ್ಯಕ್ರಮದ ಪ್ರಯೋಜನ ಪಡೆದುಕೊಂಡು ಆರೋಗ್ಯವಂತರಾಗಬೇಕು. ಇಲ್ಲಿನ ವಿಚಾರಗಳನ್ನು ತಮ್ಮ ಕುಟುಂಬದವರಿಗೂ ತಿಳಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕೆ.ಆರ್.ಪೇಟೆ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ವಿದ್ಯಾಸಾಗರ್ ಉಪನ್ಯಾಸ ನೀಡಿ ಆಧುನಿಕ ಸಮಾಜದಲ್ಲಿ ಜನರು ಹೆಚ್ಚು ತೊಂದರೆಗೆ ಒಳಗಾಗುತ್ತಿರುವುದು ಅವರು ಸೇವಿಸುತ್ತಿರುವ ಆಹಾರ ಕ್ರಮದಿಂದ. ಈ ಹಿನ್ನೆಲೆಯಲ್ಲಿ ಸ್ಥಳೀಯವಾಗಿ, ಸುಲಭವಾಗಿ ಸಿಗುವ ಉತ್ತಮವಾದ ಪೋಷಕಾಂಶಯುಕ್ತ ಆಹಾರ ಕ್ರಮವನ್ನು ರೂಢಿಸಿಕೊಂಡಲ್ಲಿ ಆರೋಗ್ಯವಂತರಾಗಿ ಜೀವನ ನಡೆಸಬಹುದು ಎಂದರು.

ಪ್ರತಿಯೊಬ್ಬರೂ ತಮ್ಮ ದಿನನಿತ್ಯದ ಊಟದಲ್ಲಿ ಮೊಳಕೆ ಕಾಳುಗಳು, ಸೊಪ್ಪು, ಬಣ್ಣ ಬಣ್ಣದ ತರಕಾರಿಗಳು ಹಾಗೂ ಹಣ್ಣುಗಳನ್ನು ಸೇವಿಸಬೇಕು. ದಿನಕ್ಕೆ 3-4 ಲೀಟರ್ ನೀರನ್ನು ಕುಡಿಯಬೇಕು. ಪ್ರತಿನಿತ್ಯ ವ್ಯಾಯಮ ಮಾಡಬೇಕು. 8 ಗಂಟೆಗಳ ಕಾಲ ನಿದ್ರಿಸಬೇಕು ಎಂದು ತಿಳಿಸಿದರು. ಹದಿಹರೆಯದ ಹೆಣ್ಣು ಮಕ್ಕಳು ಉತ್ತಮವಾದ ಆಹಾರವನ್ನು ಸೇವಿಸಬೇಕು, ಶುಚಿತ್ವದ ಕಡೆಗೆ ಹೆಚ್ಚಿನ ಮಹತ್ವ ನೀಡಬೇಕು. ಋತುಸ್ರಾವದ ಸಮಯದಲ್ಲಿ ಪ್ರತಿನಿತ್ಯ ಸ್ನಾನ ಮಾಡಬೇಕು ಹಾಗೂ ವೈಯಕ್ತಿಕ ಸ್ವಚ್ಛತೆ ಕಡೆ ಗಮನಹರಿಸಬೇಕು ಎಂದು ತಿಳಿಹೇಳಿದರು.

ಮಹಿಳಾ ಮತ್ತು ಮಕ್ಕಳ ಉಪನಿರ್ದೇಶಕ ಶ್ರೀನಿವಾಸ್ ವೈ.ಆಲದಾರ್ತಿ ಮಾತನಾಡಿ, ಎಷ್ಟೇ ಅರಿವು ಮೂಡಿಸಿದರೂ ಜನರಲ್ಲಿ ಅಪೌಷ್ಟಿಕತೆಯನ್ನು ದೂರ ಮಾಡಲು ಸಾಧ್ಯವಾಗುತ್ತಿಲ್ಲ. ಈ ನಿಟ್ಟಿನಲ್ಲಿ ಜನರ ಸಹಭಾಗಿತ್ವವೂ ಅತ್ಯಂತ ಮುಖ್ಯವಾದದ್ದು ಎಂದು ತಿಳಿಸಿ ಸಂಪನ್ಮೂಲ ವ್ಯಕ್ತಿಗಳು ನೀಡಿದ ಮಾಹಿತಿಯನ್ನು ಎಲ್ಲರೂ ತಮ್ಮ ಸಮುದಾಯಕ್ಕೆ ತಿಳಿಸುವಂತೆ ಸಲಹೆ ನೀಡಿದರು.

ಅಂಬಳೆ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಲಕ್ಷಮ್ಮ ಅಧ್ಯಕ್ಷತೆ ವಹಿಸಿದ್ದರು. ಸದಸ್ಯರುಗಳಾದ ಮಲ್ಲಮ್ಮ, ವಿಜಯಮ್ಮ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ಡಿ.ಸಂತೋಷ್, ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಜೆ.ರೂಪಾಕುಮಾರಿ, ಅಂಬಳೆ ಸರ್ಕಾರಿ ಆಯುರ್ವೇದ ಚಿಕಿತ್ಸಾಲಯದ ವೈದ್ಯಾಧಿಕಾರಿ ಡಾ.ಎನ್.ಕೆ.ಶೋಭಾ, ಹಿರಿಯ ಮೇಲ್ವಿಚಾರಕಿ ಸಿ.ಎಂ.ಲೀಲಾವತಿ, ಪೋಷಣ್ ಅಭಿಯಾನದ ಯೋಜನಾ ಸಂಯೋಜಕಿ ಕೆ.ದಿವ್ಯ ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಭಾಗವಹಿಸಿದ್ದರು.


## ದಾವಣಗೆರೆ-ಹರಿಹರ ನಗರಾಭಿವೃದ್ಧಿ ಪ್ರಾಧಿಕಾರ, ದಾವಣಗೆರೆ.

ಶ್ರೀ ಡಿ. ದೇವರಾಜ ಅರಸು ಬಡಾವಣೆ, 'ಎ' ಬ್ಲಾಕ್, ಪಿ.ಬಿ.ರಸ್ತೆ, ದಾವಣಗೆರೆ-06

ನಂ:ದಾಹನಪ್ರಾ:ತಾಶಾ:ಎಇಇ:ಕಸಾಸಂಪೋ:ಟೆಂಪ್ರ:08:2025-26/2097 ದಿನಾಂಕ: 08-10-2025

### ಅಲ್ಪಾವಧಿ ಟೆಂಡರ್ ಪ್ರಕಟಣೆ (ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್)

ಆಯುಕ್ತರು, ದಾವಣಗೆರೆ-ಹರಿಹರ ನಗರಾಭಿವೃದ್ಧಿ ಪ್ರಾಧಿಕಾರ, ದಾವಣಗೆರೆ ವ್ಯಾಪ್ತಿಯಲ್ಲಿ ಬರುವ ಈ ಕೆಳಕಂಡ ಕಾಮಗಾರಿಗಳಿಗೆ ಲೋಕೋಪಯೋಗಿ ಇಲಾಖೆಯಿಂದ ನೋಂದಾಯಿತ ಅರ್ಹ ಹಾಗೂ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್‌ನಲ್ಲಿ ನೋಂದಾಯಿಸಿಲ್ಪಟ್ಟ ಗುತ್ತಿಗೆದಾರರಿಂದ ಪ್ರಾಧಿಕಾರದ ನಿಯಮಾವಳಿ ಮೇರೆಗೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಮುಖಾಂತರ ಐಟಂವಾರು ಅಲ್ಪಾವಧಿ ಟೆಂಡರ್‌ನ್ನು ಆಹ್ವಾನಿಸಲಾಗಿದೆ.

| ಕ್ರ.ಸಂ | Category | ಇಂಡೆಂಟ್ ಸಂಖ್ಯೆ | ಕಾಮಗಾರಿಯ ಹೆಸರು | ಅಂದಾಜು ಮೊತ್ತ ರೂ. ಲಕ್ಷಗಳಲ್ಲಿ | ಟೆಂಡರ್‌ಗೆ ಇಟ್ಟಿರುವ ಮೊತ್ತ ರೂ.ಗಳಲ್ಲಿ | ಮುಂಗಡ ಹಣ ಠೇವಣಿ (ಇ.ಎಂ.ಡಿ.) ರೂ.ಗಳಲ್ಲಿ | ಗುತ್ತಿಗೆದಾರರ ದರ್ಜೆ | ಟೆಂಡರ್ ನಮೂನೆ |
|---|---|---|---|---|---|---|---|---|
| 1 | Others | DHUDA/2025-26 /OW/ WORK_INDENT43 | ಮಹಾಯೋಜನೆಯಲ್ಲಿರುವ ಹರಿಹರ ನಗರದ ಮಹಜೇನಹಳ್ಳಿ ಗ್ರಾಮದ ರಿ.ಸ.ನಂ:18/2ಬಿರಲ್ಲಿರುವ ಉದ್ಯಾನವನ್ನು ಅಭಿವೃದ್ಧಿ ಪಡಿಸುವುದು. | 21.00 | 17,51,024/- | 50,000/- | 4ನೇ ದರ್ಜೆ ಮೇಲ್ಪಟ್ಟು (ಸಿವಿಲ್) | ಕೆಡಬ್ಲ್ಯೂ-2 |
| 2 | ST | DHUDA/2025-26 /OW/ WORK_INDENT44 | ಮಹಾಯೋಜನೆಯಲ್ಲಿರುವ ಹರಿಹರ ನಗರದ ಮಹಜೇನಹಳ್ಳಿ ಗ್ರಾಮದ ರಿಸನಂ: 4/2ಎರಲ್ಲಿರುವ ಅಂಬೇಡ್ಕರ್ ಉದ್ಯಾನವನ ವನ್ನು ಅಭಿವೃದ್ಧಿ ಪಡಿಸುವುದು. | 23.00 | 19,10,721/- | 25,000/- | 4ನೇ ದರ್ಜೆ ಮೇಲ್ಪಟ್ಟು (ಸಿವಿಲ್) | ಕೆಡಬ್ಲ್ಯೂ-2 |
| 3 | SC | DHUDA/2025-26 /OW/ WORK_INDENT47 | ಮಹಾಯೋಜನೆಯಲ್ಲಿರುವ ಹರಿಹರ ನಗರದ ಮಹಜೇನಹಳ್ಳಿ ಗ್ರಾಮದ ರಿ.ಸ.ನಂ: 9/2ರಲ್ಲಿರುವ ಉದ್ಯಾನವನ್ನು ಅಭಿವೃದ್ಧಿ ಪಡಿಸುವುದು. | 25.00 | 21,79,554/- | 25,000/- | 4ನೇ ದರ್ಜೆ ಮೇಲ್ಪಟ್ಟು (ಸಿವಿಲ್) | ಕೆಡಬ್ಲ್ಯೂ-2 |
| 4 | CAT-II(A) | DHUDA/2025-26 /OW/ WORK_INDENT48 | ದಾವಣಗೆರೆ-ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಗೆ ಬರುವ ದಾವಣಗೆರೆ ನಗರದ ಕೊಂಡಜ್ಜಿ ರಸ್ತೆಯ ಶಿವಪುರದಲ್ಲಿನ ಶ್ರೀ ಎಸ್.ಎ.ರವೀಂದ್ರನಾಥ ಉದ್ಯಾನವನದ ಅಭಿವೃದ್ಧಿ ಕಾಮಗಾರಿ. | 23.00 | 19,17,398/- | 25,000/- | 4ನೇ ದರ್ಜೆ ಮೇಲ್ಪಟ್ಟು (ಸಿವಿಲ್) | ಕೆಡಬ್ಲ್ಯೂ-2 |
| 5 | Others | DHUDA/2025-26 /OW/ WORK_INDENT49 | ದಾವಣಗೆರೆ-ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಗೆ ಬರುವ ಹರಿಹರ ನಗರದ 04ನೇ ವಾರ್ಡ್ ಲೇಬರ್ ಕಾಲೋನಿ ಉದ್ಯಾನವನ ಅಭಿವೃದ್ಧಿ ಕಾಮಗಾರಿ. | 25.00 | 20,73,468/- | 50,000/- | 4ನೇ ದರ್ಜೆ ಮೇಲ್ಪಟ್ಟು (ಸಿವಿಲ್) | ಕೆಡಬ್ಲ್ಯೂ-2 |
| 6 | Others | DHUDA/2025-26 /OW/ WORK_INDENT50 | ದಾವಣಗೆರೆ-ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಗೆ ಬರುವ ದಾವಣಗೆರೆ ನಗರದ ಶೇಖರಪ್ಪ ಗೋಡೋನ್ ಹತ್ತಿರವಿರುವ ಉದ್ಯಾನವನದ ಅಭಿವೃದ್ಧಿ | 17.00 | 14,15,154.00 | 36,000/- | 4ನೇ ದರ್ಜೆ ಮೇಲ್ಪಟ್ಟು (ಸಿವಿಲ್) | ಕೆಡಬ್ಲ್ಯೂ-1 |
| 7 | Others | DHUDA/2025-26 /OW/ WORK_INDENT51 | ಮಹಾಯೋಜನೆಯಲ್ಲಿರುವ ಹರಿಹರ ನಗರದ ಜೀಜಾಮಾತಾ ಕಾಲೋನಿ ಯಲ್ಲಿರುವ ಉದ್ಯಾನವನವನ್ನು ಅಭಿವೃದ್ಧಿ ಪಡಿಸುವುದು | 21.00 | 17,52,397.00 | 50,000/- | 4ನೇ ದರ್ಜೆ ಮೇಲ್ಪಟ್ಟು (ಸಿವಿಲ್) | ಕೆಡಬ್ಲ್ಯೂ-2 |
| 8 | SC | DHUDA/2025-26 /OW/ WORK_INDENT52 | ದಾವಣಗೆರೆ ನಗರದ ಬಾಲಾಜಿ ನಗರದ ಬಸವೇಶ್ವರ ಬಡಾವಣೆಯ ಡಬಲ್ ರಸ್ತೆಯಲ್ಲಿ ಮತ್ತು ಶ್ರೀ ಡಿ.ದೇವರಾಜ ಅರಸು ಬಡಾವಣೆಯ ರೈಲ್ವೆ ಮೇಲು ಸೇತುವೆಯ ಡಾಂಬರು ರಸ್ತೆಯ ಮೇಲ್ಮೈನ ಗುಂಡಿಗಳನ್ನು ಮುಚ್ಚುವುದು. | 10.00 | 8,30,711/- | 10,500/- | 4ನೇ ದರ್ಜೆ ಮೇಲ್ಪಟ್ಟು (ಸಿವಿಲ್) | ಕೆಡಬ್ಲ್ಯೂ-1 |
| 9 | Others | DHUDA/2025-26 /OW/ WORK_INDENT53 | ಮಹಾಯೋಜನೆಯಲ್ಲಿರುವ ದಾವಣಗೆರೆ-ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯ ಬೀರೂರು ಸಮ್ಮಸಗಿ ರಸ್ತೆಯಲ್ಲಿರುವ ಸಂಗೊಳ್ಳಿ ರಾಯಣ್ಣ ವೃತ್ತ ಅಭಿವೃದ್ಧಿ. | 25.00 | 19,90,738/- | 50,000/- | 4ನೇ ದರ್ಜೆ ಮೇಲ್ಪಟ್ಟು (ಸಿವಿಲ್) | ಕೆಡಬ್ಲ್ಯೂ-2 |

ಈ ಮೇಲ್ಕಂಡ ಎಲ್ಲಾ ಕಾಮಗಾರಿಗಳ ಪೂರ್ಣಗೊಳಿಸಲು ನಿಗಧಿ ಪಡಿಸಿದ ಕಾಲಾವಧಿ(ಮಳೆಗಾಲ ಸೇರಿ): 3 ತಿಂಗಳು.

**Last date & time for tender queries /clarifications 15-10-2025 upto 17.00 hours**
**Last date and time for receipt of tender 17-10-2025 upto 17.00 hours**
**Date & time for opening of (Technical bids) 21-10-2025 at 11.00 hours**
**Note: The rates quoted, whether specified or not, in the tender as per sanctioned estimate are inclusive of all lead and lifts and all other incidental charges to complete the work successfully.**

(1) ಯಾವ ಕಾರಣವನ್ನು ಸಹ ನೀಡದೇ ಯಾವುದೇ ಅಥವಾ ಎಲ್ಲಾ ಟೆಂಡರಗಳನ್ನು ಅಂಗೀಕರಿಸುವ ಅಥವಾ ತಿರಸ್ಕರಿಸುವ ಅಧಿಕಾರವನ್ನು ಈ ಕೆಳಗಿನ ಅಧಿಕಾರಿಯವರು ಕಾಯ್ದಿರಿಸಿಕೊಂಡಿದ್ದಾರೆ. (2) ಅಪೂರ್ಣ ಟೆಂಡರ್‌ಗಳನ್ನು ಯಾವುದೇ ಕಾರಣ ನೀಡದೇ ತಿರಸ್ಕರಿಸಲಾಗುವುದು. (3) ಗುತ್ತಿಗೆದಾರರು ಕಾಮಗಾರಿಗೆ ಬೇಕಾಗುವ ಸಾಮಗ್ರಿಗಳ ಗುಣಮಟ್ಟದ ಪರೀಕ್ಷಾ ವರದಿಯನ್ನು ಪ್ರಾಧಿಕಾರವು ನೇಮಿಸುವ ಮೂರನೇ ವ್ಯಕ್ತಿ ತಪಾಸಣಾ ತಂಡದವರಿಂದ ಅನುಮೋದಿಸಿಕೊಂಡು ನಂತರ ಕಾಮಗಾರಿಗೆ ಉಪಯೋಗಿಸಲು ಬದ್ಧರಾಗಿರತಕ್ಕದ್ದು. ಹೆಚ್ಚಿನ ವಿವರಗಳನ್ನು ಮೇಲ್ಕಂಡ ಕಛೇರಿಯಿಂದ ಕೆಲಸದ ವೇಳೆಯಲ್ಲಿ ಅಥವಾ ವೆಬ್‌ಸೈಟ್ https://kppp.karnataka.gov.in ನಲ್ಲಿ ಪಡೆದುಕೊಳ್ಳಬಹುದಾಗಿದೆ.

ವಾಸಾಇ/ಡಿವಿಜಿ/402/ಕೆಎಸ್‌ಎಂಸಿಎ/2025-26

ಸಹಿ/- **ಆಯುಕ್ತರು, ದಾ-ಹ ನಗರಾಭಿವೃದ್ಧಿ ಪ್ರಾಧಿಕಾರ, ದಾವಣಗೆರೆ.**


# ಕೇಶ ವಿನ್ಯಾಸಗಾರರಿಗೆ ಕಿಟ್ ವಿತರಿಸಿದ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್



**ದಾವಣಗೆರೆ:** ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಅವರ 58ನೇ ಜನ್ಮದಿನದ ಹಿನ್ನೆಲೆಯಲ್ಲಿ ಜಿಲ್ಲೆಯ ಕೇಶ ವಿನ್ಯಾಸಗಾರರಿಗೆ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರು ತಮ್ಮ ಗೃಹಕಚೇರಿಯ ಆವರಣದಲ್ಲಿ ಸುಮಾರು 500 ಕಿಟ್‌ಗಳನ್ನು ವಿತರಿಸಿದರು.

ಈ ಕಾರ್ಯಕ್ರಮವನ್ನು ಎಸ್.ಎಸ್.ಎಂ. ಫೌಂಡೇಶನ್‌ನಿಂದ ಆಯೋಜಿಸಲಾಗಿತ್ತು.

ಈ ಮೂಲಕ ಸ್ಥಳೀಯ ಕೇಶ ವಿನ್ಯಾಸಗಾರರ ವೃತ್ತಿಜೀವನಕ್ಕೆ ಅಗತ್ಯವಾದ ಆಧಾರವನ್ನು ಒದಗಿಸುವುದರ ಜೊತೆಗೆ, ಅವರ ಸ್ವಾವಲಂಬನೆಗೆ ಬಲ ನೀಡುವ ಮಹತ್ವದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ಮಾತನಾಡಿದ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರು ಕಿಟ್ ನ ಸಮರ್ಪಕವಾಗಿ ಬಳಕೆ ಮಾಡಿಕೊಂಡು ವೃತ್ತಿಜೀವನ ನಡೆಸಬೇಕೆಂದು ಸಲಹೆ ನೀಡಿದರು.

# ಇಸ್ರೇಲ್-ಹಮಾಸ್ ನಡುವಿನ ಶಾಂತಿ ಮಾತುಕತೆ ಮೋದಿ ಸ್ವಾಗತ

**ನವದೆಹಲಿ:** ಇಸ್ರೇಲ್ ಮತ್ತು ಹಮಾಸ್ ನಡುವೆ ಶಾಂತಿ ಯೋಜನೆಯ ಮೊದಲ ಹಂತಕ್ಕೆ ಸಮ್ಮತಿ ಸೂಚಿಸಿರುವ ಕ್ರಮವನ್ನು ಪ್ರಧಾನಿ ನರೇಂದ್ರ ಮೋದಿ ಅವರು ಸ್ವಾಗರಿಸಿದ್ದಾರೆ. ಕಳೆದ ಎರಡು ವರ್ಷಗಳಿಂದ ನಡೆಯುತ್ತಿರುವ ಸಂಘರ್ಷದಿಂದ ಸಾವಿರಾರು ಮಂದಿ ಸಾವನ್ನಪ್ಪಿ ಲಕ್ಷಾಂತರ ಮಂದಿ ನಿರಾಶ್ರಿತರಾಗಿರುವ ಹಿನ್ನೆಲೆಯಲ್ಲಿ ಶಾಂತಿ ಒಪ್ಪಂದ ಅತ್ಯಂತ ಮಹತ್ವ ಪಡೆದಿದೆ ಎಂದಿದ್ದಾರೆ ಈ ಕುರಿತು ಪ್ರತಿಕ್ರಿಯೆ ನೀಡಿರುವ ಪ್ರಧಾನಿ ನರೇಂದ್ರ ಮೋದಿ ಅವರು ಇಸ್ರೇಲ್ ಮತ್ತು ಹಮಾಸ್ ಸಂಘರ್ಷ ನಿಲ್ಲಿಸಿ ಒತ್ತೆಯಾಳುಗಳು ಮತ್ತು ಕೈದಿಗಳನ್ನು ಬಿಡುಗಡೆ ಮಾಡುವುದಾಗಿ ಉಭಯ ಕಡೆಯವರು ಒಪ್ಪಿಕೊಂಡಿರುವುದು ಸ್ವಾಗತಾರ್ಹ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿಕೆ ಬೆನ್ನಲ್ಲೇ ಪ್ರಧಾನಿ ನರೇಂದ್ರ ಮೋದಿ ಅವರೂ ಕೂಡ ಸ್ವಾಗತಿಸಿದ್ದಾರೆ ಇಸ್ರೇಲ್ ಮತ್ತು ಹಮಾಸ್ ನಡುವಿನ ಶಾಂತಿ ಯೋಜನೆಯ ಮೊದಲ ಹಂತದ ಒಪ್ಪಂದವನ್ನು ಪ್ರದೇಶದಲ್ಲಿ ಶಾಶ್ವತ ಶಾಂತಿಯನ್ನು ಖಚಿತಪಡಿಸುತ್ತದೆ ಎಂದು ಹೇಳಿರುವ ಅವರು ಇದೇ ವೇಳೆ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರ ಬಲವಾದ ನಾಯಕತ್ವವನ್ನು ಶ್ಲಾಘಿಸಿದ್ದಾರೆ. ಅಮೇರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಶಾಂತಿ ಯೋಜನೆಯ ಮೊದಲ ಹಂತದ ಒಪ್ಪಂದ ಸ್ವಾಗತಿಸಲಾಗುವುದು ಒತ್ತೆಯಾಳುಗಳ ಬಿಡುಗಡೆ ಮತ್ತು ಗಾಜಾದ ಜನರಿಗೆ ಅಗತ್ಯ ಮಾನವೀಯ

# ಮಡಿಕೇರಿ: ಜಾತಿ ಗಣತಿ ಕರ್ತವ್ಯದಲ್ಲಿದ್ದ ಶಿಕ್ಷಕನ ಮೇಲೆ ಕಾಡಾನೆ ದಾಳಿಗೆ ಯತ್ನ



**ಆನೆ ದಾಳಿಯ ಸಮಯದಲ್ಲಿ ಶಿಕ್ಷಕ ಶಿವರಾಮ್ ತನ್ನ ಬೈಕನ್ನು ತ್ಯಜಿಸಿ ಜೀವ ಉಳಿಸಿಕೊಳ್ಳಲು ಓಡಿಹೋದರು.**

**ಮಡಿಕೇರಿ:** ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ಬೈಕ್ ನಲ್ಲಿ ತೆರಳುತ್ತಿದ್ದ ಕೊಡಗಿನ ಶಿಕ್ಷಕರೊಬ್ಬರ ಮೇಲೆ ಕಾಡಾನೆ ದಾಳಿಗೆ ಯತ್ನಿಸಿದ ನಡೆಸಿದ ಘಟನೆ ಬುಧವಾರ ನಡೆದಿದೆ.

ಕೊಡಗಿನ ಮಾಲ್ದಾರೆ ಗ್ರಾಮದಲ್ಲಿ ಈ ಘಟನೆ ನಡೆದಿದ್ದು, ಗೋಣಿಕೊಪ್ಪಲು ಪ್ರೌಢಶಾಲೆಯ ಶಿಕ್ಷಕ ಶಿವರಾಮ್ ಅವರ ಮೇಲೆ ಕಾಡಾನೆ ದಾಳಿಗೆ ಯತ್ನಿಸಿದ್ದು, ಅದೃಷ್ಟವಶಾತ್ ಅಪಾಯದಿಂದ ಪಾರಾಗಿದ್ದಾರೆ.

ಶಿವರಾಮ್ ಅವರು ಜಾತಿ ಗಣತಿ ಸಮೀಕ್ಷೆ ನಡೆಸಲು ಅವರೆಗುಂಡ ಅರಣ್ಯ ಪ್ರದೇಶದ ಮೂಲಕ ಮಾಲ್ದಾರೆ ಗ್ರಾಮಕ್ಕೆ ಬೈಕ್‌ನಲ್ಲಿ ಪ್ರಯಾಣಿಸುತ್ತಿದ್ದರು. ಗ್ರಾಮದ ದುಬಾರೆ ಬುಡಕಟ್ಟು ಭಾಗದಲ್ಲಿ ಸಮೀಕ್ಷೆ ಕಾರ್ಯ-ಕ್ಕೆ ನಿಯೋಜಿಸಲಾಗಿತ್ತು.

ಶಿವರಾಮ್ ಅವರು ಬೈಕ್ ನಲ್ಲಿ ತೆರಳುತ್ತಿದ್ದಾಗ ರಸ್ತೆಯಲ್ಲಿ ಒಂಟಿ ಆನೆಯೊಂದು ಅವರ ಮೇಲೆ ದಾಳಿಗೆ ಯತ್ನಿಸಿದೆ. ದಾಳಿಯಿಂದ ತಪ್ಪಿಸಿಕೊಳ್ಳುವ ಪ್ರಯತ್ನದಲ್ಲಿ ಅವರ ಬೈಕ್ ನಿಯಂತ್ರಣ ಕಳೆದುಕೊಂಡು ಕಳೆಗೆ ಬಿದ್ದಿದೆ. ಅವರ ಕಾಲಿಗೆ ಗಾಯಗಳಾಗಿದ್ದು, ಬೈಕ್ ಅನ್ನು ಅಲ್ಲಿಯೇ ಬಿಟ್ಟು ಓಡಿದ ಶಿವರಾಮ್ ಅವರು ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಘಟನೆಯ ಬಗ್ಗೆ ಸ್ಥಳೀಯರಿಗೆ ಮಾಹಿತಿ ನೀಡಲಾಗಿದ್ದು, ಶಿವರಾಮ್ ಅವರನ್ನು ತಕ್ಷಣವೇ ಗ್ರಾಮದ ಆಸ್ಪತ್ರೆಗೆ ಸ್ಥಳಾಂತರಿಸಲಾಯಿತು.

ವಿರಾಜಪೇಟೆ ತಾಲ್ಲೂಕು ತಹಶೀಲ್ದಾರ್ ಪ್ರವೀಣ್ ಕುಮಾರ್ ಮತ್ತು ಇತರ ಅಧಿಕಾರಿಗಳು ಆಸ್ಪತ್ರೆಗೆ ಭೇಟಿ ನೀಡಿ ಶಿಕ್ಷಕನ ಆರೋಗ್ಯ ವಿಚಾರಿಸಿದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**